ಸಂಪುಟ: 05 ಸಂಚಿಕೆ: 68 ಪುಟಗಳು: 08 ಗುರುವಾರ 22 ಮೇ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಪ್ರತಿಯೊಬ್ಬ ವ್ಯಕ್ತಿಯು ತನ್ನದೇ ಆದ ಶಕ್ತಿಯನ್ನು ಅಥವಾ ಸಾಮರ್ಥ್ಯವನ್ನು ಹೊಂದಿರುತ್ತಾನೆ. ಅದನ್ನು ಜಾಗೃತಗೊಳಿಸುವುದು ಅವಶ್ಯಕವಾಗಿದೆ.

## ನಮ್ಮ ಮೆಟ್ರೋ ನಿಲ್ದಾಣಗಳಲ್ಲಿ ಶೌಚಾಲಯ ಬಳಕೆ ಉಚಿತವಲ್ಲ!

• ಉದಯವಾಹಿನಿ, ಬೆಂಗಳೂರು

ನಮ್ಮ ಮೆಟ್ರೋ ನಿಲ್ದಾಣಗಳಲ್ಲಿ ಇನ್ನು ಮುಂದೆ ಶೌಚಾಲಯವು ಉಚಿತವಲ್ಲ. ಹಲವು ನಿಲ್ದಾಣಗಳಲ್ಲಿ ಶುಲ್ಕ ನಿಗದಿ ಪಡಿಸಲಾಗಿದೆ. ಬಿಎಂಆರ್‌ಸಿಎಲ್ ನಡೆಗೆ ಪ್ರಯಾಣಿಕರಿಂದ ಭಾರೀ ವಿರೋಧ ವ್ಯಕ್ತವಾಗಿದೆ. ನಮ್ಮ ಮೆಟ್ರೋ ಆರಂಭವಾದಾಗಿನಿಂದ ನಿಲ್ದಾಣಗಳಲ್ಲಿ ಪ್ರಯಾಣಿಕರಿಗೆ ಉಚಿತ ಶೌಚಾಲಯ ಸೌಲಭ್ಯ ನೀಡಲಾಗುತ್ತಿತ್ತು. ಸದ್ಯ ಏಕಾಏಕಿ ದರ ನಿಗದಿ ಮಾಡಿದೆ. ಈ ಬಗ್ಗೆ ಬಿಎಂಆರ್‌ಸಿಎಲ್ ಖಾಸಗಿ ಸಂಸ್ಥೆಯ ಜತೆ ಒಪ್ಪಂದ ಮಾಡಿಕೊಂಡಿದ್ದು, ಇನ್ನು ಮುಂದೆ ಆ ಸಂಸ್ಥೆಯೇ ಮೆಟ್ರೋ ನಿಲ್ದಾಣಗಳ ಶೌಚಾಲಯಗಳನ್ನು ನಿರ್ವಹಣೆ ಮಾಡಲಿದೆ.

**ಎಲ್ಲೆಲ್ಲಿ ದರ ನಿಗದಿ:** ದಕ್ಷಿಣ ಬೆಂಗಳೂರು ವ್ಯಾಪ್ತಿಯ ನಮ್ಮ ಮೆಟ್ರೋ ನಿಲ್ದಾಣಗಳಲ್ಲಿ ಸುಲಭ ಶೌಚಾಲಯ ಸಂಸ್ಥೆಯ ಜತೆ ಒಪ್ಪಂದ ಮಾಡಿಕೊಂಡಿದ್ದು, ಕೆಲ ನಿಲ್ದಾಣಗಳಲ್ಲಿ ಶೌಚಾಲಯಕ್ಕೆ ದರ ವಿಧಿಸಲಾಗುತ್ತಿದೆ ಎಂದು ಬಿಎಂಆರ್‌ಸಿಎಲ್ ಅಧಿಕಾರಿಗಳು ತಿಳಿಸಿದ್ದಾರೆ.

**ಎಷ್ಟಿದೆ ದರ:** ಮೂತ್ರ ವಿಸರ್ಜನೆಗೆ – 2 ರೂಪಾಯಿ ಮಲ ವಿಸರ್ಜನೆಗೆ – 5 ರೂಪಾಯಿ

ಈ ಬಗ್ಗೆ ಜೆಡಿಎಸ್ ಟ್ವೀಟ್ ಮಾಡಿ ಕಿಡಿಕಾರಿದೆ. ಗ್ಯಾರಂಟಿ ಯೋಜನೆಗಳಿಗಾಗಿ ನಮ್ಮ ಮೆಟ್ರೋ ಶೌಚಾಲಯಗಳಲ್ಲೂ ಕರ್ನಾಟಕ ಸರ್ಕಾರ ಕಲೆಕ್ಷನ್‌ಗೆ ಇಳಿದಿದೆ ಎಂದು ವಾಗ್ದಾಳಿ ನಡೆಸಿದೆ.

**ಪ್ರಯಾಣಿಕರಿಂದ ಆಕ್ರೋಶ:** ಪ್ರಸಕ್ತ ವರ್ಷ ಆರಂಭದಲ್ಲಿ ನಮ್ಮ ಮೆಟ್ರೋ ಟಿಕೆಟ್ ದರ ಭಾರೀ ಹೆಚ್ಚಳ ಮಾಡಿ ಪ್ರಯಾಣಿಕರ ಕೆಂಗಣ್ಣಿಗೆ ಗುರಿಯಾಗಿತ್ತು. ತೀವ್ರ ವಿರೋಧ ವ್ಯಕ್ತವಾದ ಹಿನ್ನೆಲೆ ದರ ತುಸು ಪರಿಷ್ಕರಣೆ ಮಾಡಿ ಸಮಾಧಾನ ನಾಟಕವಾಡಿತ್ತು. ದರ ಹೆಚ್ಚಳ ಮಾಡಿದ ಮೇಲೆ ಅಗತ್ಯ ಮೂಲಭೂತ ಸೌಲಭ್ಯ ನೀಡುವುದು ಬಿಎಂಆರ್‌ಸಿಎಲ್ ಕರ್ತವ್ಯವಾಗಿದೆ. ಆದರೆ, ಪ್ರಯಾಣಿಕರು ಬಳಸುವ ಶೌಚಾಲಯಕ್ಕೂ ದರ ನಿಗದಿ ಮಾಡಿದೆ. ಇದು ಪ್ರಯಾಣಿಕ ಆಕ್ರೋಶಕ್ಕೆ ಕಾರಣವಾಗಿದ್ದು, ಬಿಎಂಆರ್‌ಸಿಎಲ್ ನಡೆಯನ್ನು ಖಂಡಿಸಿದ್ದಾರೆ.

## ಬೀದಿ ನಾಯಿ ಕಚ್ಚಿದರೆ ಬಿಬಿಎಂಪಿ ಕೊಡುತ್ತೆ ಕಾಸು

• ಉದಯವಾಹಿನಿ, ಬೆಂಗಳೂರು

ರಾಜ್ಯ ರಾಜಧಾನಿ ಬೆಂಗಳೂರಿನ ನಾನಾ ಕಡೆಗಳಲ್ಲಿ ಬೀದಿ ನಾಯಿಗಳ ಉಪಟಳ ಮುಂದುವರಿಯುತ್ತಲೇ ಇದೆ. ಆಹಾರ ಅವಶೇಷಗಳನ್ನೊಳಗೊಂಡ ತ್ಯಾಜ್ಯ, ಮಾಂಸದಂಗಡಿಗಳ ತ್ಯಾಜ್ಯ ರಸ್ತೆ ಬದಿ ಎಸೆಯುತ್ತಿರುವುದು ಬೀದಿ ನಾಯಿಗಳ ಕೇಂದ್ರೀಕರಣಕ್ಕೆ ಹಾಗೂ ಹೆಚ್ಚಳಕ್ಕೆ ಕಾರಣವಾಗುತ್ತಿದೆ. ಆಹಾರ ಲಭ್ಯತೆ ಕುಸಿಯುವಾಗ ಬೀದಿ ನಾಯಿಗಳು ಆಕ್ರಮಣವೆಸಗುತ್ತಿವೆ. ಗ್ರೇಟರ್ ಬೆಂಗಳೂರು (ಬಿಬಿಎಂಪಿ) ವ್ಯಾಪ್ತಿಯಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದೆ. ನಾಯಿ ಕಡಿತಕ್ಕೆ ತುತ್ತಾಗುವವರ ಸಂಖ್ಯೆಯೂ ಏರುಗತಿಯಲ್ಲಿ ಸಾಗುತ್ತಿದೆ. ಬೆಂಗಳೂರಿನ ವಿವಿಧೆಡೆ ನಿರಂತರವಾಗಿ ಬೀದಿ ನಾಯಿಗಳ ಸಂತಾನಶಕ್ತಿ ಹರಣ ಶಸ್ತ್ರಚಿಕಿತ್ಸೆ (ಎಬಿಸಿ) ಕೈಗೊಳ್ಳುವ ಪ್ರಕ್ರಿಯೆ ನಡೆಯುತ್ತಲೇ ಇದೆ. ಆದರೆ ಸಮಸ್ಯೆ ಮಾತ್ರ ಸಂಪೂರ್ಣವಾಗಿ ಬಗೆ ಹರಿದಂತೆ ಕಾಣುತ್ತಿಲ್ಲ. ಬೀದಿ ನಾಯಿಗಳಿಗೆ ಎಆರ್‌ವಿ ಹಾಕುವ ಪ್ರಕ್ರಿಯೆಯೂ ಸಮರ್ಪಕವಾಗಿ ನಡೆಯದೇ ಇರುವುದರಿಂದ ಬೀದಿ ನಾಯಿಗಳು ಸಾರ್ವಜನಿಕರಿಗೆ ಅಪಾಯಕಾರಿಯಾಗಿ ಪರಿಣಮಿಸಿವೆ. ಶ್ವಾನ ಕಡಿತಕ್ಕೆ ತುತ್ತಾಗುವುದು, ಬೀದಿ ನಾಯಿಗಳ ಕಿರುಚಾಟ, ಅವುಗಳ ಹಾವಳಿ ಸೇರಿದಂತೆ ನಿತ್ಯ 50ಕ್ಕೂ ಹೆಚ್ಚು ದೂರುಗಳು ಪಶುಪಾಲನಾ ವಿಭಾಗಕ್ಕೆ ಬರುತ್ತಿವೆ.

## ಹಂಗಾಮಿ ಡಿಜಿ ಐಜಿಪಿಯಾಗಿ ಡಾ.ಎಂ.ಎ. ಸಲೀಂ ನೇಮಕ

• ಉದಯವಾಹಿನಿ, ಬೆಂಗಳೂರು

ರಾಜ್ಯ ಪೊಲೀಸ್ ಮಹಾನಿರ್ದೇಶಕ (ಡಿಜಿ ಐಜಿಪಿ) ಡಾ. ಅಲೋಕ್ ಮೋಹನ್ ಅವರು ಇಂದು ಅಂದರೆ ಮೇ 21, 2025ರಂದು ಸೇವೆಯಿಂದ ನಿವೃತ್ತರಾಗಿದ್ದಾರೆ. ಇದರಿಂದಾಗಿ, ಮುಂದಿನ ಡಿಜಿ ಐಜಿ ಯಾರು ಎಂಬ ಪ್ರಶ್ನೆ ಉದ್ಭವಿಸಿದೆ. ಈ ಸಂದರ್ಭದಲ್ಲಿ, 1993ನೇ ಕರ್ನಾಟಕ ಕೇಡರ್‌ನ ಐಪಿಎಸ್ ಅಧಿಕಾರಿ ಹಾಗೂ ಹಾಲಿ ಸಿಐಡಿ ಡಿಜಿಪಿ ಡಾ.ಎಂ.ಎ. ಸಲೀಂ ಅವರನ್ನು ಹಂಗಾಮಿ ಡಿಜಿ ಐಜಿಪಿಯಾಗಿ ನೇಮಿಸಿ ಸರಕಾರ ಆದೇಶ ಹೊರಡಿಸಿದೆ. ಮೂಲಗಳ ಪ್ರಕಾರ, ಡಿಜಿಐಪಿ ಹುದ್ದೆಗೆ ಸೇವಾ ಹಿರಿತನದ ಆಧಾರದ ಮೇಲೆ ಅಗ್ನಿಶಾಮಕ ದಳ ಮತ್ತು ತುರ್ತು ಸೇವೆಗಳ ಡಿಜಿಪಿ ಪ್ರಶಾಂತ್ ಕುಮಾರ್ ಠಾಕೂರ್ ಹಾಗೂ ಡಾ.ಎಂ.ಎ. ಸಲೀಂ ಅವರ ಹೆಸರುಗಳು ಮುಂಚೂಣಿಯಲ್ಲಿವೆ. ಆದರೆ ಸರಕಾರವು ಸಲೀಂ ಅವರನ್ನು ಈ ಹುದ್ದೆಗೆ ಆಯ್ಕೆ ಮಾಡಲು ಒಲವು ಹೊಂದಿದೆ ಎನ್ನಲಾಗಿದೆ. ಆದರೆ ಸೇವಾ ಜೇಷ್ಠತೆಯ ನಿಯಮಗಳು ಇದಕ್ಕೆ ಅಡ್ಡಿಯಾಗಿವೆ. ಡಾ.ಎಂ.ಎ ಸಲೀಂ ಅವರು ಪ್ರಶಾಂತ್ ಕುಮಾರ್ ಠಾಕೂರ್ ಅವರಿಗಿಂತ ಒಂದು ವರ್ಷ ಕಡಿಮೆ ಸೇವಾ ಹಿರಿತನ ಹೊಂದಿರುವುದರಿಂದ, ಅವರನ್ನು ನೇಮಕ ಮಾಡಿದರೆ ಕಾನೂನು ತೊಡಕುಗಳು ಎದುರಾಗಬಹುದು ಎಂಬುದೂ ಸರಕಾರದ ಚಿಂತೆಯಾಗಿದೆ. ಈ ನಡುವೆ, ಡಾ.ಎಂ.ಎ. ಸಲೀಂ ಅವರನ್ನು ಹಂಗಾಮಿ ಡಿಜಿಪಿಯಾಗಿ ನೇಮಿಸುವ ಮೂಲಕ ರಾಜ್ಯ ಸರಕಾರವು ತಾತ್ಕಾಲಿಕ ಪರಿಹಾರ ಕಂಡುಕೊಂಡಿದೆ. ಆದರೆ, ಡಿಜಿ ಐಜಿಪಿ ಹುದ್ದೆಗೆ ಯಾರು ಆಯ್ಕೆಯಾಗಲಿದ್ದಾರೆ ಎಂಬುದು ಇನ್ನೂ ಅಂತಿಮವಾಗಿಲ್ಲ. ಬೆಂಗಳೂರಿನ ವಿಶೇಷ ಪೊಲೀಸ್ ಆಯುಕ್ತರಾಗಿ ಸೇವೆ ಸಲ್ಲಿಸಿದ್ದಾರೆ.

- ಬೆಂಗಳೂರಿನಲ್ಲಿ ಮಳೆ ಅವಾಂತರ, ಸಿಎಂ, ಡಿಸಿಎಂ ಸಿಟಿ ರೌಂಡ್ಸ್
- ಬೆಂಗಳೂರಿನ ಹಲವು ಕಡೆಗಳಿಗೆ ಬಸ್‌ನಲ್ಲಿ ಸಂಚಾರ ಮಾಡಿ ಪರಿಶೀಲನೆ
- ಅಧಿಕಾರಿಗಳಿಗೆ ಕಠಿಣ ಸೂಚನೆ

# ಸಿಎಂ ಸಿಟಿ ರೌಂಡ್ಸ್ ನಾಟಕ ತಪ್ಪುವುದೇ ಜಲ ಕಂಟಕ





• ಉದಯವಾಹಿನಿ, ಬೆಂಗಳೂರು

ಕೆಲವು ದಿನಗಳಿಂದ ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಸುರಿಯುತ್ತಿರುವ ಭಾರಿ ಮಳೆಗೆ ನಗರದ ಜನತೆ ತತ್ತರಿಸಿ ಹೋಗಿದ್ದು, ನಗರದ ಹಲವು ಪ್ರದೇಶಗಳಲ್ಲಿ ಮಳೆಯಿಂದ ಉಂಟಾಗಿರುವ ಪರಿಸ್ಥಿತಿಯನ್ನು ಸಿಎಂ ಸಿದ್ದರಾಮಯ್ಯ ನಗರಪ್ರದಕ್ಷಿಣೆ ಮಾಡಿ ಅವಲೋಕಿಸಿದರು. ಇಂದು ಬೆಳಗ್ಗೆಯಿಂದಲೇ ನಗರದ ಹಲವು ಮಳೆ ನೀರು ಪ್ರವಾಹ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿದ ಸಿದ್ದರಾಮಯ್ಯ ನಾಗರಿಕರಿಂದ ಅಹವಾಲು ಸ್ವೀಕರಿಸಿದರು. ಈ ವೇಳೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಬೆಂಗಳೂರಿನ ಶಾಸಕರು ಉಪಸ್ಥಿತರಿದ್ದರು.

ಬೆಂಗಳೂರಿನ ಯಲಹಂಕ, ಎಚ್‌ಬಿಆರ್ ಲೇಔಟ್, ಮಾನ್ಯತಾ ಟೆಕ್ ಪಾರ್ಕ್, ವಡ್ಡರಪಾಳ್ಯ ಲೇಔಟ್, ಗೆದ್ದಲಹಳ್ಳಿ, ಸಾಯಿ ಲೇಔಟ್ ಗಳಲ್ಲಿ ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಭೇಟಿ ನೀಡಿ ಪರಿಸ್ಥಿತಿ ಅವಲೋಕಿಸಿದರು. ಯಲಹಂಕದಲ್ಲಿ ರಾಜ ಕಾಲುವೆ ಒತ್ತುವರಿ ಸ್ಥಳ ಪರಿಶೀಲಿಸಿದ ಮುಖ್ಯಮಂತ್ರಿಗಳು ಮುಲಾಜಿಲ್ಲದೆ ಒತ್ತುವರಿ ತೆರವುಗೊಳಿಸುವಂತೆ ಸೂಚಿಸಿದರು. ಈ ವೇಳೆ ಮಾನ್ಯತಾ ಟೆಕ್, ಇಬ್ಸ್, ಮ್ಯಾನ್ ಫೋ ಹಾಗೂ ಕಾರ್ಲೆ ಖಾಸಗಿ ಬಿಲ್ಡರ್ ಗಳು ರಾಜಕಾಲುವೆ ಒತ್ತುವರಿ ಮಾಡಿರುವುದನ್ನು ಅಧಿಕಾರಿಗಳು ವಿವರಿಸಿದರು.

ಈ ವೇಳೆ ಅಧಿಕಾರಿಗಳ ವಿರುದ್ಧವೇ ಗರಂ ಆದ ಸಿಎಂ ಸಿದ್ದರಾಮಯ್ಯ, ಒತ್ತುವರಿ ಮಾಡಿಕೊಂಡಿರುವವರ ವಿರುದ್ಧ ನೋಟಿಸ್ ಕೊಟ್ಟಿಲ್ಲವೇ, ಒತ್ತುವರಿ ಆಗಿರುವುದನ್ನು ನೋಡಿಕೊಂಡು ಕುಳಿತಿದ್ದೀರಾ ಎಂದು ಖಾರವಾಗಿ ಪ್ರಶ್ನಿಸಿದರು. ಬಳಿಕ ಎಷ್ಟೇ ದೊಡ್ಡ ಬಿಲ್ಡರ್ ಆಗಿದ್ದರೂ ಮುಲಾಜು ನೋಡಬೇಡಿ, ರಾಜಕಾಲುವೆ ಒತ್ತುವರಿ ತೆರವುಗೊಳಿಸಿ ಎಂದು ಸ್ಪಷ್ಟ ಸೂಚನೆ ನೀಡಿದರು.

ಬಳಿಕ ಹೆಚ್ ಬಿಆರ್ ಲೇಔಟ್‌ನ ರಾಜಕಾಲುವೆಯ ಹರಿವಿನ ಹಾದಿಯಲ್ಲಿ ರೈಲ್ವೇ ಟ್ರಾಕ್ ಇರುವ ಕಡೆ ಆಗಿರುವ ಬಾಟಲ್ ನೆಕ್ ಸರಿ ಪಡಿಸಲು, ವಿಸ್ತರಿಸಲು ಸಿಎಂ ಸೂಚನೆ ನೀಡಿದರು. ಮಳೆ ಬಾಧಿತ ಪ್ರದೇಶಗಳಲ್ಲಿ ಬೇಸ್‌ಮೆಂಟ್‌ಪಾರ್ಕಿಂಗ್, ಕೆಳ ಹಂತದಲ್ಲಿ ಮನೆ ನಿರ್ಮಾಣಕ್ಕೆ ಅವಕಾಶ ನೀಡದಂತೆ ಟೌನ್‌ಪ್ಲಾನಿಂಗ್‌ನಲ್ಲಿ ಬದಲಾವಣೆ ತರುವ ದಿಕ್ಕಿನಲ್ಲಿ ಸೂಚನೆ ನೀಡಿದರು.

ರಾಜಕಾಲುವೆ ವಿಸ್ತೀರ್ಣ 29 ಮೀಟರ್. ಆದರೆ ಗೆದ್ದಲಹಳ್ಳಿಯ ಕಾಲುವೆ ಬಾಟಲ್ ನೆಕ್ ಇದ್ದು ಕೇವಲ 8 ಮೀಟರ್ ಇದೆ. ಆದ್ದರಿಂದ ಮೇಲಿನಿಂದ ರಾಜಕಾಲುವೆಯಲ್ಲಿ ಹರಿದು ಬರುವ ನೀರು ಈ ಬಾಟಲ್ ನೆಕ್ ನಲ್ಲಿ ಓವರ್ ಫ್ಲೋ ಆಗಿ ಸಾಯಿ ಲೇಔಟ್ ಗೆ ನುಗ್ಗುತ್ತದೆ ಎನ್ನುವುದು ಸಮಸ್ಯೆ. ಆದ್ದರಿಂದ 8 ಮೀಟರ್ ಬಾಟಲ್ ನೆಕ್ ಇರುವ ರೈಲ್ವೇ ವೆಂಟ್ ಅನ್ನು ವಿಸ್ತರಿಸಲು ಸೂಚನೆ ನೀಡಿದರು.

ಮಳೆ ಮತ್ತು ಪ್ರವಾಹ ಪೀಡಿತ ಸ್ಥಳ ವೀಕ್ಷಿಸಿದ ಮುಖ್ಯಮಂತ್ರಿಗಳು, ಸಾಯಿ ಲೇಔಟ್ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಮತ್ತು ಸದಸ್ಯರಿಂದ ಸಮಸ್ಯೆ ಆಲಿಸಿ, ಮನವಿ ಸ್ವೀಕರಿಸಿದರು. ಬಳಿಕ ಮನವಿಯಲ್ಲಿರುವ ಸಮಸ್ಯೆಗಳ ಬಗ್ಗೆ ಗಂಭೀರ ಗಮನ ಹರಿಸಿ ತಕ್ಷಣಕ್ಕೆ ಸಾಧ್ಯವಿರುವ ಪರಿಹಾರ ಕಾಮಗಾರಿಗಳನ್ನು ಕೈಗೊಳ್ಳುವಂತೆ ಸೂಚನೆ ನೀಡಿದರು. ಈ ವೇಳೆ ಸ್ಥಳೀಯರು ಈ ಪ್ರದೇಶದಲ್ಲಿ ಸೂಕ್ತ ಮೂಲಭೂತ ಸೌಕರ್ಯಗಳೇ ಇಲ್ಲ ಎಂದು ಸಿಎಂ ಸಿದ್ದರಾಮಯ್ಯ ಗಮನಕ್ಕೆ ತಂದರು.



1. ಸಿದ್ದರಾಮಯ್ಯ ಮತ್ತು ಡಿಕೆ ಶಿವಕುಮಾರ್ ಅವರ ಸಂಭಾವ್ಯ ಬೈಗುಳದಿಂದ ಬಿಬಿಎಂಪಿ ಅಧಿಕಾರಿಗಳು ಬಚಾವ್
2. ಭಾರತೀಯ ಹವಾಮಾನ ಇಲಾಖೆಯ ಮಾಹಿತಿಯಂತೆ ಹೆಚ್ಚಿನ ಐಟಿ ಸಂಸ್ಥೆಗಳು, ವರ್ಕ್ ಫ್ರಂ ಹೋಮ್ ಘೋಷಣೆ
3. ಬೆಂಗಳೂರಿನಲ್ಲಿ 2022ರಲ್ಲಿ 299ಮಿಮೀ ಮಳೆಯಾಗಿತ್ತು. 10 ವರ್ಷಗಳಲ್ಲಿ ಇದು ಎರಡನೇ ಬಾರಿ ಹೆಚ್ಚಿನ ಮಳೆ

### ಶಾಸಕ ಸ್ಥಾನಕ್ಕೆ ರಾಜೀನಾಮೆ ಕೊಡ್ತೇನೆ

ಕಳೆದ 12 ವರ್ಷಗಳಿಂದ ಈ ಸಮಸ್ಯೆ ಇದೆ. ಈ ಕ್ಷೇತ್ರದ ಶಾಸಕನಾಗಿ ಜನರ ಸಮಸ್ಯೆಗಳಿಗೆ ಸ್ಪಂದಿಸಿದ್ದೇನೆ. ಮಳೆ ಬಂದ ದಿನವೂ ಬೆಳಗ್ಗೆ 5 ಗಂಟೆಗೆ ಸ್ಥಳಕ್ಕೆ ಬಂದಿದ್ದೇನೆ. ಅವರಿಗೆ ಬೇಕಾದ ಮೂಲಭೂತ ಸೌಕರ್ಯಗಳನ್ನ ಒದಗಿಸುತ್ತಿದ್ದೇನೆ. ಸಿಎಂಗೆ ಇಲ್ಲಿರುವ ಸಮಸ್ಯೆ ಬಗ್ಗೆ ವಿವರವಾಗಿ ಹೇಳಿದ್ದೇನೆ. ಸಮಸ್ಯೆ ಬಗೆಹರಿಸುವ ಬಗ್ಗೆ ಭರವಸೆ ನೀಡಿದ್ದಾರೆ. ಮುಂದಿನ ಮಳೆಗಾಲದೊಳಗೆ ಸಮಸ್ಯೆ ಬಗೆಹರಿಯದಿದ್ರೆ ನನ್ನ ಶಾಸಕ ಸ್ಥಾನಕ್ಕೆ ರಾಜೀನಾಮೆ ಕೊಡುತ್ತೇನೆ ಎಂದು ಬೈರತಿ ಬಸವರಾಜ್ ತಿಳಿಸಿದರು.



ಕೆಆರ್ ಪುರಂ ಕ್ಷೇತ್ರದ ಮಳೆ ಹಾನಿ ಪ್ರದೇಶಗಳಿಗೆ ಸಿಎಂ ಸಿದ್ದರಾಮಯ್ಯ ಭೇಟಿ ನೀಡದ ಬಗ್ಗೆ ಬೇಸರ ವ್ಯಕ್ತಪಡಿಸಿದ ಅವರು, ಮಳೆ ಹಾನಿಯಾಗಿರೋ ಜಾಗಕ್ಕೆ ಬರಲಿಲ್ಲ ಅಂದ್ರೆ, ನಾನೇನು ಮಾಡೋಕೆ ಆಗುತ್ತದೆ. ಹಿಂದಿನ ಬಸವರಾಜ್ ಬೊಮ್ಮಾಯಿ ಸಿಎಂ ಆಗಿದ್ದಾಗ ಮಳೆ ನೀರು ತಡೆಯಲು ಕಾಮಗಾರಿ ಆರಂಭ ಆಗಿತ್ತು. ಇದಕ್ಕೆ ಈಗ ಹಣ ಪಾವತಿ ಮಾಡಿಲ್ಲ. ಅನುದಾನ ಕೊಟ್ರೆ ಸಮಸ್ಯೆ ಬಗೆಹರಿಯುತ್ತದೆ ಎಂದು ತಿಳಿಸಿದರು.

### ಟಿವಿ ಕ್ಯಾಮೆರಾ ಮುಂದೆ ಶೋ ಮಾಡೋದಕ್ಕ

ಇನ್ನು ಸಿಎಂ ಸಿದ್ದರಾಮಯ್ಯ ಅವರು ಮಳೆ ಹಾನಿ ಪರಿಶೀಲನೆ ನಡೆಸುವ ಸ್ಥಳಗಳಿಗೆ ತೆರಳಿದ್ದ ಸಂದರ್ಭದಲ್ಲಿ ರೆಡ್ ಕಾರ್ಪೆಟ್ ಹಾಕಲಾಗಿದೆ ಎಂದು ವಿಧಾನಪರಿಷತ್ ಬಿಜೆಪಿ ಸದಸ್ಯ ಸಿಟಿ ರವಿ ಟ್ವೀಟ್ ಮಾಡಿದ್ದಾರೆ. ಮಳೆ ಹಾನಿಯಿಂದ ಜನ ತೊಂದರೆ ಅನುಭವಿಸುತ್ತಾ ಇದ್ದಾರೆ. ರಸ್ತೆಗಳಲ್ಲಿ ನೀರು ಹರಿದು ಮನೆಗಳು ಮುಳುಗುತ್ತಿವೆ. ಇಂತಹ ಸಂಕಷ್ಟದ ಸಮಯದಲ್ಲಿ ಎಚ್ ಆರ್ ಬಿ ಆರ್ ಲೇಔಟ್ ಗೆ ಭೇಟಿ ನೀಡಲು ಬರುವ ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ಅವರಿಗೆ ರೆಡ್ ಕಾರ್ಪೆಟ್ ಸ್ವಾಗತ. ಸಿಎಂ, ಡಿಸಿಎಂ ಅವರೇ ನೀವು ಜನರ ನೋವು ಕೇಳೋದಕ್ಕೆ ಬರುತ್ತಾ ಇರೋದ ಅಥವಾ ಟಿವಿ ಕ್ಯಾಮೆರಾ ಮುಂದೆ ಶೋ ಮಾಡೋದಕ್ಕ ಜನ ಸಂಕಷ್ಟದಲ್ಲಿ ಇರುವಾಗ ಅದನ್ನು ರಾಜಕೀಯ ಶೋಕಿ ಪ್ರದರ್ಶನವನ್ನಾಗಿ ಮಾಡೋದು ಯಾವ ಬಗೆಯ ಮಾನವೀಯತೆ' ಎಂದು ಸಿ.ಟಿ ರವಿ ಪ್ರಶ್ನಿಸಿದ್ದಾರೆ.



### ರೆಡ್ ಕಾರ್ಪೆಟ್ ಹಾಕಿ ಸ್ವಾಗತಕ್ಕೆ ಸಜ್ಜಾದ ಅಧಿಕಾರಿ

ನಗರ ಪ್ರದಕ್ಷಿಣೆಗೆ ಸಿಎಂ ಮತ್ತು ಡಿಸಿಎಂ ಬರುತ್ತಿರುವುದರಿಂದ ಅಧಿಕಾರಿಯೊಬ್ಬರು ರೆಡ್ ಕಾರ್ಪೆಟ್ ಹಾಕಿ ಅವರ ಸ್ವಾಗತಕ್ಕೆ ಸಜ್ಜಾಗಿದ್ದರು. ಆದರೆ, ಸಾರ್ವಜನಿಕರ ಆಕ್ರೋಶದ ಬೆನ್ನಲ್ಲೇ ಅದನ್ನು ಕೂಡಲೇ ತೆಗೆದು ಹಾಕಲಾಯಿತು. ಅಸಲಿಗೆ, ರೆಡ್ ಕಾರ್ಪೆಟ್ ಹಾಕುತ್ತಿರುವುದು ಸಿಎಂ ಅಥವಾ ಡಿಸಿಎಂ ಕಚೇರಿಗೆ ಗೊತ್ತೇ ಇರಲಿಲ್ಲ. ಮುಖ್ಯಮಂತ್ರಿ ಮತ್ತು ಡಿಸಿಎಂ, ಮಳೆ ಮತ್ತು ಪ್ರವಾಹ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ, ಜನರ ಸಮಸ್ಯೆಗಳನ್ನು ಆಲಿಸಲು ಬರುತ್ತಿರುವುದು. ಇಂತಹ ಸಮಯದಲ್ಲಿ ಇದೆಲ್ಲಾ ಬೇಕಿತ್ತಾ ಎಂದು ಸಾರ್ವಜನಿಕರು ಆಕ್ರೋಶವನ್ನು ಹೊರಹಾಕಿದ್ದಾರೆ. ಜನರ ಆಕ್ರೋಶದ ಮಿಡಿತವನ್ನು ಅರಿತ ಬಿಬಿಎಂಪಿ ಪೂರ್ವ ವಲಯದ ಆಯುಕ್ತರು ಕೂಡಲೇ ರೆಡ್ ಕಾರ್ಪೆಟ್ ಅನ್ನು ತೆಗೆಸಿದ್ದಾರೆ. ರೆಡ್ ಕಾರ್ಪೆಟ್ ತೆಗೆಸುವ ಮೂಲಕ, ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿಕೆ ಶಿವಕುಮಾರ್ ಅವರ ಸಂಭಾವ್ಯ ಬೈಗುಳದಿಂದ ಬಿಬಿಎಂಪಿ ಅಧಿಕಾರಿಗಳು ಬಚಾವ್ ಆಗಿದ್ದಾರೆ.

## ಆನೆಗಳನ್ನು ಕೊಟ್ಟು ಮಹತ್ವದ 1 ಮನವಿ ಇಟ್ಟ ಕರ್ನಾಟಕ ಸರ್ಕಾರ

• ಉದಯವಾಹಿನಿ, ಬೆಂಗಳೂರು

ಪವನ್ ಕಲ್ಯಾಣ ಮೂಲಕ ಆಂಧ್ರಪ್ರದೇಶಕ್ಕೆ ಆನೆಗಳನ್ನು ಕೊಟ್ಟಿರುವ ಕರ್ನಾಟಕ ಸರ್ಕಾವು 1 ಮನವಿ ಇಟ್ಟಿದೆ. ಅದು ತುಂಗಭದ್ರಾ ನದಿಯ ಕುರಿತಾಗಿದ್ದು, ಈ ಮೂಲಕ ಮಹತ್ವ ಪಡೆದುಕೊಂಡಿದೆ. ಆಂಧ್ರಪ್ರದೇಶಕ್ಕೆ ಕರ್ನಾಟಕದ ಕುಮ್ಕಿ ಆನೆಗಳನ್ನು ಹಸ್ತಾಂತರಿಸುವ ಕಾರ್ಯಕ್ರಮದಲ್ಲಿ ಶಿವಕುಮಾರ್ ಅವರು ಮಾತನಾಡಿ, ಆನೆಗಳ ಹಸ್ತಾಂತರ ಕಾರ್ಯಕ್ರಮಕ್ಕೆ ಬಂದಿರುವ ಉಪಮುಖ್ಯಮಂತ್ರಿ ಪವನ್ ಕಲ್ಯಾಣ್ ಅವರಿಗೆ ಶುಭವಾಗಲಿ. ಆಂಧ್ರ ಮತ್ತು ನಮ್ಮ ರಾಜ್ಯದ ಸಂಬಂಧ ಇನ್ನೂ ಉತ್ತಮವಾಗಲಿ. ನಮ್ಮ ಪಾಲಿನ 24 ಟಿಎಂಸಿ ನೀರಿನ ಬಳಕೆ ಬಗ್ಗೆ ನಿಮ್ಮ (ಆಂಧ್ರ ಪ್ರದೇಶ) ಮುಖ್ಯಮಂತ್ರಿಗಳೊಂದಿಗೆ ಚರ್ಚೆ ಮಾಡಬೇಕಿದೆ. ನೀವೇ ಮುಂದೆ ನಿಂತು ಸಭೆ ನಿಗದಿ ಮಾಡಿ ಎಂದು ಹೇಳಿದರು.

**ಆಂಧ್ರಪ್ರದೇಶದ ವಿಘ್ನಗಳು ನಿವಾರಣೆಯಾಗಲಿ:** ಆನೆ ವಿನಾಯಕನ ಸ್ವರೂಪ. ಆಂಧ್ರಪ್ರದೇಶದ ಎಲ್ಲಾ ವಿಘ್ನಗಳನ್ನು ನಿವಾರಣೆ ಮಾಡಲಿ ಎಂದು ತರಬೇತುಗೊಂಡ ಆರು ಆನೆಗಳನ್ನು ಆ ಸರ್ಕಾರದವರಿಗೆ ಹಸ್ತಾಂತರ ಮಾಡುತ್ತಿದ್ದೇವೆ. ಇನ್ನು ಎಷ್ಟು ಬೇಕಾದರೂ ಆನೆಗಳನ್ನು ಕಳುಹಿಸುವ ಶಕ್ತಿ ನಮ್ಮ ರಾಜ್ಯಕ್ಕಿದೆ. ಕರ್ನಾಟಕದಲ್ಲಿ ಪ್ರಾಣಿ ಸಂಪತ್ತು ಹೇರಳವಾಗಿದೆ. ಮುಂದಿನ ಪೀಳಿಗೆ ಈ ಸಂಪತ್ತನ್ನು ಕಣ್ತುಂಬಿಕೊಳ್ಳಬೇಕು. ನನ್ನೂರು ತಮಿಳುನಾಡು ಅಂಚಿಗೆ ಹೊಂದಿಕೊಂಡಿದೆ. ನನ್ನ ಮನೆಯ ಗೋಡೆಗೆ 50 ಕ್ಕೂ ಹೆಚ್ಚು ಆನೆಗಳು ಒತ್ತರಿಸಿಕೊಂಡು ಹೋಗಿದ್ದನ್ನು ನಾನು ಬಾಲ್ಯದಲ್ಲಿ ನೋಡಿದ್ದೇನೆ. ಇದರ ವಿಡಿಯೋ ಕೂಡ ನನ್ನ ಬಳಿಯಿದೆ ಎಂದು ತಿಳಿಸಿದರು.

**ಕಬಿನಿ ಬಳಿ ವನ್ಯ ಜೀವಿ ಸಂಪತ್ತು ಹೆಚ್ಚಿದೆ:** ನಮ್ಮ ಅರಣ್ಯ ಇಲಾಖೆಯವರು ಜಂಗಲ್ ಲಾಡ್ಜಸ್ ಮತ್ತು ರೆಸಾರ್ಟ್ ಅವರಿಗೆ ಮಾತ್ರ ಕಬಿನಿ ಅರಣ್ಯ ಪ್ರದೇಶದಲ್ಲಿ ಸಫಾರಿ ಮಾಡಲು ನಿಯಂತ್ರಣ ತೆಗೆದುಕೊಂಡಿದ್ದಾರೆ. ನನ್ನ ಹುಟ್ಟುಹಬ್ಬ ಆಚರಣೆ ಮಾಡಲು ಕಬಿನಿಗೆ ಹೋಗಿದ್ದೆ. ಅರಣ್ಯ ಇಲಾಖೆಯವರು ಹುಲಿ, ಚಿರತೆ ತೋರಿಸಿದರು. ನಂತರ ಹಿನ್ನಿರಿನಲ್ಲಿ ಸುಮಾರು 150 ಕ್ಕೂ ಹೆಚ್ಚು ಆನೆಗಳನ್ನು ಕೇವಲ ಅರ್ಧ ಗಂಟೆ ಸಮಯದಲ್ಲಿ ತೋರಿಸಿದರು. ಎರಡು ಲಕ್ಷಕ್ಕೂ ಹೆಚ್ಚು ಜಿಂಕೆಗಳಿವೆ ಎಂದು ಅಧಿಕಾರಿಗಳು ಹೇಳಿದರು ಎಂದರು.



**ಪವನ್ ಕಲ್ಯಾಣ್ ಒಪ್ಪುತ್ತಾರಾ**

### ಆನೆ ತರಬೇತಿ ಕಷ್ಟದ ಕೆಲಸ

ಆನೆಗಳನ್ನು ತರಬೇತುಗೊಳಿಸುವುದೇ ಕಷ್ಟದ ಕೆಲಸ. ಈ ಹಿಂದೆ ನೀವು ಖೆಡ್ಡಾ ಬಗ್ಗೆ ಸಿನಿಮಾ ನೋಡಿರಬಹುದು. ಆನೆಗಳನ್ನು ಓಡಿಸಿಕೊಂಡು ಬಂದು ಹಿಡಿದು ಪಳಗಿಸುತ್ತಿದ್ದ ಕಾಲವದು. ನಮ್ಮ ವನ್ಯಸಂಪತ್ತನ್ನು ಕಾಪಾಡುವ ಕೆಲಸ ಮಾಡಬೇಕು. ಅರಣ್ಯ ಸಚಿವ ಈಶ್ವರ್ ಖಂಡ್ರೆಯವರ ಬಳಿ ಜಗಳ ಮಾಡಿ, ನಮ್ಮ ಭಾಗದ ಶೇಕಡಾ 50 ರಷ್ಟು ಕಾಡಂಚಿಗೆ ರೈಲ್ವೇ ಕಂಬಿ ಅಳವಡಿಸಲಾಗಿದೆ. ನಮ್ಮ ಅನೇಕ ರೈತರು ಆನೆಗಳಿಂದ ಜೀವ ಕಳೆದುಕೊಂಡಿದ್ದಾರೆ ಎಂದರು.

## ಜ್ಯೋತಿ ಮಲ್ಹೋತ್ರ ಜೊತೆ ಲಿಂಕ್ : ಪಾಕ್ ರಾಯಭಾರಿ ಕಚೇರಿಯ ಅಧಿಕಾರಿ

● ಭಾರತೀಯ ಸೇನೆಗಳ ಚಲನವಲನ ಸೇರಿದಂತೆ ಸೂಕ್ಷ್ಮ ಮಾಹಿತಿ ಪಾಕಿಸ್ತಾನಕ್ಕೆ ಸೋರಿಕೆ ● ಪಾಕಿಸ್ತಾನದ ವೀಸಾ ಪಡೆಯಲು ಹೋದಾಗ ಪರಿಚಯ

• ಉದಯವಾಹಿನಿ, ಹೊಸದಿಲ್ಲಿ

ಪಪಾಕಿಸ್ತಾನ ರಾಯಭಾರಿ ಕಚೇರಿಯ ಅಧಿಕಾರಿಯೊಬ್ಬರನ್ನು 24 ಗಂಟೆಯೊಳಗೆ ದೇಶ ಬಿಟ್ಟು ಹೋಗುವಂತೆ ಭಾರತದ ವಿದೇಶಾಂಗ ಇಲಾಖೆಯ ಸಚಿವಾಲಯ ಸೂಚಿಸಿದೆ. ಈ ಬಗ್ಗೆ ಮಾಧ್ಯಮ ಪ್ರಕಟಣೆಯನ್ನು ಹೊರಡಿಸಲಾಗಿದ್ದು, ಇದಕ್ಕೆ ಕಾರಣವನ್ನೂ ತಿಳಿಸಲಾಗಿದೆ.

ಈ ಅಧಿಕಾರಿಯನ್ನು Persona Non Grata ಎಂದು ಘೋಷಿಸಲಾಗಿದೆ. ವೀಸಾ ಸೇವೆಗಳ ನೆಪದಲ್ಲಿ ಬೇಹುಗಾರಿಕಾ ಚಟುವಟಿಕೆ ನಡೆಸುತ್ತಿದ್ದಾರೆ ಎನ್ನುವ ಆರೋಪ ಆ ಅಧಿಕಾರಿಯ ಮೇಲಿದೆ. ಭಾರತದಲ್ಲಿರುವ ಪಾಕಿಸ್ತಾನದ ರಾಜತಾಂತ್ರಿಕರು ಅಥವಾ ಅಧಿಕಾರಿಗಳು ತನ್ನ ಸ್ಥಾನಮಾನವನ್ನು ದುರುಪಯೋಗಪಡಿಸಿಕೊಳ್ಳದಂತೆ ಭಾರತ ಸರ್ಕಾರ ಎಚ್ಚರಿಕೆ ನೀಡಿದೆ.

ಕಳೆದ ಮೇ 13ರಂದು ಭಾರತ ಸರ್ಕಾರ ಇದೇ ರೀತಿಯ ಚಟುವಟಿಕೆಗಳಿಗಾಗಿ ರಾಯಭಾರಿ ಕಚೇರಿಯ ಅಧಿಕಾರವನ್ನು ಮನೆಗೆ ಕಳುಹಿಸಿತ್ತು. ಅದಕ್ಕೆ ಪ್ರತಿಯಾಗಿ, ಪಾಕಿಸ್ತಾನವು ಭಾರತದ ರಾಯಭಾರ ಕಚೇರಿಯ ಅಧಿಕಾರಿಯೊಬ್ಬರನ್ನು Persona Non Grata ಎಂದು ಘೋಷಿಸಿ, ಭಾರತಕ್ಕೆ ವಾಪಸ್ ಕಳುಹಿಸಿತ್ತು.

**ಪಾಕಿಸ್ತಾನಕ್ಕೆ ಬೇಹುಗಾರಿಕೆ ನಡೆಸಿದ ಆರೋಪ**

ಸಚಿವಾಲಯದ ಮೂಲಗಳ ಪ್ರಕಾರ, ದೇಶ ಬಿಟ್ಟು ತೊಲಗಲು ಸೂಚಿಸಿರುವ ಪಾಕಿಸ್ತಾನದ ವ್ಯಕ್ತಿಯ ಹೆಸರು ಅಹ್ಸಾನ್ - ಉರ್ - ರಹೀಮ್ - ಅಲಿಯಾಸ್ - ಡ್ಯಾನಿಶ್ ಎಂದು ಗುರುತಿಸಲಾಗಿದೆ. ಬೇಹುಗಾರ್ತಿ ಜ್ಯೋತಿ ಮಲ್ಹೋತ್ರ ಪ್ರಕರಣದಲ್ಲಿ ಇವನ ಹೆಸರು ತುಳುಕು ಹಾಕಲಾಗುತ್ತಿದೆ. ಭಾರತೀಯ ಸೇನೆಗಳ ಚಲನವಲನ ಸೇರಿದಂತೆ ಸೂಕ್ಷ್ಮ ಮಾಹಿತಿಯನ್ನು ಈತ, ಪಾಕಿಸ್ತಾನಕ್ಕೆ ಸೋರಿಕೆಯನ್ನು ಮಾಡುತ್ತಿದ್ದಾನೆ ಎನ್ನುವ ಆರೋಪ ಈತನ ಮೇಲಿದೆ.



### Persona Non Grata ಅಂದರೆ ಏನು

ಇದೊಂದು ರಾಜತಾಂತ್ರಿಕವಾಗಿ ಬಳಸುವ ಪದ, ಒಂದು ವ್ಯಕ್ತಿಯನ್ನು ಒಂದು ದೇಶ ಅಥವಾ ಸಂಸ್ಥೆ ಔಪಚಾರಿಕವಾಗಿ ನಿರಾಕರಿಸಿದಾಗ ಈ ಪದವನ್ನು ಬಳಸಲಾಗುತ್ತದೆ. ಇದೊಂದು ಲ್ಯಾಟಿನ್ ಪದವಾಗಿದೆ. ಒಂದು ದೇಶವು ಇನ್ನೊಂದು ದೇಶದ ರಾಯಭಾರಿ, ದೂತ ಅಥವಾ ಪ್ರತಿನಿಧಿಯನ್ನು ಸಕಾರಣಗಳಿಂದ / ಗೂಢಚರ್ಯೆ ನಡೆಸಿದ ಸಂದರ್ಭದಲ್ಲಿ ಆತ/ಆಕೆಯನ್ನು ನಂಬಿಕೆಗೆ ಅರ್ಹವಾದ ವ್ಯಕ್ತಿಯಲ್ಲ ಎಂದು ದೇಶ ಬಿಟ್ಟು ಹೋಗಲು ಬಳಸುವ ಪದ ಇದಾಗಿದೆ.

ಹರ್ಯಾಣದ ಹಿಸ್ಸಾರ್ ನಲ್ಲಿ ಯೂಟ್ಯೂಬರ್ ಜ್ಯೋತಿ ಮಲ್ಹೋತ್ರಳನ್ನು ಬಂಧಿಸಲಾಗಿತ್ತು. ಭಾರತ ಮತ್ತು ಪಾಕಿಸ್ತಾನದ ನಡುವೆ ಉದ್ವಿಗ್ನತೆ ತೀವ್ರಗೊಂಡಿದ್ದ ಸಂದರ್ಭದಲ್ಲಿ, ಪಾಕಿಸ್ತಾನಕ್ಕೆ ಬೇಹುಗಾರಿಕೆ ನಡೆಸಿದ ಆರೋಪದ ಮೇಲೆ ಹಲವರನ್ನು ಬಂಧಿಸಲಾಗಿತ್ತು. ಜ್ಯೋತಿ, 2023ರಲ್ಲಿ ದೆಹಲಿಯ ರಾಯಭಾರಿ ಕಚೇರಿಯಲ್ಲಿ ಅಹ್ಸಾನ್ ರಹೀಮ್ ಅನ್ನು ಭೇಟಿಯಾಗಿದ್ದರು ಎಂದು ಹೇಳಲಾಗುತ್ತಿದೆ.

ಅಂದಿನಿಂದ ಆಕೆಯ ಬಂಧನವಾಗುವರೆಗೂ ಇಬ್ಬರೂ ಸಂಪರ್ಕದಲ್ಲಿದ್ದರು. ಆತ, ಆಕೆಗೆ ಹ್ಯಾಂಡ್ಲರ್ ಆಗಿ ಕೆಲಸ ಮಾಡುತ್ತಿದ್ದ ಮತ್ತು ಆಕೆಯನ್ನು ಪಾಕಿಸ್ತಾನದ ಗುಪ್ತಚರ ಅಧಿಕಾರಿಗಳಿಗೆ ಪರಿಚಯಿಸಿದ್ದೇ ಅಹ್ಸಾನ್ ರಹೀಮ್ ಎಂದು ಎಫ್‌ಐಆರ್ ನಲ್ಲಿ ದಾಖಲಾಗಿದೆ. ಏಪ್ರಿಲ್ 22ರ ಪಹಲ್ಗಾಮ್ ದಾಳಿಯ ನಂತರ, ಭಾರತ ನಡೆಸಿದ್ದ ನಾಲ್ಕು ದಿನಗಳ ಆಪರೇಷನ್ ಸಿಂಧೂರ್ ಕಾರ್ಯಾಚರಣೆಯ ವೇಳೆಯೂ, ಜ್ಯೋತಿ ಮಲ್ಹೋತ್ರ ಆತನ ಜೊತೆ ಸಂಪರ್ಕದಲ್ಲಿದ್ದ ಎಂದು ಉಲ್ಲೇಖವಾಗಿದೆ.

ಪಾಕಿಸ್ತಾನದ ಬೇಹುಗಾರಿಕೆ ಅಧಿಕಾರಿಗಳು ಈಕೆಯನ್ನು ಉತ್ತಮ ಮಾಹಿತಿ ಕೊಡುವವಳು ಎಂದು ಗೌರವದಿಂದ ನೋಡಿಕೊಳ್ಳುತ್ತಿದ್ದರು ಎಂದು ಹೇಳಲಾಗುತ್ತಿದೆ.

ಪಾಕಿಸ್ತಾನದ ವೀಸಾ ಪಡೆಯಲು ಹೋದಾಗ ಈಕೆಗೆ ಆತನ ಪರಿಚಯವಾಗಿದೆ. ಭಾರತದ ವಿದೇಶಾಂಗ ಸಚಿವಾಲಯ, ಭಾರತದಲ್ಲಿರುವ ಪಾಕ್ ರಾಜತಾಂತ್ರಿಕ ಸಿಬ್ಬಂದಿಗಳು ಅವರಿಗೆ ಕೊಟ್ಟಿರುವ ಸ್ಥಾನಮಾನ, ಸವಲತ್ತುಗಳನ್ನು ದುರುಪಯೋಗಪಡಿಸಿಕೊಳ್ಳದಂತೆ ನೋಡಿಕೊಳ್ಳಿ ಎಂದು ಪಾಕಿಸ್ತಾನದ ಹೈಕಮಿಷರ್‌ಗೆ ಸೂಚಿಸಲಾಗಿದೆ.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹9,742/Gram24ct ₹8,930/Gram22ct | ಬೆಳ್ಳಿ: ₹100.00/Gram

## ಪ್ರಸ್ತಾವಿತ ಅಬಕಾರಿ ಸುಂಕ ಹೆಚ್ಚಳಕ್ಕೆ ರಾಜ್ಯ ವೈನ್ ವ್ಯಾಪಾರಿಗಳ ವಿರೋಧ

• **ಉದಯವಾಹಿನಿ, ಬೆಂಗಳೂರು**

ರಾಜ್ಯ ಸರ್ಕಾರವು ಅಬಕಾರಿ ಪರವಾನಗಿ ಶುಲ್ಕವನ್ನು ಹೆಚ್ಚಿಸುವ ಕರಡು ಪ್ರಸ್ತಾವನೆಯನ್ನು ಮಂಡಿಸಿರುವುದು, ವೈನ್ ವ್ಯಾಪಾರಿಗಳನ್ನು ಕೆರಳಿಸಿದೆ. ಶುಲ್ಕ ಹೆಚ್ಚಳವನ್ನು ವಿರೋಧಿಸುತ್ತಿರುವ ವೈನ್ ವ್ಯಾಪಾರಿಗಳ ಸಂಘಗಳ ಒಕ್ಕೂಟವು ಗುರುವಾರ ಎಲ್ಲಾ ಜಿಲ್ಲಾ ಸದಸ್ಯರೊಂದಿಗೆ ಸಭೆ ನಡೆಸಿ ಮುಂದಿನ ನಿರ್ಧಾರದ ಬಗ್ಗೆ ಚರ್ಚಿಸಿದೆ. ಕರಡು ಅಧಿಸೂಚನೆಯನ್ನು ಮೇ 15 ರಂದು ಹೊರಡಿಸಲಾಗಿದ್ದು, ಜುಲೈ 1 ರಿಂದ ಜಾರಿಗೆ ಬರಲಿದೆ. ಈ ವೇಳೆ ಪರವಾನಗಿ ನವೀಕರಣ ಆರಂಭವಾಗುತ್ತವೆ. ಈ ವಿಷಯದ ಬಗ್ಗೆ ಚರ್ಚಿಸಲು ಸದಸ್ಯರು ಬುಧವಾರ ಮಧ್ಯಾಹ್ನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿದ್ದಾರೆ ಎಂದು ಕರ್ನಾಟಕ ವೈನ್ ವ್ಯಾಪಾರಿಗಳ ಸಂಘದ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಗೋವಿಂದರಾಜ್ ಹೆಗ್ಡೆ ತಿಳಿಸಿದ್ದಾರೆ. ಗುರುವಾರ, ಅಬಕಾರಿ ಪರವಾನಗಿ ಶುಲ್ಕದಲ್ಲಿ ಹೆಚ್ಚಳದ ಕುರಿತು ಮುಂದಿನ ಕ್ರಮದ ಕುರಿತು ಚರ್ಚಿಸಲು ಎಲ್ಲಾ ಜಿಲ್ಲಾ ಸಂಘಗಳ ಮುಖ್ಯಸ್ಥರನ್ನು ಸಭೆಗೆ ಕರೆಯಲಾಗಿದೆ ಎಂದು ಅವರು ಹೇಳಿದರು, ಸಂಘವು ಇನ್ನೂ ಡ್ರೈ ಡೇ ಆಚರಿಸುವ ಬಗ್ಗೆ ನಿರ್ಧರಿಸಿಲ್ಲ ಎಂದು ಹೇಳಿದರು.

## ಸೂಟ್‌ಕೇಸ್‌ನಲ್ಲಿ ಅಪರಿಚಿತ ಬಾಲಕಿ ಶವ ಪತ್ತೆ

• **ಉದಯವಾಹಿನಿ, ಆನೇಕಲ್**

ಸೂಟ್‌ಕೇಸ್‌ನಲ್ಲಿ ಅಪರಿಚಿತ ಬಾಲಕಿ ಶವ ಪತ್ತೆಯಾಗಿರುವ ಘಟನೆ ಬೆಂಗಳೂರು ಹೊರವಲಯ ಆನೇಕಲ್ ತಾಲ್ಲೂಕಿನ ಚಂದಾಪುರ ರೈಲ್ವೆ ಬ್ರಿಡ್ಜ್ ಬಳಿ ನಡೆದಿದೆ. ಹೊಸೂರು ಮುಖ್ಯರಸ್ತೆಗೆ ಹೊಂದಿಕೊಂಡಿರುವ ರೈಲ್ವೆ ಬ್ರಿಡ್ಜ್ ಬಳಿ ಸುಮಾರು ಹತ್ತು ವರ್ಷದ ಬಾಲಕಿಯ ಮೃತದೇಹವಿದ್ದ ಸೂಟ್‌ಕೇಸ್ ಪತ್ತೆಯಾಗಿದೆ. ಚಲಿಸುವ ರೈಲಿನಿಂದ ಸೂಟ್‌ಕೇಸ್ ಎಸೆದಿರುವ ಶಂಕೆ ವ್ಯಕ್ತವಾಗಿದೆ. ಸ್ಥಳಕ್ಕೆ ಸೂರ್ಯನಗರ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಬೈಯಪ್ಪನಹಳ್ಳಿ ರೈಲ್ವೆ ಪೊಲೀಸರ ಆಗಮನದ ಬಳಿಕ ಸೂಟ್‌ಕೇಸ್ ಪರಿಶೀಲನೆ ನಡೆಯಲಿದೆ.

## ಬಿಜೆಪಿ ಅಧಿಕಾರಕ್ಕೆ ಬಂದರೆ ಗ್ರೇಟರ್ ಬೆಂಗಳೂರು ರದ್ದು: ಆರ್. ಅಶೋಕ

• **ಉದಯವಾಹಿನಿ, ಬೆಂಗಳೂರು**

'ಬಿಜೆಪಿ ಮುಂದಿನ ಬಾರಿ ಅಧಿಕಾರಕ್ಕೆ ಬಂದರೆ ಗ್ರೇಟರ್ ಬೆಂಗಳೂರು ರದ್ದು ಮಾಡಲಾಗುವುದು ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ತಿಳಿಸಿದರು.ಸುದ್ದಿಗೋಷ್ಠಿಯಲ್ಲಿ ಬುಧವಾರ ಅವರು ಮಾತನಾಡಿದ ಅವರು, ಮುಳುಗುವ ಬೆಂಗಳೂರು, ಗ್ರೇಟರ್ ಬೆಂಗಳೂರು, ಗ್ರೇಟೆಸ್ಟ್ ಬೆಂಗಳೂರುಗಳೆಲ್ಲ ಬೇಡ. ಕೆಂಪೇಗೌಡರು ಕಟ್ಟಿದ ಬೆಂಗಳೂರು ಬೇಕು ಎಂದರು.

ನಗರದಲ್ಲಿ ಏನು ಹಾನಿಯಾಗಿದೆ ಎಂದು ನೋಡಿ ಕೂಡಲೇ ಸರಿಪಡಿಸಲು ಅನುದಾನ ಬಿಡುಗಡೆ ಮಾಡುವುದಿದ್ದರೆ ಪ್ರದಕ್ಷಿಣೆ ಹಾಕಬೇಕು. ಖಜಾನೆ ಬರಿದು ಮಾಡಿಕೊಂಡು ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಸುತ್ತುವುದರಲ್ಲಿ ಅರ್ಥವಿಲ್ಲ. ಎಲ್ಲಾ ರಸ್ತೆಗಳಲ್ಲಿ ಗುಂಡಿ ಬಿದ್ದು ಸುರಂಗಗಳಾಗಿವೆ. ಈಗ ಹೆಗ್ಗಣಗಳು ಓಡಾಡುತ್ತಿವೆ. ಇನ್ನೊಂದು ತಿಂಗಳು ಕಳೆದರೆ ಬೈಕ್, ಆರು ತಿಂಗಳು ಕಳೆದರೆ ಕಾರುಗಳೇ ಅದರೊಳಗೆ ಹೋಗಬಹುದು. ಇಂಥ ಪರಿಸ್ಥಿತಿ ಇರುವಾಗ ಹೊಸ ಸುರಂಗ ಮಾರ್ಗ ಯೋಜನೆ ಯಾಕೆ ಬೇಕು ಎಂದು ಕೇಳಿದರು. ಪಂಪ್‌ಗಳ ಮೂಲಕ ನೀರು ಹೊರ ಹಾಕುವುದನ್ನು ಇಲ್ಲಿವರೆಗೆ ನೋಡಿದ್ದೆವು. ಈಗ ರಾಜ್ಯ ಸರ್ಕಾರವು ಹೊಸ ತಂತ್ರಜ್ಞಾನವನ್ನು ಕಂಡು ಹಿಡಿದಿದೆ. ಜೆಸಿಬಿ ಮೂಲಕ ನೀರು ತಳ್ಳುವ ತಂತ್ರಜ್ಞಾನ ಅದು ಎಂದರು.

## ಬೆಂಗಳೂರಿಗೆ ಟೈಟಾನಿಕ್ ಬೋಟ್ ಇಳಿಸಿದ ಊಬರ್ : ಎಲ್ಲಾಕ್ಕಿಂತ ಇದೇ Faster!?

• **ಉದಯವಾಹಿನಿ, ಬೆಂಗಳೂರು**


ರಾಜ್ಯ ರಾಜಧಾನಿಯಲ್ಲಿ ಕಳೆದ 2 ದಿನಗಳಲ್ಲಿ ಭಾರೀ ಮಳೆಯಾಗಿದ್ದು, ನಗರದ ರಸ್ತೆಗಳಲ್ಲಿ ನದಿಯಂತೆ ನೀರು ಹರಿಯುತ್ತಿದೆ. ಬೆಂಗಳೂರಿಗೆ ಟೈಟಾನಿಕ್ ಬೋಟ್‌ನ ವ್ಯವಸ್ಥೆಯಿದೆ ಎನ್ನುವ ಫೋಟೋವನ್ನು ಊಬರ್ ಕಂಪನಿ ತನ್ನ ಇನ್‌ಸ್ಟಾಗ್ರಾಂ ಖಾತೆಯಲ್ಲಿ ಹಂಚಿಕೊಂಡಿದೆ. ಬೆಂಗಳೂರಿನ ಈ ಪರಿಸ್ಥಿತಿಯನ್ನು ಊಬರ್ ಕಂಪನಿ ವ್ಯಂಗ್ಯ ಮಾಡಿ, ಟೈಟಾನಿಕ್‌ಬೋಟ್‌ನ್ನು ರಸ್ತೆಗೆ ಇಳಿಸಿದೆ. ಈ ರೀತಿಯಾಗಿ ಬೆಂಗಳೂರಿನ ತುಂಬೆಲ್ಲಾ ರಸ್ತೆಗಳಲ್ಲಿ ನೀರು ತುಂಬಿಕೊಂಡಿರುವುದನ್ನು ಊಬರ್ ಕಂಪನಿಯು ಲೇವಡಿ ಮಾಡಿದೆ. ಊಬರ್ ಸರ್ವಿಸ್ ಲಿಸ್ಟ್‌ನಲ್ಲಿ ಈ ಫೋಟೋ ಹಾಕಿದ್ದು, ಒಂದು ನಿಮಿಷದಲ್ಲಿ ವೇಗವಾಗಿ ಟೈಟಾನಿಕ್ ಬೋಟ್ ಸೇವೆ ಸಿಗಲಿದೆ. ಕೇವಲ 149 ರೂ. ಹಣಕ್ಕೆ ಈ ಸೇವೆ ಒದಗಿಸಲಾಗುವುದು ಎಂದು ಬೆಂಗಳೂರಿನ ಸ್ಥಿತಿಯನ್ನ ಆಡಿಕೊಂಡಿದ್ದಾರೆ. ಈ ಪೋಸ್ಟ್ ಸೋಶಿಯಲ್ ಮೀಡಿಯಾದಲ್ಲಿ ಭಾರೀ ವೈರಲ್ ಆಗುತ್ತಿದೆ. ಕಳೆದ ಎರಡು ದಿನಗಳಲ್ಲಿ ಸುರಿದ ಮಳೆಯಿಂದ ಬೆಂಗಳೂರಿನ ಹಲವು ಪ್ರದೇಶಗಳು ಜಲಾವೃತವಾಗಿದ್ದವು. ಇನ್ನು ಕೆಲವು ರಸ್ತೆಗಳಲ್ಲಿ ನೀರು ತುಂಬಿಕೊಂಡು ವಾಹನ ಸವಾರರು ಪರದಾಡಿದರು. ಇದೀಗ ಬೆಂಗಳೂರಿನ ಈ ಸ್ಥಿತಿಯನ್ನು ಊಬರ್ ಕಂಪನಿ ಟ್ರೋಲ್ ಮಾಡಿದೆ.

## ಇಸ್ರೋದಲ್ಲಿ ಕೆಲಸ ಕೊಡಿಸುವುದಾಗಿ ನಂಬಿಸಿ 1.03 ಕೋಟಿ ರೂ ವಂಚಿಸಿದ್ದ ಮಹಿಳೆ

• **ಉದಯವಾಹಿನಿ, ಬೆಂಗಳೂರು**

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ ಸೇರಿದಂತೆ ವಿವಿಧ ಸಂಸ್ಥೆಗಳಲ್ಲಿ ಉದ್ಯೋಗ ಕೊಡಿಸುವುದಾಗಿ ಹೇಳಿ ಪುರುಷರನ್ನು ವಂಚಿಸುತ್ತಿದ್ದ ಮಹಿಳೆಯೊಬ್ಬಳಿಗೆ ನಗರದ ನ್ಯಾಯಾಲಯ ನಿರೀಕ್ಷಣಾ ಜಾಮೀನು ನಿರಾಕರಿಸಿದೆ. ಕಸ್ಟಡಿ ವಿಚಾರಣೆ ಅಗತ್ಯವಿರುವುದರಿಂದ ಆಕೆಯನ್ನು ವಶಕ್ಕೆ ಪಡೆಯಲಾಗಿದೆ.

ಇತ್ತೀಚಿನ ಪ್ರಕರಣದಲ್ಲಿ ಗೋವಿಂದರಾಜನಗರದ ನಿವಾಸಿ ವಿನುತಾ ಎಂ.ಇ., ಇಸ್ರೋದಲ್ಲಿ ಗ್ರಾಫಿಕ್ ಡಿಸೈನರ್ ಕೆಲಸ ಕೊಡಿಸುವುದಾಗಿ ಭರವಸೆ ನೀಡಿ ವ್ಯಕ್ತಿಯೊಬ್ಬರಿಂದ 1.03 ಕೋಟಿ ರೂಪಾಯಿ ವಂಚಿಸಿದ್ದಳು. ಕೋರ್ಟ್ ನೀಡಿರುವ ನೋಟಿಸ್ ಪ್ರಕಾರ, ಅರ್ಜಿದಾರರು ಮೇ 9 ರಂದು ತನಿಖಾ ಅಧಿಕಾರಿ ಮುಂದೆ ಹಾಜರಾಗಬೇಕಾಗಿತ್ತು.



ಅರ್ಜಿದಾರರಿಗೆ ಹಾಜರಾಗಲು ನೋಟಿಸ್ ನೀಡಲಾಗಿತ್ತು, ಆದರೆ ವಿನುತಾ ನೋಟೀಸ್‌ಗೆ ಕ್ಯಾರೇ ಅಂದಿರಲಿಲ್ಲ. ಯಾವುದೇ ವ್ಯಕ್ತಿಗೆ ಅಂತಹ ನೋಟಿಸ್ ನೀಡಿದಾಗ, ಆ ವ್ಯಕ್ತಿ ಸೂಚನೆಯನ್ನು ಪಾಲಿಸುವುದು ಕರ್ತವ್ಯವಾಗಿರುತ್ತದೆ ಎಂದು ಹೇಳುವ BNSSನ ಸೆಕ್ಷನ್ 35(4) ಉಲ್ಲೇಖಿಸುತ್ತದೆ. ಅರ್ಜಿದಾರರು ನಿರೀಕ್ಷಣಾ ಜಾಮೀನಿಗೆ ಅರ್ಹರಲ್ಲ ಎಂದು ನ್ಯಾಯಾಲಯ ದೃಢವಾಗಿ ಅಭಿಪ್ರಾಯಪಟ್ಟಿದೆ ಎಂದು 66 ನೇ ಹೆಚ್ಚುವರಿ ನಗರ ಸಿವಿಲ್ ಮತ್ತು ಸೆಷನ್ಸ್ ನ್ಯಾಯಾಲಯ ನ್ಯಾಯಾಧೀಶ ಜಯಪ್ರಕಾಶ್ ಎ ಹೇಳುತ್ತಾರೆ. ಅರ್ಜಿದಾರರು ಇಸ್ರೋ ಹೆಸರಿನಲ್ಲಿ ಸೃಷ್ಟಿಸಿದ ನಕಲಿ ನೇಮಕಾತಿ ಪತ್ರಗಳನ್ನು ಅವರಿಂದ ವಶಪಡಿಸಿಕೊಳ್ಳಬೇಕೆಂದು ಐಒ ವರದಿ ಸೂಚಿಸುತ್ತದೆ ಎಂದು ನ್ಯಾಯಾಲಯ ಹೇಳಿದೆ. ಅರ್ಜಿದಾರರು ಕೊಳ್ಳೇಗಾಲ ಪೊಲೀಸ್ ಠಾಣೆ ಮತ್ತು ಚಿಕ್ಕಮಗಳೂರು ಪಟ್ಟಣ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಇದೇ ರೀತಿಯ ಪ್ರಕರಣಗಳಲ್ಲಿ ಭಾಗಿಯಾಗಿದ್ದಾರೆ ಎಂದು ಹೇಳುತ್ತದೆ. ಇದು ಅವರು ನಿಯಮಿತ ಅಪರಾಧಿ ಎಂದು ತೋರಿಸುತ್ತದೆ. ಈ ಸಂದರ್ಭಗಳಲ್ಲಿ, ಅವರು ಜಾಮೀನಿನ ಮೇಲೆ ಬಿಡುಗಡೆಯಾದರೆ, ಇದೇ ರೀತಿ ಅಪರಾಧಗಳನ್ನು ಮುಂದುವರಿಸುವ ಸಾಧ್ಯತೆಯಿದೆ ಅಥವಾ ಪರಾರಿಯಾಗುವ ಸಾಧ್ಯತೆಯೂ ಇದೆ, ಹೀಗಾಗಿ ನಿರೀಕ್ಷಣಾ ಜಾಮೀನು ಪಡೆಯಲು ಅರ್ಹತೆ ಇಲ್ಲ ಎಂದು ನ್ಯಾಯಾಲಯ ಹೇಳಿದೆ.

# ಪಹಲ್ಗಾಮ್ ದಾಳಿ ಬಗ್ಗೆ ಅಧ್ಯಯನಕ್ಕೂ ಆಗ್ರಹ


### ದೇವರು, ಧರ್ಮ, ಪೂಜೆಯ ವಿಷಯದಲ್ಲಿ ರಾಜಕೀಯದ ಪ್ರಭಾವವನ್ನು ಪ್ರಶ್ನಿಸಿದ್ದಾರೆ

• **ಉದಯವಾಹಿನಿ, ಬೆಂಗಳೂರು**

ದೇವರು, ಧರ್ಮ ಬಿಜೆಪಿಯವರ ಆಸ್ತಿಯೇ ಪೂಜೆಯನ್ನು ಬಿಜೆಪಿಯವರು ಮಾತ್ರ ಮಾಡುವುದೇ ನೀರಿಗೆ, ಗಾಳಿಗೆ, ಬೆಳಕಿಗೆ ಜಾತಿ ಇದೆಯೇ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು.

ಮಾಜಿ ಪ್ರಧಾನಿ ರಾಜೀವ್ ಗಾಂಧಿ ಅವರ ಪುಣ್ಯಸ್ಮರಣೆ ನಿಮಿತ್ತ ಕೆಪಿಸಿಸಿ ಕಚೇರಿಯಲ್ಲಿ ಬುಧವಾರ ನಡೆದ ರಾಜೀವ್ ಗಾಂಧಿ ಅವರ ಭಾವಚಿತ್ರಕ್ಕೆ ಸಿಎಂ ಸಿದ್ದರಾಮಯ್ಯ, ಡಿಸಿಎಂ ಅವರು ಪುಷ್ಪ ನಮನ ಸಲ್ಲಿಸಿದರು. ನಂತರ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

ನಾವು ಏನೇ ಮಾಡಿದರೂ ಬಿಜೆಪಿಯವರು ಟೀಕೆ ಮಾಡುತ್ತಾರೆ. ಕೆಆರ್ ಎಸ್ ಬಳಿ ಕಾವೇರಿ ಆರತಿ ಕಾರ್ಯಕ್ರಮ ಮಾಡಲು ಮುಂದಾಗಿದ್ದೇವೆ. ಇದಕ್ಕೆ ಪೂರ್ವಭಾವಿಯಾಗಿ ಬೆಂಗಳೂರಿನ ಸ್ಯಾಂಕಿ ಕೆರೆಯಲ್ಲಿ ಕಾರ್ಯಕ್ರಮ ಮಾಡಲಾಯಿತು. ಸುಮಾರು 25 ಸಾವಿರ ಜನರು ಭಾಗವಹಿಸಿದ್ದರು. ಸ್ಥಳೀಯ ಶಾಸಕರು ಇದನ್ನು ನೋಡಿ ಗಾಬರಿಯಾಗಿದ್ದರು. ನಾವು ನಮ್ಮ ಕೆಲಸ ಮಾಡುತ್ತಿದ್ದೇವೆ. ಈ ವಿಚಾರದಲ್ಲಿ ರೈತ ಸಂಘದವರು ಟೀಕೆ ಮಾಡುತ್ತಿದ್ದಾರೆ. ಅವರನ್ನು ಕರೆದು ಮಾತನಾಡಲಾಗುವುದು.



ಟೀಕೆಗಳನ್ನು ಯಾರೂ ನಿಲ್ಲಿಸಲು ಸಾಧ್ಯವಿಲ್ಲ, ಟೀಕೆಗಳಿಲ್ಲದೇ ಯಾವುದೇ ಕೆಲಸಗಳು ಆಗುವುದಿಲ್ಲ ಎಂದರು.

**ಗ್ಯಾರಂಟಿ ಸಮಿತಿಗಳಿಂದ ಪಟ್ಟಾ ಖಾತೆ ಹಂಚಿಕೆ:** ಮುಂದಿನ ದಿನಗಳಲ್ಲಿ ಪಟ್ಟಾ ಖಾತೆ ಹಂಚಿಕೆಯನ್ನು ಅಧಿಕಾರಿಗಳು ಹಂಚಿಕೆ ಮಾಡುವುದಿಲ್ಲ. ಬದಲಾಗಿ ಪ್ರತಿ ಕ್ಷೇತ್ರದ ಗ್ಯಾರಂಟಿ ಸಮಿತಿಯ ಸದಸ್ಯರು ಜನರಿಗೆ ಖಾತೆಗಳನ್ನು ಹಂಚಿಕೆ ಮಾಡುತ್ತಿದ್ದಾರೆ. ಬೆಂಗಳೂರು ನಗರದಲ್ಲಿಯೂ ಇ-ಸ್ವತ್ತು ಖಾತೆಗಳ ಡಿಜಿಟಲೀಕರಣ ಮಾಡಲಾಗುತ್ತಿದೆ. ಇಲ್ಲಿಯೂ ಅದೇ ರೀತಿ ಹಂಚಿಕೆ ಮಾಡಲಾಗುವುದು. ಬಿಬಿಎಂಪಿ ತನ್ನ ಅಸ್ತಿತ್ವ ಕಳೆದು ಕೊಂಡಿದೆ. ಈಗ ಗ್ರೇಟರ್ ಬೆಂಗಳೂರು ಜಾರಿಗೆ ಬಂದಿದೆ. ಶೀಘ್ರದಲ್ಲಿಯೇ ಚುನಾವಣೆ ನಡೆಯಲಿದೆ.

ಮುಂದಕ್ಕೆ ಶಾಸಕರಾಗಬೇಕು ಎನ್ನುವ ಆಲೋಚನೆ ಇದ್ದವರು ಸ್ಥಳೀಯ ಸಂಸ್ಥೆ ಚುನಾವಣೆಗೆ ಸಿದ್ಧರಾಗಬೇಕು ಎಂದರು.

**ಪಹಲ್ಗಾಮ್ ದಾಳಿ ಬಗ್ಗೆ ಹೇಳಿದ್ದೇನು:** ಭಯೋತ್ಪಾದಕ ದಾಳಿ ಬಗ್ಗೆ ಚರ್ಚೆ ನಡೆಯುತ್ತಿವೆ. ಬಿ.ಕೆ.ಹರಿಪ್ರಸಾದ್

**ಭಯೋತ್ಪಾದಕ ದಾಳಿ ಬಗ್ಗೆ ಚರ್ಚೆ**

### ರಾಜೀವ್ ಗಾಂಧಿಯವರ ಹತ್ಯೆಯಿಂದ ದೇಶಕ್ಕೆ ದೊಡ್ಡ ನಷ್ಟ

**ರಾಜೀವ್ ಗಾಂಧಿ ಅವರ ಹತ್ಯೆಯಿಂದ ಸ್ತ್ರೀ ಶಕ್ತಿಗೆ, ಯುವ ಪೀಳಿಗೆ ಹಾಗೂ ಇಡೀ ದೇಶಕ್ಕೆ ದೊಡ್ಡ ನಷ್ಟವಾಗಿದೆ. ರಾಜೀವ್ ಗಾಂಧಿ ಅವರ ಬಗ್ಗೆ ಇಡೀ ಪ್ರಪಂಚದಲ್ಲಿಯೇ ಸಾಕಷ್ಟು ಒಲವಿತ್ತು. ಅವರನ್ನು ಇತರೇ ರಾಷ್ಟ್ರಗಳು ಅತ್ಯಂತ ಗೌರವದಿಂದ ನೋಡುತ್ತಿದ್ದರು. ಅಷ್ಟರ ಮಟ್ಟಿಗೆ ಅವರು ತಮ್ಮ ಆಧುನಿಕ ಚಿಂತನೆಗಳಿಂದ ಪ್ರಭಾವ ಬೀರಿದ್ದರು. ಇವರಿಂದ 18 ವರ್ಷಕ್ಕೆ ಮತದಾನದ ಹಕ್ಕು ದೊರೆಯಿತು, ಮಹಿಳೆಯರಿಗೆ ಸ್ಥಳೀಯ ಸಂಸ್ಥೆಯಲ್ಲಿ ಶೇ. 50 ರಷ್ಟು ಮೀಸಲಾತಿ ನೀಡಿದರು. ಪಕ್ಷಾಂತರ ವಿರೋಧಿ ಕಾಯ್ದೆಗೆ ಕಾನೂನು ತಂದರು. ದೆಹಲಿಗೆ ರಾಜ್ಯದ ಸ್ಥಾನಮಾನ ನೀಡಿದರು. ಹೀಗೆ ಹಲವಾರು ಕ್ರಾಂತಿಕಾರಕ ಬದಲಾವಣೆಗಳನ್ನು ಜಾರಿಗೆ ತಂದವರು ರಾಜೀವ್ ಗಾಂಧಿ ಎಂದು ಹೇಳಿದರು.**

ಅವರು ಹೇಳುವಂತೆ ಲೈನ್ ಆಫ್ ಕಂಟ್ರೋಲ್ ಇಂದ ಪಹಲ್ಗಾಮ್‌ಗೆ ಬರುವುದಕ್ಕೆ ಹತ್ತು ದಿನವಾಗುತ್ತದೆ ಎಂದು ಹೇಳಲಾಗುತ್ತದೆ. ಇದೆಲ್ಲಾ ನಡೆದಿದ್ದು ನಿಜವೇ ಎಂದು ನಾವು ಅಧ್ಯಯನ ಮಾಡಬೇಕಿದೆ. ನಮಗೆ ಪಕ್ಷಕ್ಕಿಂತ ದೇಶ ಮುಖ್ಯ. ಇದರ ಬಗ್ಗೆ ನೀವು ನಾವು ತಿಳಿದುಕೊಳ್ಳಬೇಕಿದೆ ಎಂದರು. ಜಿ. ಪರಮೇಶ್ವರ್ ಅವರ ಸಂಸ್ಥೆಗಳ ಮೇಲೆ ಇಡಿ ದಾಳಿ ಬಗ್ಗೆ ಕೇಳಿದಾಗ, ಇದರ ಬಗ್ಗೆ ನಾನು ಮಾಹಿತಿ ಪಡೆದು ಮಾತನಾಡುತ್ತೇನೆ. ಪರಮೇಶ್ವರ್ ಅವರು ಅತ್ಯಂತ ಸರಳ ವ್ಯಕ್ತಿ. ಅವರು ಯಾವುದೇ ತಪ್ಪು ಮಾಡಿರಲು ಸಾಧ್ಯವಿಲ್ಲ. ಎಂದರು. ಮೊದಲು ಒಂದು ಲ್ಯಾಂಡ್ ಲೈನ್ ಫೋನ್ ಸಂಪರ್ಕ ಪಡೆದು ಕೊಳ್ಳಲು ಸಂಸದರಿಂದ ಪತ್ರ ಪಡೆಯಬೇಕಿತ್ತು. ಯುವ ಕಾಂಗ್ರೆಸ್ ಅಧ್ಯಕ್ಷನಾದ ನಿನ್ನನು ಹೇಗೆ ಸಂಪರ್ಕಿಸುವುದು ಎಂದು ಹೇಳಿ ಜಾಫರ್ ಷರೀಫ್ ಅವರು ನನಗೆ ಫೋನ್ ಸಂಪರ್ಕ ಕೊಡಿಸಿದರು. ಸೆಲ್ ಫೋನ್ ತಂತ್ರಜ್ಞಾನ ಭಾರತಕ್ಕೆ ಬರಲು ರಾಜೀವ್ ಗಾಂಧಿ ಅವರು ಹಾಗೂ ಅವರಿಗೆ ಸಲಹೆಗಾರರಾಗಿದ್ದ ಸ್ಯಾಮ್ ಪಿತ್ರೋಡ ಅವರು ಕಾರಣ ಎಂದರು.

ಕಾವೇರಿ ಗಲಭೆ ವೇಳೆ ಎನ್ ಪಿಎಸ್ ಶಾಲೆಯಲ್ಲಿದ್ದ ಕಂಪ್ಯೂಟರ್‌ಗಳನ್ನು ಸುಟ್ಟು ಹಾಕಲಾಯಿತು. ಆಗ 1.50 ಲಕ್ಷ ಬೆಲೆ ಬಾಳುತ್ತಿತ್ತು. ಈಗ 15 – 20 ಸಾವಿರಕ್ಕೆಲ್ಲ ದೊರೆಯುತ್ತಿದೆ. ಐಟಿ ಕ್ರಾಂತಿಗೆ ನಾಂದಿ ಹಾಡಿದ ಆಧುನಿಕತೆಯ ಹರಿಕಾರ ರಾಜೀವ್ ಗಾಂಧಿ ಎಂದು ಬಣ್ಣಿಸಿದರು.

## ಕೆ.ಸಿ. ಜನರಲ್ ಆಸ್ಪತ್ರೆಯಲ್ಲಿ ಜೀವರಕ್ಷಕ ಔಷಧ: ಸಿಬ್ಬಂದಿ ಕೊರತೆ

• **ಉದಯವಾಹಿನಿ, ಬೆಂಗಳೂರು**

ಮಲ್ಲೇಶ್ವರಂನಲ್ಲಿರುವ ಸರ್ಕಾರಿ ಕೆ.ಸಿ. ಜನರಲ್ ಆಸ್ಪತ್ರೆಯಲ್ಲಿ ಕಂಡುಬಂದ ಹಲವಾರು ನ್ಯೂನತೆಗಳ ಕುರಿತು ಆರೋಗ್ಯ ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಹಾಗೂ ಆಯುಕ್ತರಿಗೆ ನೀಡಿದ ನೋಟಿಸ್‌ಗೆ ಉತ್ತರಿಸಲು ವಿಫಲರಾದ ಕಾರಣ ಲೋಕಾಯುಕ್ತರು ಸಮನ್ಸ್ ಜಾರಿ ಮಾಡಿದ್ದಾರೆ.

ಜೂನ್ 23 ರಂದು ಖುದ್ದಾಗಿ ಹಾಜರಾಗುವಂತೆ ನಿರ್ದೇಶಿಸಿದ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ್, ಸಮನ್ಸ್‌ಗೆ ಉತ್ತರಿಸಲು ವಿಫಲವಾದರೆ ವಾರಂಟ್ ಹೊರಡಿಸುವುದು ಅನಿವಾರ್ಯ ಎಂದು ಎಚ್ಚರಿಸಿದ್ದಾರೆ. ಆಸ್ಪತ್ರೆ ವಿರುದ್ಧ ಹಲವಾರು ದೂರುಗಳು ಕೇಳಿ ಬಂದ ಹಿನ್ನೆಲೆಯಲ್ಲಿ ನ್ಯಾಯಮೂರ್ತಿ ಪಾಟೀಲ್ ಮತ್ತು ಅವರ ತಂಡವು ನವೆಂಬರ್ 29, 2024 ರಂದು ಆಸ್ಪತ್ರೆಗೆ ಅನಿರೀಕ್ಷಿತ ಭೇಟಿ ನೀಡಿತು.



ಉದಯವಾಹಿನಿ ಚಿತ್ರ

**ಲೋಕಾಯುಕ್ತರು ಸಮನ್ಸ್ ಜಾರಿ**

ಜೀವರಕ್ಷಕ ಔಷಧಿಗಳಿಲ್ಲ, ವೈದ್ಯರು ಮತ್ತು ಸಿಬ್ಬಂದಿ ಸಮಯಕ್ಕೆ ಸರಿಯಾಗಿ ಕರ್ತವ್ಯಕ್ಕೆ ಹಾಜರಾಗುತ್ತಿಲ್ಲ, ಹಾಜರಾತಿ ಪುಸ್ತಕದಲ್ಲಿ ಸಹಿ ನಮೂದಿಸುತ್ತಿರಲಿಲ್ಲ, ಆಸ್ಪತ್ರೆಯಲ್ಲಿ ಔಷಧಿಗಳು ಲಭ್ಯವಿದ್ದರೂ ಖಾಸಗಿ ಅಂಗಡಿಗಳಿಂದ ಔಷಧಿಗಳನ್ನು ಖರೀದಿಸಲು ರೋಗಿಗಳಿಗೆ ಸೂಚಿಸುವುದು, ಲಂಚಕ್ಕೆ ಬೇಡಿಕೆ ಇಡುವುದು, ನೈರ್ಮಲ್ಯವನ್ನು ಕಾಪಾಡಿಕೊಳ್ಳದಿರುವುದು ಇತ್ಯಾದಿ ಸೇರಿದಂತೆ ಹಲವಾರು ನ್ಯೂನತೆಗಳಿರುವುದು ಕಂಡು ಬಂದಿತ್ತು.

**ಈ ವಿಷಯವನ್ನು ಅವರು ಆರೋಗ್ಯ, ಕುಟುಂಬ ಕಲ್ಯಾಣ ಇಲಾಖೆಯ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದರು. ಈ ಸಂಬಂಧ ಪ್ರಧಾನ ಕಾರ್ಯದರ್ಶಿ ಆಯುಕ್ತರಿಗೆ ವರದಿ ನೀಡುವಂತೆ ನೋಟಿಸ್ ನೀಡಲಾಗಿತ್ತು. ಆದರೂ ನೋಟಿಸ್‌ಗೆ ಉತ್ತರ ನೀಡಿರಲಿಲ್ಲ. ಹಾಗಾಗಿ ಜೂನ್ 23ರಂದು ಖುದ್ದು ಹಾಜರಾಗಿ ವರದಿಗೆ ಉತ್ತರ ನೀಡುವಂತೆ ಸಮನ್ಸ್ ಜಾರಿ ಮಾಡಲಾಗಿದೆ. ಈ ಸಮನ್ಸ್‌ಗೂ ಅವರು ಪ್ರತಿಕ್ರಿಯಿಸದಿದ್ದಲ್ಲಿ ವಾರಂಟ್ ನೀಡುವುದು ಅನಿವಾರ್ಯ ಎಂದು ಲೋಕಾಯುಕ್ತ ಪ್ರಕಟಣೆ ತಿಳಿಸಿದೆ.**

## 4 ಕುಮ್ಕಿ ಆನೆಗಳನ್ನು ಆಂಧ್ರಪ್ರದೇಶಕ್ಕೆ ಹಸ್ತಾಂತರಿಸಿದ ಸಿಎಂ

• **ಉದಯವಾಹಿನಿ, ಬೆಂಗಳೂರು**

ನೆರೆಯ ರಾಜ್ಯ, ಆಂಧ್ರಪ್ರದೇಶಕ್ಕೆ ರಾಜ್ಯದಿಂದ ನಾಲ್ಕು ಕುಮ್ಕಿ ಆನೆಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬುಧವಾರ ಹಸ್ತಾಂತರಿಸಿದ್ದಾರೆ.

ವಿಧಾನಸೌಧದ ಮುಂಭಾಗದ ಮೆಟ್ಟಿಲುಗಳ ಮೇಲೆ ನಡೆದ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಕೆಶಿ ಅವರು, ಆಂಧ್ರ ಪ್ರದೇಶದ ಉಪ ಮುಖ್ಯಮಂತ್ರಿ ಹಾಗೂ ಅರಣ್ಯ ಸಚಿವ ಪವನ್ ಕಲ್ಯಾಣ್ ಅವರಿಗೆ ಆನೆಗಳನ್ನು ಹಸ್ತಾಂತರ ಮಾಡಿದರು. ಈ ವೇಳೆ ರಾಜ್ಯದಿಂದ ಆಂಧ್ರಪ್ರದೇಶ ರಾಜ್ಯಕ್ಕೆ ಕುಮ್ಕಿ ಆನೆಗಳನ್ನು ಹಸ್ತಾಂತರಿಸುವ ಒಡಂಬಡಿಕೆಗೆ ಸಹಿ ಹಾಕಿದರು. ಈ ಸಂದರ್ಭದಲ್ಲಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ದೇಶದಲ್ಲೇ ಆನೆ ಸಂಪತ್ತು ಹೆಚ್ಚಾಗಿರುವ ರಾಜ್ಯ ನಮ್ಮದು. 3,695 ಆನೆಗಳು ನಮ್ಮಲ್ಲಿವೆ. ಮಾನವ ಆನೆ ಸಂಘರ್ಷ ತಡೆಗಟ್ಟಲು ಅಕ್ಕ ಪಕ್ಕದ ರಾಜ್ಯಗಳ ಸಹಕಾರವೂ ಅಗತ್ಯ. ಮಾನವ, ಆನೆ ಸಂಘರ್ಷ ತಡೆಯುವುದರಿಂದ ಜೀವ ಹಾನಿ,


ಉದಯವಾಹಿನಿ ಚಿತ್ರ

ಬೆಳೆ ಹಾನಿ ತಪ್ಪುತ್ತದೆ.

ಈ ಮಹತ್ವದ ಉದ್ದೇಶದಿಂದಲೇ ರಾಜ್ಯದಿಂದ ಆರು ಕುಮ್ಕಿ ಆನೆಗಳನ್ನು ಆಂಧ್ರಕ್ಕೆ ಹಸ್ತಾಂತರಿಸಲಾಗುತ್ತಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಸಚಿವರಾದ ಕೆ.ಜೆ. ಜಾರ್ಜ್, ದಿನೇಶ್ ಗುಂಡೂರಾವ್, ಬೈರತಿ ಸುರೇಶ್, ಸರ್ಕಾರದ ಮುಖ್ಯಕಾರ್ಯದರ್ಶಿ ಶಾಲಿನಿ ರಜನೀಶ್ ಮತ್ತಿತರರು ಹಾಜರಿದ್ದರು. ಪ್ರಸ್ತುತ ಆಂಧ್ರ ಪ್ರದೇಶಕ್ಕೆ ರಾಜ್ಯ ಸರ್ಕಾರ ನಾಲ್ಕು ಆನೆಗಳನ್ನು ಹಸ್ತಾಂತರಿಸಿದ್ದು, ಮುಂದಿನ ದಿನಗಳಲ್ಲಿ ಮತ್ತೆರಡು ಆನೆಗಳನ್ನು ಹಸ್ತಾಂತರಿಸಲಿದೆ ಎಂದು ತಿಳಿದುಬಂದಿದೆ.

## ಕಂಟೋನ್ಮೆಂಟ್ ಯೋಜನೆಗಾಗಿ 368 ಮರಗಳಿಗೆ ಕೊಡಲಿ ಪೆಟ್ಟು

• **ಉದಯವಾಹಿನಿ, ಬೆಂಗಳೂರು**

ವಸಂತ ನಗರದ ಕಂಟೋನ್ಮೆಂಟ್ ಕಾಲೋನಿಯಲ್ಲಿ ನಡೆದ ಸಾರ್ವಜನಿಕ ಸಮಾಲೋಚನೆಯಲ್ಲಿ, 368 ಹಳೆಯ ಮರಗಳನ್ನು ಕತ್ತರಿಸುವ ಉದ್ದೇಶಿತ ವಾಣಿಜ್ಯ ಯೋಜನೆಗೆ ನಿವಾಸಿಗಳು ಮತ್ತು ಪರಿಸರ ಕಾರ್ಯಕರ್ತರು ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ

ಮರ ಕತ್ತರಿಸುವ ಪ್ರಸ್ತಾಪವನ್ನು ವಿರೋಧಿಸಿ 10,500 ಕ್ಕೂ ಹೆಚ್ಚು ಅರ್ಜಿಗಳು ಸಲ್ಲಿಕೆಯಾಗಿವೆ. ನಾವು ಇದರ ವಿರುದ್ಧ ದೃಢವಾಗಿ ನಿಲ್ಲುತ್ತೇವೆ ಎಂದು ಹೆರಿಟೇಜ್ ಸಂಸ್ಥಾಪಕಿ ಪ್ರಿಯಾ ಚೆಟ್ಟಿ ಹೇಳಿದರು.

ರೈಲ್ವೆ ಮತ್ತು ಅರಣ್ಯ ಇಲಾಖೆ ಆಯೋಜಿಸಿದ್ದ ಸಭೆಯಲ್ಲಿ ಮಾತನಾಡಿದ ನಿವಾಸಿಯೊಬ್ಬರು ಅರಣ್ಯ ಇಲಾಖೆಯು ನಮ್ಮ ಮರಗಳನ್ನು ರಕ್ಷಿಸಬೇಕು. ಇಲ್ಲದಿದ್ದರೆ, ನಾವು ಅದನ್ನು ನಮ್ಮ ಕೈಯಲ್ಲಿ ತೆಗೆದುಕೊಂಡು ಈ ಪರಂಪರೆಯನ್ನು ಉಳಿಸಿಕೊಳ್ಳಲು


ಉದಯವಾಹಿನಿ ಚಿತ್ರ

ಏನು ಅಗತ್ಯವಿದೆಯೋ ಅದೆಲ್ಲಾವನ್ನು ಮಾಡುತ್ತೇವೆ ಎಂದು ಹೇಳಿದರು. ಸುಧಾರಿತ ಸಂಚಾರ ನಿರ್ವಹಣೆ, ಸಾರ್ವಜನಿಕ ಅನುಕೂಲತೆ ಮತ್ತು ಹೆಚ್ಚಿದ ಆದಾಯದಂತಹ ಅಂಶಗಳನ್ನು ಉಲ್ಲೇಖಿಸಿ, ಪ್ರಸ್ತಾವಿತ ಯೋಜನೆಯ ಪ್ರಯೋಜನಗಳನ್ನು ರೈಲ್ವೆ ಅಧಿಕಾರಿಗಳು ವಿವರಿಸಿದರು. ಅವರ ವಾದಗಳನ್ನು ತಕ್ಷಣವೇ ತಿರಸ್ಕರಿಸಲಾಯಿತು. ಅನೇಕರು ಪ್ರಸ್ತಾವನೆಯನ್ನು ವೀಕ್ಷಿಸಲು ನಿರಾಕರಿಸಿದರು. ಈ ಯೋಜನೆಯ ಅಡಿಪಾಯ ಯಾವಾಗಲೂ ಸಾರ್ವಜನಿಕ ಕಾಳಜಿ ಮತ್ತು ಅಭಿಪ್ರಾಯಗಳನ್ನು ಆಧರಿಸಿರುತ್ತದೆ ಎಂದು ರೈಲ್ವೆ ಅಧಿಕಾರಿಗಳು ಒತ್ತಿ ಹೇಳಿದರು.

ಈ ಮರಗಳು ನಗರಕ್ಕೆ ಸೇರಿವೆ. ಅವುಗಳನ್ನು ಕಡಿಯುವುದರಿಂದಗಳಿಸಿದ ಆದಾಯವು ಸರ್ಕಾರಕ್ಕೆ ಹೋಗುತ್ತದೆ ಎಂದು ನಂಬುವುದು ಹೇಗೆ ಹೆರಿಟೇಜ್ ಬೇಕು ಸದಸ್ಯೆ ಪ್ರಭಾ ದೇವ್ ಹೇಳಿದರು. ಯಾವುದೇ ಯೋಜನೆಯ ಹಂತದಲ್ಲಿ ಸಾರ್ವಜನಿಕ ಸಮಾಲೋಚನೆ ಪ್ರಾರಂಭವಾಗಬೇಕು. ಈ ಸಂದರ್ಭದಲ್ಲಿ, ಅದು ತುಂಬಾ ತಡವಾಗಿ ಆಗಿದೆ. ನಾಗರಿಕರಾಗಿ, ನಮಗೆ ಪ್ರಶ್ನಿಸುವ ಹಕ್ಕಿದೆ ಎಂದು ಅವರು ಹೇಳಿದರು.

**ಉಪ ಅರಣ್ಯ ಸಂರಕ್ಷಣಾಧಿಕಾರಿ ಸ್ವಾಮಿ ಮಾತನಾಡಿ ಯೋಜನೆಯು ಅದರ ಅಂತಿಮ ಹಂತದಲ್ಲಿ ನಮಗೆ ಬಂದಿತು. ನಾವು ಪ್ರತಿಕ್ರಿಯೆಗಾಗಿ ಕಾಯುತ್ತಿದ್ದೆವು ಮತ್ತು ಈಗ ಸಮುದಾಯವು ತನ್ನ ವಿರೋಧವನ್ನು ವ್ಯಕ್ತಪಡಿಸಿದೆ, ನಿಮ್ಮ ಆತಂಕಗಳನ್ನು ಪರಿಗಣನೆಗೆ ತೆಗೆದುಕೊಳ್ಳಲಾಗುವುದು ಎಂದು ನಾನು ನಿಮಗೆ ಭರವಸೆ ನೀಡುತ್ತೇನೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.**

## ಸುಳ್ಳು ಮಾಹಿತಿ ನೀಡಿದ ಆರೋಪ

• **ಉದಯವಾಹಿನಿ, ಬೆಂಗಳೂರು**

ಸುಳ್ಳು ಮಾಹಿತಿ ನೀಡಿದ ಆರೋಪದ ಮೇಲೆ ಬಿಜೆಪಿ ಐಟಿ ಸೆಲ್ ಮುಖ್ಯಸ್ಥ ಅಮಿತ್ ಮಾಳವೀಯ, ರಿಪಬ್ಲಿಕ್ ಟಿವಿಯ ಪ್ರಧಾನ ಸಂಪಾದಕ ಅರ್ನಬ್ ಗೋಸ್ವಾಮಿ ವಿರುದ್ಧ ಬುಧವಾರ ಎಫ್‌ಐಆರ್ ದಾಖಲಾಗಿದೆ ಎಂದು ತಿಳಿದು ಬಂದಿದೆ. ಭಾರತೀಯ ಯುವ ಕಾಂಗ್ರೆಸ್‌ನ ಕಾನೂನು ವಿಭಾಗದ ಮುಖ್ಯಸ್ಥ ಶ್ರೀಕಾಂತ್ ಸ್ವರೂಪ್ ಬಿ ಎನ್ ನೀಡಿದ ದೂರಿನ ಮೇರೆಗೆ ಮಂಗಳವಾರ ಹೈಗ್ರೌಂಡ್ಸ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ಭಾರತೀಯ ನ್ಯಾಯ ಸಂಹಿತೆಯ ಸೆಕ್ಷನ್ 192 (ಗಲಭೆಯನ್ನು ಉಂಟುಮಾಡುವ ಉದ್ದೇಶದಿಂದ ಉದ್ದೇಶ ಪೂರ್ವಕವಾಗಿ ಪ್ರಚೋದನೆ ನೀಡುವುದು) ಮತ್ತು 352 (ಶಾಂತಿ ಉಲ್ಲಂಘನೆಯನ್ನು ಪ್ರಚೋದಿವುದು) ಅಡಿಯಲ್ಲಿ ಬೆಂಗಳೂರು ಹೈಗ್ರೌಂಡ್ಸ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಟರ್ಕಿಯಲ್ಲಿರುವ ಇಸ್ತಾನ್‌ಬುಲ್ ಕಾಂಗ್ರೆಸ್ ಕೇಂದ್ರವು ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ (ಐಎನ್‌ಸಿ) ಕಚೇರಿಯಾಗಿದೆ ಎಂದು ಸುಳ್ಳು ಹೇಳಿಕೆಗಳನ್ನು ನೀಡುವ ಮೂಲಕ ಅಮಿತ್ ಮಾಳವೀಯ ಮತ್ತು ಅರ್ನಬ್ ಗೋಸ್ವಾಮಿ ದುರುದ್ದೇಶಪೂರ್ವಕವಾಗಿ ಪ್ರಚಾರ ಮಾಡಿದ್ದಾರೆ ಎಂದು ಸ್ವರೂಪ್ ಆರೋಪಿಸಿದ್ದಾರೆ.


ಉದಯವಾಹಿನಿ ಚಿತ್ರ

**ಅಮಿತ್ ಮಾಳವೀಯ, ಅರ್ನಬ್ ಗೋಸ್ವಾಮಿ ಅವರ ನಡೆ ಭಾರತದ ಪ್ರಜಾಪ್ರಭುತ್ವದ ಅಡಿಪಾಯ, ಸಾರ್ವಜನಿಕ ಸುರಕ್ಷತೆ, ರಾಷ್ಟ್ರೀಯ ಭದ್ರತೆಯ ಮೇಲೆ ನಡೆಸಿದ ದುರುದ್ದೇಶಪೂರ್ವಕ ದಾಳಿಯಾಗಿದೆ. ದೂರನ್ನು ತುರ್ತು ಪರಿಸ್ಥಿತಿ ಎಂದು ಪರಿಗಣಿಸಿ ಕಠಿಣ ಕ್ರಮ ಕೈಗೊಳ್ಳುವಂತೆ ಭಾರತೀಯ ಪತ್ರಿಕಾ ಮಂಡಳಿ, ಮಾಹಿತಿ ಮತ್ತು ಪ್ರಸಾರ ಸಚಿವಾಲಯ ಮತ್ತು ಸಿಬಿಐ ಸೇರಿದಂತೆ ಅಧಿಕಾರಿಗಳಿಗೆ ಮನವಿ ಮಾಡಿದ್ದಾರೆ.**

## ಬಿಜೆಪಿ ಅವಧಿಯಲ್ಲಿ ಮಳೆ ಬಂದಾಗ ಬೆಂಗಳೂರು ತೇಲುತ್ತಿತ್ತು

• **ಉದಯವಾಹಿನಿ, ಬೆಂಗಳೂರು**

ಬಿಜೆಪಿ ಅವಧಿಯಲ್ಲಿ ಮಳೆ ಬಂದಾಗ ಬೆಂಗಳೂರು ತೇಲುತ್ತಿತ್ತು. ನಮ್ಮ ಸರ್ಕಾರದಲ್ಲಿ ಮಳೆ ಪರಿಹಾರಕ್ಕೆ ಶಾಶ್ವತ ಪರಿಹಾರ ಕೊಡುವ ಕೆಲಸ ಮಾಡುತ್ತೇವೆ ಎಂದು ಮಾಜಿ ಸಂಸದ ಡಿಕೆ ಸುರೇಶ್ ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಬೆಂಗಳೂರಿನಲ್ಲಿ ಮಳೆ ಅವಾಂತರ ವಿಚಾರವಾಗಿ ಬಿಜೆಪಿಯಿಂದ ಡಿಕೆಶಿ ವಿರುದ್ಧ ಟೀಕೆ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಬಿಜೆಪಿ ಕಾಲದಲ್ಲಿ ಬೆಂಗಳೂರು ತೇಲುತ್ತಿತ್ತು. ಬಿಜೆಪಿ ಅವರು ಮರೆತು ಹೋಗಿದ್ದಾರೆ ಅನ್ನಿಸುತ್ತದೆ. ಪ್ರಕೃತಿ ನಡುವೆ ಯಾರು ಏನು ಮಾಡಲು ಸಾಧ್ಯವಿಲ್ಲ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಬಿಜೆಪಿ ಅವಧಿಯಲ್ಲಿ ಲೂಟರ್‌ಗಳು ಏನು ಮಾಡಿದ್ರು, ಎಲ್ಲಾ ಬಾಕಿ ಕೊಡಬೇಕಾದರೆ 3 ವರ್ಷ ಬೇಕು.

ಬೆಂಗಳೂರನ್ನು ಬಿಜೆಪಿ ಅವರು ಲೂಟಿ ಮಾಡಿ ಬಿಟ್ಟು ಹೋಗಿದ್ದಾರೆ.



ಅದನ್ನು ಸರಿ ಮಾಡಬೇಕಾದರೆ ಕಾಲಾವಕಾಶ ಬೇಕಾಗುತ್ತದೆ ಎಂದರು. ಸಿಎಂ, ಡಿಸಿಎಂ ಅವರು ಶಾಶ್ವತ ಪರಿಹಾರ ಕಂಡುಕೊಳ್ಳಬೇಕು ಎಂದು ಮುಂದಾಗಿದ್ದಾರೆ. ರಾಜಕಾಲುವೆ ಮೇಲೆ ಮನೆ ಕಟ್ಟಿದ್ದಾರೆ. ಅದಕ್ಕೆ ಯಾವುದೇ ನಿಯಮ ಇಲ್ಲ. ಇದಕ್ಕೆ ಬಿಜೆಪಿ ಕಡಿವಾಣ ಹಾಕಿರಲಿಲ್ಲ.

ಕಾಂಗ್ರೆಸ್ ಈ ಕೆಲಸ ಮಾಡುತ್ತಿದೆ. ಇದಕ್ಕಾಗಿ ಕಾನೂನು ಮಾಡಲು ಚಿಂತನೆ ಮಾಡಲಾಗಿದೆ. ಇದಕ್ಕೆ ಶಾಶ್ವತ ಪರಿಹಾರ ಖಂಡಿತ ಮುಂದಿನ ದಿನಗಳಲ್ಲಿ ಸಿಗಲಿದೆ. ಕಳೆದ ಬಾರಿ ಎಲ್ಲೆಲ್ಲಿ ಸಮಸ್ಯೆ ಆಗಿತ್ತು, ಈಗ ಅದು ಸರಿ ಹೋಗಿದೆ.

ಎಲ್ಲಿ ಬಿಜೆಪಿ ಶಾಸಕರು ಸತತವಾಗಿ ಗೆದ್ದು ಬರುತ್ತಿದ್ದಾರೆ ಅಲ್ಲಿ ಏನು ಲೂಟಿ ಮಾಡಿದ್ದಾರೆ ಎಂದು ಬಿಜೆಪಿ ಅವರು ಹೇಳಬೇಕು ಎಂದು ಹೇಳಿದರು.

ಸುಮಾರು 2 ಸಾವಿರ ಕೋಟಿ ರಾಜ ಕಾಲುವೆ ಸರಿ ಮಾಡಲು ಹಣ ಬಿಡುಗಡೆ ಮಾಡಲಾಗಿದೆ. ಇದಕ್ಕೆ ಕಾರ್ಯಕ್ರಮ ರೂಪಿಸಲಾಗಿದೆ. ಏನೇ ಮಾಡಬೇಕಾದರೂ ಆರ್ಥಿಕ ವ್ಯವಸ್ಥೆ ನೋಡಿಕೊಂಡು ಮಾಡಬೇಕು. ಆ ನಿಟ್ಟಿನಲ್ಲಿ ಬೆಂಗಳೂರು ಅಭಿವೃದ್ಧಿ ಪಡಿಸಲು ಸಿಎಂ ಅವರು ಮುಂದಿನ 3 – 4 ವರ್ಷಗಳ ಕಾಲ ಅನುದಾನ ಕೊಡುತ್ತಾರೆ.

ಡಿಪಿಆರ್ ರೆಡಿ ಆಗುತ್ತಿದೆ. ಅದೆಲ್ಲ ಆದ ಮೇಲೆ ಬೆಂಗಳೂರಿಗೆ ಹೊಸ ರೂಪ ಸಿಗಲಿದೆ. ಇದರಲ್ಲಿ ಯಾವುದೇ ಅನುಮಾನ ಬೇಡ ಎಂದು ತಿಳಿಸಿದರು. ಈಗ ಏನೇ ಅನಾಹುತ ಆಗುತ್ತಿದ್ದರೂ ಬಿಜೆಪಿ ಅವರು ಸತತವಾಗಿ ಗೆದ್ದು ಬರುತ್ತಿರುವ ಕ್ಷೇತ್ರದಲ್ಲಿ ಅವ್ಯವಸ್ಥೆ ಆಗುತ್ತಿದೆ. ಅದಕ್ಕೆ ಏನು ಕಾರಣ ಎಂದು ಬಿಜೆಪಿ ಅವರು ಹೇಳಲಿ ಎಂದು ಆಗ್ರಹಿಸಿದರು.

# ಬಿಜೆಪಿ ನಿಯೋಗದಿಂದ ರಾಜ್ಯಪಾಲರಿಗೆ ದೂರು

### ಸ್ಮಾರ್ಟ್ ಮೀಟರ್ ಮೂಲಕ ಸರ್ಕಾರದ ಹಗಲು ದರೋಡೆ; ಸಿ.ಎನ್ ಅಶ್ವಥ್ ನಾರಾಯಣ್ ಟೀಕೆ

• **ಉದಯವಾಹಿನಿ, ಬೆಂಗಳೂರು**

ಸ್ಮಾರ್ಟ್ ಮೀಟರ್ ಮೂಲಕ ಹಗಲು ದರೋಡೆ ಮಾತ್ರವಲ್ಲದೆ, ಗ್ರಾಹಕರಿಗೆ ಅನ್ಯಾಯವಾಗುತ್ತಿದೆ ಎಂದು ಮಾಜಿ ಡಿಸಿಎಂ, ಶಾಸಕ ಡಾ.ಸಿ.ಎನ್ ಅಶ್ವಥ್ ನಾರಾಯಣ್ ಟೀಕಿಸಿದ್ದಾರೆ.

ವಿರೋಧ ಪಕ್ಷದ ನಾಯಕ ಆರ್ ಅಶೋಕ್ ಮತ್ತು ಸಿ.ಎನ್ ಅಶ್ವಥ್ ನಾರಾಯಣ್ ಅವರ ನೇತೃತ್ವದ ಬಿಜೆಪಿ ನಿಯೋಗವು ಬುಧವಾರ ರಾಜ್ಯಪಾಲರನ್ನು ಭೇಟಿ ಮಾಡಿ ಹಗರಣದ ಸೂಕ್ತ ತನಿಖೆಗೆ ಸರ್ಕಾರಕ್ಕೆ ನಿರ್ದೇಶನ ನೀಡುವಂತೆ ದೂರು ನೀಡಿದರು. ಈ ಸಂದರ್ಭ ಮಾಧ್ಯಮಗಳ ಜೊತೆ ಮಾತನಾಡಿದ ಸಿ.ಎನ್ ಅಶ್ವಥ್ ನಾರಾಯಣ್ ಅವರು, ಸ್ಮಾರ್ಟ್ ಮೀಟರ್ ಕುರಿತಂತೆ ಗೌರವಾನ್ವಿತ ರಾಜ್ಯಪಾಲರ ಜೊತೆ ಚರ್ಚೆ ಮಾಡಿದ್ದೇವೆ ಎಂದು ವಿವರಿಸಿದರು.

ಈ ಹಗರಣದಲ್ಲಿ ಗ್ರಾಹಕರಿಗೆ ಅನ್ಯಾಯವಾಗುತ್ತಿದೆ. ಸಾವಿರಾರು ಕೋಟಿ ಲೂಟಿ ನಡೆಯುತ್ತಿದೆ. ರಾಜ್ಯ ಸರ್ಕಾರ, ಇಂಧನ ಇಲಾಖೆ ಹಾಗೂ ಅಧಿಕಾರಿಗಳು ಇದರಲ್ಲಿ ಭಾಗಿ


ಉದಯವಾಹಿನಿ ಚಿತ್ರ

**ಸ್ಮಾರ್ಟ್ ಮೀಟರ್ ಹಗರಣ**

ಆಗಿರುವುದಾಗಿ ರಾಜ್ಯಪಾಲರಿಗೆ ತಿಳಿಸಲಾಗಿದೆ. ಈ ಕುರಿತು ದಾಖಲೆಗಳೊಂದಿಗೆ ಲೋಕಾಯುಕ್ತಕ್ಕೆ ದೂರು ನೀಡಿದ್ದೇವೆ. ಇದುವರೆಗೂ ಎಫ್‌ಐಆರ್ ದಾಖಲಾಗಿಲ್ಲ. ಈ ಸಂಬಂಧ ಲೋಕಾಯುಕ್ತಕ್ಕೆ ಮತ್ತೊಮ್ಮೆ ದೂರು ನೀಡಲಾಗಿದೆ ಎಂದರು. ಅಧಿಕಾರ ದುರ್ಬಳಕೆ ಮಾಡಿದ ಇಂಧನ ಸಚಿವರು, ಇತರ ಅಧಿಕಾರಿಗಳು ಗುತ್ತಿಗೆ ಕೊಟ್ಟು ಕಾನೂನಿನ ಉಲ್ಲಂಘನೆ ಮಾಡಿದ್ದಾರೆ. ಅಧಿಕಾರ ದುರ್ಬಳಕೆ, ಹಗಲು ದರೋಡೆ ಮಾಡಿದ ಸ್ಮಾರ್ಟ್ ಮೀಟರ್ ಹಗರಣಕ್ಕೆ ತಾರ್ಕಿಕ ಅಂತ್ಯ ಕಾಣಿಸಲು ಯೋಜಿಸಿದ್ದೇವೆ ಎಂದು ಹೇಳಿದರು.

ರತ್ನಗಂಬಳಿ ಹಾಸಿ ಸುಖದಲ್ಲಿ ತಮ್ಮ ಸಾಧನೆಗಳನ್ನು ಹೇಳಿಕೊಂಡಿದ್ದಾರೆ. ಕಾಂಗ್ರೆಸ್ಸಿನ ಸಮರ್ಪಣಾ ಸಮಾವೇಶ, ಸಾಧನಾ ಸಮಾವೇಶ ಎಲ್ಲವೂ ಬೂಟಾಟಿಕೆ. ಇದು ಲೂಟಿ ಸರ್ಕಾರ. ರಾಜ್ಯದಲ್ಲಿ ಸಂತಸ ಮತ್ತು ಆನಂದವಾಗಿ ಇರುವವರು ಸಿಎಂ ಮತ್ತು ಅಧಿಕಾರದಲ್ಲಿರುವ ಸಚಿವ ಸಂಪುಟದ 35 ಜನರ ತಂಡ ಎಂದು ಆರೋಪಿಸಿದರು. ವಿಪಕ್ಷ ನಾಯಕ ಆರ್. ಅಶೋಕ್, ಶಾಸಕ ಸಿ.ಎನ್ ಅಶ್ವಥ್ ನಾರಾಯಣ್, ಶಾಸಕ ಕೆ.ಗೋಪಾಲಯ್ಯ, ಶಾಸಕ ಧೀರಜ್ ಮುನಿರಾಜು ಹಾಗೂ ಪಕ್ಷದ ಪ್ರಮುಖರು ಉಪಸ್ಥಿತರಿದ್ದರು.

**ರಾಜ್ಯ ವಿದ್ಯುತ್ ನಿಯಂತ್ರಣ ಆಯೋಗ ಮತ್ತು ಕೇಂದ್ರ ವಿದ್ಯುತ್ ಆಯೋಗದ ಕಾನೂನಿನಲ್ಲಿ ಅವಕಾಶ ಇಲ್ಲದಿದ್ದರೂ ಸ್ಮಾರ್ಟ್ ಮೀಟರ್ ಕಡ್ಡಾಯ ಮಾಡುತ್ತಿರುವುದು ಪ್ರಥಮ ಉಲ್ಲಂಘನೆ. ಇಲ್ಲಿ ದುಬಾರಿ ದರ ಇದೆ. ಅರ್ಹತೆ ಇಲ್ಲದ ಗುತ್ತಿಗೆದಾರರಿಗೆ ಗುತ್ತಿಗೆ ಕೊಡಲಾಗಿದೆ. ಕಾನೂನಿನ ಉಲ್ಲಂಘನೆ, ಅಧಿಕಾರ ದುರ್ಬಳಕೆ ಮಾಡಿದ ಕುರಿತು ಮಾನ್ಯ ರಾಜ್ಯಪಾಲರ ಗಮನಕ್ಕೆ ತಂದಿದ್ದೇವೆ. ಗೋಲ್ಡ್ ಸ್ಮಗ್ಲಿಂಗ್ ಪ್ರಕರಣವು ತೀವ್ರ ತನಿಖೆ ನಡೆದು ಇನ್ನಷ್ಟು ವಿವರ ಹೊರಬರುವ ವಿಶ್ವಾಸವಿದೆ ಎಂದರು.**

ಅಂತರಾಳದಿಂದ... EDITORIAL

# ಒಗ್ಗಟ್ಟಿನ ಸಂದೇಶ ಮುಕ್ಕಾಗಿಸಿದ ನಿಯೋಗದ ಸದಸ್ಯರ ಆಯ್ಕೆ ವಿವಾದ



ಅಮೆರಿಕ, ಐರೋಪ್ಯ ಒಕ್ಕೂಟದ ದೇಶಗಳು, ರಷ್ಯಾ, ಜಪಾನ್, ಸೌದಿ ಅರೇಬಿಯಾ ಮತ್ತು ಕೊಲ್ಲಿಯ ಇತರ ರಾಷ್ಟ್ರಗಳು, ಇಂಡೋನೇಷ್ಯಾ ಹಾಗೂ ಆಫ್ರಿಕಾದ ದೇಶಗಳಿಗೆ ನಿಯೋಗಗಳು ಭೇಟಿ ನೀಡಲಿವೆ. ಆದರೆ, ಸಂಘರ್ಷದ ಸಂದರ್ಭದಲ್ಲಿ ಪಾಕಿಸ್ತಾನಕ್ಕೆ ಬೆಂಬಲ ನೀಡಿದ್ದ ಚೀನಾ ಮತ್ತು ಟರ್ಕಿಯನ್ನು ನಿಯೋಗಗಳ ಭೇಟಿಯಿಂದ ಹೊರಗೆ ಇರಿಸಿರುವುದು ಗಮನಾರ್ಹ. ಪಾಕಿಸ್ತಾನವು ಅತಿಕ್ರಮಣಕಾರಿ ದೇಶ ಎಂದು ಅಂತರರಾಷ್ಟ್ರೀಯ ವೇದಿಕೆಗಳಲ್ಲಿ ಬಿಂಬಿಸುವ ಭಾರತದ ಪ್ರಯತ್ನಗಳಿಗೆ ನಿಯೋಗಗಳ ವಿವರಣೆಯು ಪೂರಕವಾಗಬಹುದು.ರಾಜತಾಂತ್ರಿಕ ವಿಚಾರಗಳಿಗೆ ಸಂಬಂಧಿಸಿ ಸರ್ವಪಕ್ಷ ನಿಯೋಗಗಳನ್ನು ಇತರ ದೇಶಗಳಿಗೆ ಭಾರತವು ಈ ಹಿಂದೆಯೂ ಕಳುಹಿಸಿತ್ತು.

ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಆಯೋಗದ ಮುಂದೆ ಪಾಕಿಸ್ತಾನವು ಕಾಶ್ಮೀರಕ್ಕೆ ಸಂಬಂಧಿಸಿದ ನಿರ್ಣಯ ಮಂಡಿಸಿದ್ದರ ವಿರುದ್ಧ ವಿವರಗಳನ್ನು ನೀಡಲು ಅಟಲ್ ಬಿಹಾರಿ ವಾಜಪೇಯಿ ಮತ್ತು ಫಾರೂಕ್ ಅಬ್ದುಲ್ಲಾ ಅವರಿದ್ದ ನಿಯೋಗವನ್ನು ಪ್ರಧಾನಿ ಪಿ.ವಿ. ನರಸಿಂಹ ರಾವ್ ಅವರು 1994ರಲ್ಲಿ ಕಳುಹಿಸಿದ್ದರು. ಮುಂಬೈ ಮೇಲೆ 2008ರಲ್ಲಿ ದಾಳಿಯಾದ ಬಳಿಕ ಆಗಿನ ಪ್ರಧಾನಿ ಮನಮೋಹನ ಸಿಂಗ್ ಅವರು ಸರ್ವಪಕ್ಷ ನಿಯೋಗವನ್ನು ವಿವಿಧ ದೇಶಗಳಿಗೆ ಕಳುಹಿಸಿದ್ದರು. ತಪ್ಪು ಗ್ರಹಿಕೆಗಳನ್ನು ನಿವಾರಿಸುವುದು ಮತ್ತು ಭಾರತದ ನಿಲುವನ್ನು ಪರಿಣಾಮಕಾರಿಯಾಗಿ ತಿಳಿಸುವುದು

ಈಗಿನ ನಿಯೋಗಗಳ ಹೊಣೆಯಾಗಿದೆ.

**ಪಹಲ್ಗಾಮ್‌ನಲ್ಲಿ ಉಗ್ರರ ದಾಳಿ. ಅದಕ್ಕೆ ಪ್ರತಿಕ್ರಿಯೆಯಾಗಿ ನಡೆಸಿದ 'ಸಿಂಧೂರ ಕಾರ್ಯಾಚರಣೆ' ಮತ್ತು ಭಯೋತ್ಪಾದನೆಯನ್ನು ಸರ್ಕಾರದ ನೀತಿಯಾಗಿಸಿಕೊಂಡಿರುವ ಪಾಕಿಸ್ತಾನದಂತಹ ವಿಚಾರಗಳಲ್ಲಿ ಭಾರತದ ನಿಲುವನ್ನು ವಿವರಿಸಲು ಬಹುಪಕ್ಷಗಳ ಸಂಸದೀಯ ನಿಯೋಗವನ್ನು ನಿಯೋಜನೆ ಮಾಡಿ ಸರ್ಕಾರವು ಉತ್ತಮ ಕೆಲಸ ಮಾಡಿದೆ. ಈ ಪ್ರಕ್ರಿಯೆಯು ನಮ್ಮ ಒಗ್ಗಟ್ಟನ್ನು ಪ್ರದರ್ಶಿಸುತ್ತದೆ ಮತ್ತು ಬಾಹ್ಯ ಬೆದರಿಕೆ ಹಾಗೂ ಸವಾಲುಗಳನ್ನು ಸಮರ್ಥವಾಗಿ ಎದುರಿಸುವ ದೃಢ ನಿರ್ಧಾರವನ್ನು ತೋರಿಸುತ್ತದೆ. ರಾಜತಂತ್ರಜ್ಞರು, ಪರಿಣತರು, ದೇಶದ ಸಾಮಾಜಿಕ ಮತ್ತು ರಾಜಕೀಯ ಕ್ಷೇತ್ರದ ಪ್ರತಿನಿಧಿಗಳು ನಿಯೋಗದ ಭಾಗವಾಗಿದ್ದಾರೆ.**

ಪಹಲ್ಗಾಮ್ ದಾಳಿಯ ನಂತರದ ಸಂಘರ್ಷದಲ್ಲಿ ಭಾರತಕ್ಕೆ ಅಂತರರಾಷ್ಟ್ರೀಯ ಮಟ್ಟದಲ್ಲಿ ವ್ಯಾಪಕವಾದ ಬೆಂಬಲ ಸಿಕ್ಕಿಲ್ಲ. ಭಾರತ ಮತ್ತು ಪಾಕಿಸ್ತಾನವನ್ನು ಸಮಾನವಾಗಿ ಕಾಣುವ ಪ್ರವೃತ್ತಿ ಕೆಲವು ದೇಶಗಳಿಗೆ ಇದೆ. ಆದರೆ, ಹೀಗೆ ನೋಡುವುದರಲ್ಲಿಯೇ ಲೋಪ ಇದೆ ಎಂಬುದನ್ನು ಜಗತ್ತಿಗೆ ತಿಳಿಸಬೇಕಿದೆ ಭಾರತವು ಭಯೋತ್ಪಾದನೆಯ ಸಂತ್ರಸ್ತ ದೇಶವಾದರೆ, ಪಾಕಿಸ್ತಾನವು ಭಯೋತ್ಪಾದನೆಯ ಮೂಲವಾಗಿದೆ. ಅಲ್ಲಿನ ಸರ್ಕಾರ ಮತ್ತು ಸೇನೆಯು ಭಯೋತ್ಪಾದನೆಗೆ ಬೆಂಬಲವಾಗಿ ನಿಂತಿವೆ. ಭಾರತವು ಪ್ರಜಾಪ್ರಭುತ್ವ ವ್ಯವಸ್ಥೆಯಾದರೆ, ಪಾಕಿಸ್ತಾನವನ್ನು ಸಶಸ್ತ್ರ ಪಡೆಗಳು ಮುನ್ನಡೆಸುತ್ತವೆ. ಈ ವ್ಯತ್ಯಾಸಗಳು ಬಹಳ ಮುಖ್ಯವಾದವು ಮತ್ತು ಅವು ಜಗತ್ತಿನ ಕಣ್ಣಿನಿಂದ ಮರೆಯಾಗಬಾರದು. ನಿಯೋಗಗಳಿಗೆ ಸದಸ್ಯರ ಆಯ್ಕೆ ವಿಚಾರದಲ್ಲಿ ಅದರಲ್ಲಿಯೂ ಕಾಂಗ್ರೆಸ್ ಪಕ್ಷದಿಂದ ಆಯ್ಕೆ ವಿಚಾರದಲ್ಲಿ ವಿವಾದ ಸೃಷ್ಟಿಯಾಗಿರುವುದು ದುರದೃಷ್ಟಕರ. ಸದಸ್ಯರನ್ನು ಆಯ್ಕೆ ಮಾಡುವ ಮುನ್ನ ಪಕ್ಷದ ಜೊತೆಗೆ ಸಮಾಲೋಚನೆ ನಡೆಸಿಲ್ಲ ಎಂಬ ಅಸಮಾಧಾನ ಕಾಂಗ್ರೆಸ್‌ಗೆ ಇದೆ. ಕಾಂಗ್ರೆಸ್ ಸೂಚಿಸಿದ ನಾಲ್ಕು ಹೆಸರುಗಳ ಪೈಕಿ ಒಂದನ್ನು ಮಾತ್ರ ಸರ್ಕಾರ ಸ್ವೀಕರಿಸಿದೆ. ಒಂದು ನಿಯೋಗದ ನೇತೃತ್ವವನ್ನು ಶಶಿ ತರೂರ್ ಅವರಿಗೆ ವಹಿಸುವ ಮೂಲಕ ಸರ್ಕಾರವು ರಾಜಕಾರಣ ಮಾಡಿದೆ. ಈ ಸಂದರ್ಭದಲ್ಲಿ ಕೂಡ ಕಾಂಗ್ರೆಸ್ ಪಕ್ಷಕ್ಕೆ ಮುಜುಗರ ಉಂಟು ಮಾಡುವ ಪ್ರಲೋಭನೆಯನ್ನು ಸರ್ಕಾರವು ಮೀರಿ ನಿಲ್ಲಬೇಕಿತ್ತು. 'ಸಿಂಧೂರ ಕಾರ್ಯಾಚರಣೆಯೂ ಸೇರಿದಂತೆ ವಿವಿಧ ವಿಚಾರಗಳಲ್ಲಿ ತರೂರ್ ಅವರು ಇತ್ತೀಚೆಗೆ ವ್ಯಕ್ತಪಡಿಸಿದ ವಿಚಾರಗಳು ಕಾಂಗ್ರೆಸ್ ಪಕ್ಷದ ಅಧಿಕೃತ ನಿಲುವಿಗೆ ಅನುಗುಣವಾಗಿ ಇರಲಿಲ್ಲ. ಅದೇನೇ ಇದ್ದರೂ ತರೂರ್ ಅವರು ವಿಚಾರಗಳನ್ನು ಪರಿಣಾಮಕಾರಿಯಾಗಿ ಸಂವಹನ ಮಾಡಬಲ್ಲ ನಾಯಕ. ಹಾಗೆಯೇ ಅಂತರರಾಷ್ಟ್ರೀಯ ಮಟ್ಟದ ರಾಜತಾಂತ್ರಿಕತೆಯಲ್ಲಿ ಅನುಭವಿಯೂ ಹೌದು. ಒಟ್ಟಾರೆ ರಾಷ್ಟ್ರೀಯ ಹಿತಾಸಕ್ತಿಯೇ ಮುಖ್ಯ ಪರಿಗಣನೆ ಆಗಿರಬೇಕಿದ್ದ ಈಗಿನ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಪ್ರತಿಕ್ರಿಯೆ ಅತಿರೇಕದ್ದೂ ಒರಟುತನದಿಂದ ಕೂಡಿದ್ದೂ ಆಗಿದೆ.

# ರಾಮಾಯಣ



## ದಶರಥ ಕೌಸಲ್ಯಾ ದೇವಿಯರ ಸಂವಾದ

• ಹಿಂದಿನ ಸಂಚಿಕೆಯಿಂದ **78ನೆಯ ಅಧ್ಯಾಯ**

ಈ ಐದು ದಿವಸಗಳು ಶೋಕಾಗ್ನಿಯಿಂದ ಚಿಂತಿಸುವ ನನಗೆ ಐದು ವರುಷಗಳಾಗಿ ತೋರಿದುವು. ಶೋಕಾಗ್ನಿಯು ಅಂತರಂಗದಲ್ಲಿ ನದಿಗಳ ಪ್ರವಾಹದಿಂದ ಸಮುದ್ರವು ಹೆಚ್ಚುವಂತೆ ಹೆಚ್ಚುತ್ತಿದೆ ಎಂದು ಹಂಬಲಿಸುತ್ತಿದ್ದಳು. ಅಷ್ಟರಲ್ಲಿ ಸೂರ್ಯನು ಮುಳುಗಿದನು. ದಶರಥನು ದುಃಖಿಸುತ್ತಲೇ ನಿದ್ರಾಧೀನನಾದನು.

**ದಶರಥನು ಮುನಿ ಕುಮಾರನನ್ನು ಕೊಂದ ವೃತ್ತಾಂತ :** ಆಮೇಲೆ ದಶರಥರಾಯನು ಎಚ್ಚೆತ್ತನು. ಅವನ ಮನಸ್ಸಿನಲ್ಲಿ ರಾಮಲಕ್ಷ್ಮಣರ ವನವಾಸದಿಂದ ರಾಹುತುಡುಕಿದ ಸೂರನಿಗೆ ಬರುವಂತೆ ಮಹತ್ತಾದ ವ್ಯಥೆಯು ಪ್ರಾಪ್ತವಾಯಿತು. ಅವನು ಕೌಸಲಾದೇವಿಯನ್ನು ಕುರಿತು ಶೋಭನಾಂಗಿ ಕೌಸಲ್ಯ, ಲೋಕದಲ್ಲಿ ಪುಣ್ಯಕರ್ಮ ಪಾಪ ಕರ್ಮಗಳಿಗೆ ತಕ್ಕ ಫಲವನ್ನು ಅನುಭವಿಸಬೇಕು. ಒಂದು ಕರ್ಮದಲ್ಲಿ ತೊಡಗುವಾಗ ಆ ಕರ್ಮದ ಫಲವನ್ನು ವಿಚಾರಿಸಿ ಮಾಡಬೇಕು. ವಿಚಾರಿಸದೆ ಕರ್ಮವನ್ನು ಮಾಡುವವನು ಬಾಲಕನೆನಿಸಿಕೊಳ್ಳುವನು. ಮುತ್ತುಗದ ಪುಷ್ಪದ ಸೌಂದರ್ಯವನ್ನು ನೋಡಿ ಅದರ ಫಲವು ಮಧುರವಾಗಿ ಇರುವುದೆಂದು ಭಾವಿಸುವ ಅಜ್ಞಾನಿಯು ಮಾವಿನ ಮರವನ್ನು ಕಿತ್ತು ಹಾಕಿ ಮುತ್ತುಗವನ್ನು ನೆಟ್ಟು ಸಾಕಿದರೆ ಫಲಕಾಲದಲ್ಲಿ ಆ ಮರದ ಫಲವು ಅಪ್ರಯೋಜಕವೆಂದು ತಿಳಿದು ದುಃಖಿಸುವನು. ಹಾಗೆ ನಾನು ಶ್ರೀರಾಮನನ್ನು ಹೊರಡಿಸಿ ಈಗ ದುಃಖಪಡುತ್ತಿದ್ದೇನೆ. ಕೌಸಲಾದೇವಿ, ಹಿಂದೆ ನಾನು ತರುಣನಾಗಿದ್ದಾಗ ಬಿಲ್ಲುಗಾರರಲ್ಲಿ ಮಹಾಪ್ರಸಿದ್ಧನೆಂಬ ಕೀರ್ತಿಯನ್ನು ಪಡೆಯಬೇಕೆಂದು ಶಬ್ದವೇಧಿಯೆಂಬ ಬಾಣಸಾಧನೆಯನ್ನು ಮಾಡಿದನು. ಬಾಲಕನಾದವನು ಅಜ್ಞಾನದಿಂದ ವಿಷವನ್ನು ತೆಗೆದು ತನಗೆ ತಾನೇ ಆಪತ್ತು ತಂದುಕೊಳ್ಳುವಂತೆ ನಾನು ಈ ಶಬ್ದವೇಧಿಯನ್ನು ಅಭ್ಯಾಸಮಾಡಿ ಮೃತ್ಯುವನ್ನು ತಂದುಕೊಂಡೆನು ದೇವಿ, ಆಗ ನಾನು ನಿನ್ನನ್ನು ಮದುವೆಯಾಗಿರಲಿಲ್ಲ. ನಾನು ಯುವರಾಜನಾಗಿದ್ದೆ. ಒಂದು ಸಲ ಮಳೆಗಾಲ ಬಂದಿತು. ಆ ವರ್ಷಾಕಾಲದಲ್ಲಿ ಸೂರ್ಯನು ತನ್ನ ಕಿರಣಗಳಿಂದ ಭೂಮಿಯ ಸಾರವನ್ನು ತೆಗೆದುಕೊಂಡು ಅದರಿಂದ ಮಳೆಗರೆಯುತ್ತ ತೆಂಕಣ ದಿಕ್ಕನ್ನೈದಿದನು. ಉಷ್ಣವು ತಗ್ಗಿತು. ಮೇಘಗಳು ಆಕಾಶದಲ್ಲಿ ಮುಚ್ಚಿಕೊಂಡಿದ್ದುವು. ಅಂಥ ವರ್ಷಾಕಾಲದಲ್ಲಿ ನಾನು ರಥವನ್ನೇರಿ ಬಿಲ್ಲು ಬಾಣಗಳನ್ನು ಧರಿಸಿಕೊಂಡು ಬೇಟೆಗೆ ಹೋಗಿ ಬರಬೇಕೆಂದು ಮನಸ್ಸಿನಲ್ಲಿ ಆಲೋಚನೆಮಾಡಿ ಸರಯೂನದೀತೀರದಲ್ಲಿ ಹೋಗುತ್ತಿದ್ದೆನು. ಆ ನದೀತೀರದಲ್ಲಿದ್ದ ಹಳ್ಳದೊಳಗೆ ಅಡಗಿದ್ದ ವ್ಯಾಘ್ರ, ಗಜ ಮೊದಲಾದ ಮೃಗಗಳನ್ನು ಕೊಲ್ಲಬೇಕೆಂದಿದ್ದೆನು. ಆ ಸಮಯದಲ್ಲಿ ಒಬ್ಬ ಮುನಿಕುಮಾರನು ಅಲ್ಲಿ ಆಶ್ರಮವನ್ನು ಮಾಡಿಕೊಂಡು ಅಂಧರಾದ ತಾಯಿತಂದೆಗಳನ್ನು ರಕ್ಷಿಸಿಕೊಂಡಿದ್ದನು. ಆತನು ತನ್ನ ತಾಯಿತಂದೆಗಳಿಗೆ ಕುಡಿಯಲು ನೀರು ತೆಗೆದುಕೊಂಡು ಹೋಗಬೇಕೆಂದು ಕಮಂಡಲುವಿನಲ್ಲಿ ನೀರನ್ನು ತುಂಬುತ್ತಿದ್ದನು. ಆಗ ಉಂಟಾದ ಗುಳುಗುಳು ಶಬ್ದವನ್ನು ಕೇಳಿ, ಆ ಸ್ಥಳವು ದೃಷ್ಟಿಗೋಚರವಿಲ್ಲದಿರಲು, ಅದು ಆನೆಯ ಬೃಂಹಿತಧ್ವನಿಯೆಂದೆಣಿಸಿ ವಿಷವನ್ನು ಗುಳುವ ಸರ್ಪದಂತೆ ಅತಿಭಯಂಕರವಾದ ಶಬ್ದವೇಧಿಯನ್ನು ತೆಗೆದು ಆ ಶಬ್ದ ಹುಟ್ಟಿದ ಸ್ಥಳಕ್ಕೆ ಸಂಧಾನಮಾಡಿ ಬಿಟ್ಟನು. ಅದು ಅಲ್ಲಿ ನೀರುತುಂಬುತ್ತಿದ್ದ ಮುನಿಕುಮಾರನನ್ನು ತಾಕಿತು.

**ಮುಂದುವರಿಯುವುದು...**

# ಮಾನ್ಯ ಮುಖ್ಯಮಂತ್ರಿಗಳೇ ಅನ್ನದಾತ ಮಕ್ಕಳು ಕಾಣುತ್ತಿಲ್ಲವೇ

• **ಉದಯವಾಹಿನಿ, ವಿಶೇಷ**

**ಚನ್ನೇಗೌಡ ಉಜ್ಜನಿ ಚಲುವಯ್ಯ**



ಮಾನ್ಯ ಮುಖ್ಯ ಮಂತ್ರಿಗಳೇ ಏಳುಕೋಟಿ ಕನ್ನಡಿಗರು ನಿಮ್ಮ ಮೇಲೆ ಭರವಸೆಯನ್ನಿಟ್ಟು ಮತನೀಡಿ, ಆಶೀರ್ವದಿಸಿ ಭರ್ಜರಿ ಬಹುಮತದ ಮೂಲಕ ಸರ್ಕಾರ ರಚನೆಗೆ ಅವಕಾಶ ಮಾಡಿಕೊಟ್ಟು ಇಂದಿಗೆ ಎರಡು ವರ್ಷಗಳಾಗಿವೆ. ಈ ಎರಡು ವರ್ಷಗಳ ಅವಧಿಯಲ್ಲಿ ಅಭಿವೃದ್ಧಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಜೊತೆ ಸಾಮಾಜಿಕ ನ್ಯಾಯದ ಬಂಡಿಯನ್ನು ಸಮಾನವಾಗಿ ಮುನ್ನಡೆಸಿ ನಾಡನ್ನು ರಾಷ್ಟ್ರಕವಿ ಕುವೆಂಪು ರವರ ಸರ್ವಜನಾಂಗದ ಶಾಂತಿಯ ತೋಟವಾಗಿಸುವತ್ತ ಪ್ರಾಮಾಣಿಕವಾಗಿ ಶ್ರಮಿಸುತ್ತಿದ್ದೇವೆ ಎಂಬುದು ನಿಮ್ಮ ವಾಕ್ಯವಿದೆ. ಈ ನಾಡಿನ ಕನ್ನಡ ಶಾಲೆಗಳನ್ನು ಮೂಲೆ ಗುಂಪು ಮಾಡುವ ಮೂಲಕ ಕನ್ನಡಿಗರಿಗೆ ಗೌರವ ನೀಡುವ ಕೆಲಸ ನಿಮ್ಮದಾಗಬೇಕು ಅಲ್ಲವೇ ಗ್ರಾಮೀಣ ಭಾಗದಲ್ಲಿ ಕನ್ನಡ ಶಾಲೆಗಳಿಗೆ ವ್ಯವಸ್ಥೆ ಮೊದಲು ಸಂಬಂಧ ಪಟ್ಟ ಅಧಿಕಾರಿಗಳ ಮೂಲಕವಾದರೂ ತಿಳಿಯಿರಿ, ಉತ್ತಮ ಶಿಕ್ಷಕರ ವ್ಯವಸ್ಥೆ ಕೂಡಲೇ ಆಗಬೇಕಿದೆ, ಉತ್ತಮ ಸ್ವಚ್ಚತೆ ವ್ಯವಸ್ಥೆ, ಅನ್ನದಾತ ಮಕ್ಕಳಿಗೆ ಉತ್ತಮ ಮಾರ್ಗದರ್ಶನದ ವ್ಯವಸ್ಥೆ, ಪದವೀಧರ ಕನ್ನಡಿಗರಿಗೆ ಪ್ರತೀ ತಾಲ್ಲೂಕು ಮಟ್ಟದಲ್ಲಿ ಸರ್ಕಾರಿ ಕೆಲಸ ನೀಡುವ ಮೂಲಕ ಗ್ರಾಮೀಣ ಅನ್ನದಾತ ಮಕ್ಕಳ ಭದ್ರತಾ ವ್ಯವಸ್ಥೆ, ಗ್ರಾಮೀಣ ಮಕ್ಕಳ ತಾಯಿಯ ಕಣ್ಣೀರು ಒಳ್ಳೆಯದಲ್ಲ, ಇನ್ನೂ ಕಾಲ ಮಿಂಚಿಲ್ಲ ಕನ್ನಡಿಗ ಅನ್ನದಾತರಿಗೆ ಗೌರವ ನೀಡುವ ಮನಸ್ಸಿದ್ದರೆ ಮೊದಲು ಕನ್ನಡ ಮಕ್ಕಳಿಗೆ ಭದ್ರತೆಯ ವ್ಯವಸ್ಥೆ ನೀಡಿ, ಮಾನ್ಯ ಉಪ ಮುಖ್ಯ ಮಂತ್ರಿಗಳು ಕನ್ನಡದ ಮಗನಾಗಿ ಇಂಗ್ಲಿಷ್ ವ್ಯಾಮೋಹ ಯಾಕೆ ಬಂತು ಗೊತ್ತಿಲ್ಲ, ಗ್ರೇಟರ್ ಬೆಂಗಳೂರು ಅನ್ನೋ ಇಂಗ್ಲಿಷ್ ಭಾಷೆಯ ಹೆಸರನ್ನು ತೆಗೆದು, ಕನ್ನಡಿಗರ ಬೆಂಗಳೂರು ಎನ್ನುವ ಸುಂದರವಾದ ಹೆಸರು ನಾಮಕರಣವಾಗಲಿ ರಾಷ್ಟ್ರಕವಿ ಕುವೆಂಪು, ವರಕಾವಿ ದಾರಾ ಬೇಂದ್ರೆ ಯವರು, ಶಿವರಾಮ್ ಕಾರಂತರು ಹೀಗೇ ಇನ್ನೂ ಹಲವಾರು ಮಹನೀಯರು ಬಾಳಿ ಬದುಕಿ ನಮಗೆಲ್ಲ ಒಂದಷ್ಟು ಉತ್ತಮ ಸಂದೇಶ ನೀಡಿದ್ದಾರೆ.



ಈ ಸುಂದರವಾದ ಕನ್ನಡ ನೆಲ ಬೇರೆಯವರು ಇಲ್ಲಿ ನೆಲೆಸಿ ಅಶುದ್ಧ ಮಾಡುವುದು ಬೇಡ, ಪ್ರತೀ ತಾಯಿ ತನ್ನ ಮಕ್ಕಳಿಗೆ ಹೇಳುವ ಮೊದಲ ಮಾತು ನಾವು ಯಾರಿಗೂ ಕೆಟ್ಟದ್ದನ್ನು ಬಯಸಬಾರದು ಎಂಬ ಕಿವಿಮಾತು ಹಾಗೆಯೇ ಕನ್ನಡಿಗರು ಅದರಲ್ಲೂ ಅನ್ನದಾತರು ಮುಗ್ದರು ಇವರೂ ಸಹ ಇದೇ ಹಾದಿಯಲ್ಲಿ ಬದುಕುತ್ತಿದ್ದಾರೆ.

ಇಲ್ಲಿಯ ಮುಗ್ದ ಕನ್ನಡ ಮನಸ್ಸುಗಳ ನೋವು ಇನ್ನಾದರೂ ಅರ್ಥವಾಗಲಿ ನೀವು ಸಾಧಿಸಿದ್ದು ಒಂದಷ್ಟಾದರೆ, ಸಾಧಿಸ ಬೇಕಿರುವುದು ಬಹಳಷ್ಟಿದೆ ಎಂಬುದರ ಅರಿವು ನಿಮಗಾಗಲಿ. ಕರ್ನಾಟಕ ಅಭಿವೃದ್ಧಿ ಮಾದರಿಯ ಈ ಪಯಣದಲ್ಲಿ ನಮ್ಮ ಸಹಕಾರ ಇದ್ದೇ ಇರಬೇಕು ಎಂದಾದರೆ ಮೊದಲು ಕನ್ನಡ ಶಾಲೆಗಳು ಉಳಿಯಲಿ, ಕನ್ನಡ ಭಾಷೆಯ ವ್ಯವಹಾರ ಕಡ್ಡಾಯವಾಗಲಿ, ಕನ್ನಡ ಪದವೀಧರರಿಗೆ ಸರ್ಕಾರಿ ಕೆಲಸ ನೀಡಿ ಅನ್ನದಾನ ರೈತ ಮಕ್ಕಳಿಗೆ ಬೆನ್ನೆಲುಬಾಗಿ ನಿಲ್ಲಿ ಮುಂದೆಯೂ ಕೂಡ ಎಂದಿನಂತೆ ನಿಮ್ಮೊಂದಿಗಿರುತ್ತೇವೆ.



# ಬಾನು ಮುಷ್ತಾಕ್‌ಗೆ ಬೂಕರ್ ಪ್ರಶಸ್ತಿ




• **ಉದಯವಾಹಿನಿ, ಬೆಂಗಳೂರು**

ಕನ್ನಡದ ಲೇಖಕಿ ಬಾನು ಮುಷ್ತಾಕ್ ಅವರಿಗೆ 2025ನೇ ಸಾಲಿನ ಪ್ರತಿಷ್ಠಿತ ಬೂಕರ್ ಪ್ರಶಸ್ತಿ ಬಂದಿದ್ದು, ಇದು ಪ್ರತಿಯೊಬ್ಬ ಕನ್ನಡಿಗ ಮಹಿಳೆಯರಿಗೆ ಡಬಲ್ ಗೆಲುವು ಎಂದು ಇನ್ಫೋಸಿಸ್ ಫೌಂಡೇಶನ್ ಸಂಸ್ಥಾಪಕಿ, ಅಧ್ಯಕ್ಷೆ ಸುಧಾ ಮೂರ್ತಿ ಅವರು ಬುಧವಾರ ಹೇಳಿದ್ದಾರೆ.

ಲೇಖಕಿ, ಸಾಮಾಜಿಕ ಕಾರ್ಯಕರ್ತೆ ಮತ್ತು ವಕೀಲೆ ಬಾನು ಮುಷ್ತಾಕ್ ಅವರ ಸಣ್ಣ ಕಥಾ ಸಂಕಲನ ಹಾರ್ಟ್ ಲ್ಯಾಂಪ್ ಮಂಗಳವಾರ ರಾತ್ರಿ ಲಂಡನ್‌ನಲ್ಲಿ ಅಂತರರಾಷ್ಟ್ರೀಯ ಬೂಕರ್ ಪ್ರಶಸ್ತಿ ಗೆದ್ದಿದ್ದು, ಇದು ಕನ್ನಡಕ್ಕೆ ಸಿಕ್ಕ ಮೊದಲ ಪ್ರಶಸ್ತಿಯಾಗಿದೆ. ನನಗೆ ತುಂಬಾ ಸಂತೋಷವಾಗುತ್ತಿದೆ. ಒಬ್ಬ ಭಾರತೀಯಳಾಗಿ ಸಂತೋಷ ಪಡುತ್ತಿದ್ದೇನೆ. ಕನ್ನಡಿಗಳಾಗಿ ತುಂಬಾ ಸಂತೋಷವಾಗುತ್ತಿದೆ. ಲೇಖಕಿಯಾಗಿ ಮತ್ತು ಮಹಿಳೆಯಾಗಿ ಇನ್ನೂ ಹೆಚ್ಚು ಸಂತೋಷವಾಗುತ್ತಿದೆ. ಅವರು ಒಬ್ಬ ಮಹಾನ್ ಬರಹಗಾರ್ತಿ ಮತ್ತು ಇದು ಒಂದು ಉತ್ತಮ ಆರಂಭ. ಅವರಂತಹ ಅನೇಕ ಜನರು ವಿವಿಧ ಭಾಷೆಗಳಲ್ಲಿ ಬೂಕರ್ ಪ್ರಶಸ್ತಿಯನ್ನು ಪಡೆಯಲಿ ಎಂದು ಸುಧಾ ಮೂರ್ತಿ ಅವರು ಪಿಟಿಐ ತಿಳಿಸಿದ್ದಾರೆ. ದೀಪಾ ಭಸ್ತಿ ಅನುವಾದಿಸಿದ ಹಾರ್ಟ್ ಲ್ಯಾಂಪ್ ಕೃತಿಯನ್ನು ಬೂಕರ್ ಪ್ರಶಸ್ತಿಯ ತೀರ್ಪುಗಾರರು ಒಂದು ಆಮೂಲಾಗ್ರ ಅನುವಾದ ಎಂದು ಬಣ್ಣಿಸಿದ್ದಾರೆ. ಹಾಸನ ಜಿಲ್ಲೆಯವರಾದ ಬಾನು ಮುಷ್ತಾಕ್ ಅವರು 1948ರಲ್ಲಿ ಅರಸೀಕೆರೆಯ ಮುಸ್ಲಿಂ ಕುಟುಂಬವೊಂದರಲ್ಲಿ ಜನಿಸಿದರು. ಅವರ ತಂದೆ ಕರ್ನಾಟಕ ಸರ್ಕಾರದ ಆರೋಗ್ಯ ಇಲಾಖೆಯಲ್ಲಿ ಹೆಲ್ತ್ ಇನ್ಸ್‌ಪೆಕ್ಟರ್ ಆಗಿದ್ದವರು. ಏತನ್ಮಧ್ಯೆ, ನಟ ಶಿವರಾಜ್‌ಕುಮಾರ್ ಅವರು ಎಕ್ಸ್‌ನಲ್ಲಿ ಬಾನು ಮುಷ್ತಾಕ್ ಅವರಿಗೆ ತಮ್ಮ ಹೃತ್ಪೂರ್ವಕ ಅಭಿನಂದನೆಗಳನ್ನು ತಿಳಿಸಿದ್ದಾರೆ.


**ಜಾಗತಿಕ ಮಟ್ಟದಲ್ಲಿ ಕನ್ನಡ ಸಾಹಿತ್ಯವನ್ನು ಪರಿಚಯಿಸುವ, ಪ್ರಪಂಚದ ಗಮನವನ್ನು ಸೆಳೆಯುವ ನಿಮ್ಮ ಸಾಧನೆ ಕನ್ನಡ ಸಾಹಿತ್ಯ, ಸಾಂಸ್ಕೃತಿಕ ಪರಂಪರೆಗೆ ಉತ್ತಮ ಕೊಡುಗೆಯಾಗಿದೆ. ಈ ಗೌರವವು ಕನ್ನಡ ಸಾಹಿತ್ಯ ಜಗತ್ತನ್ನು ಮತ್ತಷ್ಟು ಬಲಪಡಿಸುತ್ತದೆ ಎಂದು ಶಿವಣ್ಣ ಹೇಳಿದ್ದಾರೆ.**

# ರಾಷ್ಟ್ರ ಶಂಖನಾದ ಮಹೋತ್ಸವದ ಸ್ಥಳದಲ್ಲಿ ಭಾರತದ ವಿಜಯಕ್ಕಾಗಿ ಶತಚಂಡಿ ಯಜ್ಞ ಆರಂಭ!

• **ಉದಯವಾಹಿನಿ, ಫೋಂಡಾ, ಗೋವಾ**

(ಸಚ್ಚಿದಾನಂದ ಪರಬ್ರಹ್ಮ ಡಾ. ಆಠವಲೆನಗರ) – ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ನಂತರ ಭಾರತವು ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ ನಂತರ ಕದನ ವಿರಾಮದ ಔಪಚಾರಿಕ ಘೋಷಣೆಯಾಗಿದ್ದರೂ, ಪಾಕಿಸ್ತಾನದಿಂದ ಗುಪ್ತ ಸ್ವರೂಪದ ಕುತಂತ್ರಗಳು ಮತ್ತು ಚಟುವಟಿಕೆಗಳು ಇನ್ನೂ ಮುಂದುವರಿದಿವೆ. ಇಂತಹ ಪರಿಸ್ಥಿತಿಯಲ್ಲಿ ಭಾರತದ ವಿಜಯಕ್ಕಾಗಿ ಮತ್ತು ಭೂಮಿಯ ಮೇಲಿನ ಏಕೈಕ ಸನಾತನ ರಾಷ್ಟ್ರವಾದ ಭಾರತದ ರಕ್ಷಣೆಗಾಗಿ, ಸನಾತನ ಸಂಸ್ಥೆಯ ವತಿಯಿಂದ ಫರ್ಮಾಗುಡಿ, ಫೋಂಡಾ, ಗೋವಾದಲ್ಲಿರುವ ಸನಾತನ ರಾಷ್ಟ್ರ ಶಂಖನಾದ ಮಹೋತ್ಸವದ ಪವಿತ್ರ ಭೂಮಿಯಲ್ಲಿ ಮೇ 20 ರಿಂದ 22, 2025 ರವರೆಗೆ ಮೂರು ದಿನ ಶತಚಂಡಿ ಯಜ್ಞವನ್ನು ಆಯೋಜಿಸಲಾಗಿದೆ. ಈ ಯಜ್ಞವನ್ನು ವಿಧಿಪೂರ್ವಕವಾಗಿ ಪ್ರಾರಂಭಿಸಲಾಗಿದೆ.

ಈ ಯಜ್ಞದಲ್ಲಿ ಯಜಮಾನರಾಗಿ ದಂಪತಿಗಳಾದ ಸದ್ಗುರು ನೀಲೇಶ ಸಿಂಗಬಾಳ ಮತ್ತು ಸಚ್ಚಿದಾನಂದ ಪರಬ್ರಹ್ಮ ಡಾ. ಜಯಂತ ಬಾಳಾಜಿ ಆಠವಲೆ ಅವರ ಆಧ್ಯಾತ್ಮಿಕ ಉತ್ತರಾಧಿಕಾರಿ ಶ್ರೀಸತ್‌ಶಕ್ತಿ (ಸೌ.) ಬಿಂದಾ ನೀಲೇಶ ಸಿಂಗಬಾಳ, ಹಾಗೂ ಸದ್ಗುರು ಡಾ. ಮುಕುಲ ಗಾಡಗೀಳ ಮತ್ತು ಸಚ್ಚಿದಾನಂದ ಪರಬ್ರಹ್ಮ ಡಾ. ಜಯಂತ ಆಠವಲೆ ಅವರ ಆಧ್ಯಾತ್ಮಿಕ ಉತ್ತರಾಧಿಕಾರಿ ಶ್ರೀಚಿತ್‌ಶಕ್ತಿ (ಸೌ.) ಅಂಜಲಿ ಮುಕುಲ ಗಾಡಗೀಳ ಅವರು ವಹಿಸಿಕೊಂಡಿದ್ದಾರೆ. ಯಜ್ಞದ ಪ್ರಾರಂಭದಲ್ಲಿ ಶ್ರೀಗಣೇಶ ಪೂಜೆ, ಪುಣ್ಯಾಹವಾಚನ, ಮಾತೃಕಾ ಪೂಜೆ, ನಾಂದೀಶ್ರಾದ್ಧದ ಜೊತೆಗೆ ವಾಸ್ತುಮಂಡಲ ದೇವತೆಗಳ ಆವಾಹನೆ, ಪೂಜೆ ಮತ್ತು ಇತರ ಧಾರ್ಮಿಕ ವಿಧಿಗಳನ್ನು ನೆರವೇರಿಸಲಾಯಿತು. ನಂತರ ಪ್ರಧಾನ ದೇವತೆಗಳ ಆವಾಹನೆ ಮತ್ತು ಪೂಜೆಯಾದ ನಂತರ ಪಂಚಾಕ್ಷರಿ ಹೋಮದ ದಿವ್ಯ ಪ್ರಕ್ರಿಯೆ ಸಂಪನ್ನವಾಯಿತು.


ಉದಯವಾಹಿನಿ ಚಿತ್ರ

ಈ ಶತಚಂಡಿ ಯಜ್ಞವು ಶಿವ ಆಗಮ ವಿದ್ಯಾ ನಿಧಿ ಆಗಮಾಚಾರ್ಯ ಶ್ರೀ. ಅರುಣಕುಮಾರ ಗುರುಮೂರ್ತಿ ಗುರುಮೂರ್ತಿ ಶಿವಾಚಾರ್ಯರ ಮಾರ್ಗದರ್ಶನದಲ್ಲಿ ನಡೆಯುತ್ತಿದ್ದು, ಯಜ್ಞ ವಿಧಿಗಳನ್ನು ನೆರವೇರಿಸುವಾಗ ಪುರೋಹಿತರು ಯಜ್ಞದ ಮಹತ್ವವನ್ನು ವಿವರಿಸುತ್ತಾ, ಎಲ್ಲಾ ದೇವತೆಗಳ ತೇಜಸ್ಸು, ಶಕ್ತಿ ಮತ್ತು ಕೃಪೆಯು ಚಂಡಿ ರೂಪದಲ್ಲಿ ಒಟ್ಟಾಗಿ ಪ್ರಕಟವಾಗುತ್ತದೆ ಎಂದು ತಿಳಿಸಿದರು. ಅದಕ್ಕಾಗಿಯೇ ಶ್ರೀಚಂಡಿದೇವಿಯನ್ನು ಮಹಿಷಾಸುರಮರ್ದಿನಿ ಎಂದು ಕರೆಯಲಾಗುತ್ತದೆ. ಅಷ್ಟಾದಶಭುಜ ಮಹಾಲಕ್ಷ್ಮಿ ಕೂಡಾ ಆಕೆಯ ಒಂದು ರೂಪವಾಗಿದ್ದು, ಬ್ರಹ್ಮ, ವಿಷ್ಣು ಮತ್ತು ಮಹೇಶ್ವರ ಎಂಬ ತ್ರಿಮೂರ್ತಿಗಳ ಶಕ್ತಿಯ ಸಾಕ್ಷಾತ್ ಮೂರ್ತ ಸ್ವರೂಪವೇ ಶ್ರೀ ಚಂಡಿದೇವಿ. ಆದ್ದರಿಂದ ಚಂಡಿ ಹೋಮದಲ್ಲಿ ಸಮಸ್ತ ಪೂಜೆಗಳ ಪರಿಪೂರ್ಣತೆ ಅಡಗಿದೆ ಎಂದರು.




# ರಾಸಾಯನಿಕಯುಕ್ತ ಮಾವು ಪತ್ತೆ ಮಾಡೋದು ಹೇಗೆ ಗೊತ್ತಾ?

ಮಾರುಕಟ್ಟೆಯಲ್ಲೀಗ ಮಾವಿನ ಹಣ್ಣುಗಳ ರಾಶಿಯನ್ನೇ ನಾವು ನೋಡಬಹುದು. ನೀವು ಎಲ್ಲಿಯೇ ಹೋದರು ಮಾವಿನ ಹಣ್ಣಿನ ಸ್ವಾದ ನಿಮ್ಮ ಮೂಗಿಗೆ ಹೊಡೆಯುತ್ತದೆ. ಅದರಲ್ಲೂ ವಿಭಿನ್ನ ತಳಿಯ ಮಾವಿನ ರುಚಿ ನೆನಪಿಸಿಕೊಂಡರೆ ಸಾಕು ಬಾಯಲ್ಲಿ ನೀರು ಬರುತ್ತದೆ. ಹಾಗೆ ನಮ್ಮ ದೇಹಕ್ಕೆ ಮಾವಿನ ಹಣ್ಣಿನಲ್ಲಿರುವ ಪೋಷಕಾಂಶಗಳು ಬಹಳ ಅಗತ್ಯ. ಹಾಗೆ ಅದರಿಂದ ಮಾಡುವ ಹಲವು ರೆಸಿಪಿಗಳು ಕೂಡ ನಮಗೆ ಇಷ್ಟವಾಗುತ್ತವೆ.

ಹಳ್ಳಿಗಳಲ್ಲಿ ಆದರೆ ಮಾವಿನ ಹಣ್ಣುಗಳನ್ನು ಮನೆ ಮನೆಯಲ್ಲೂ ಬೆಳೆಯುವುದು ನೋಡಬಹುದು. ಎಲ್ಲರ ಮನೆಯಲ್ಲಿ ಒಂದು ಅಥವಾ 2 ಮರಗಳು ಇದ್ದೇ ಇರುತ್ತವೆ. ಇನ್ನು ನಗರದಲ್ಲಿ ಮಾರುಕಟ್ಟೆಯಿಂದಲೇ ಖರೀದಿಸಿ ತಂದು ಸವಿಯುತ್ತಾರೆ. ಹೀಗೆ ಮಾರುಕಟ್ಟೆಯಿಂದ ತರುವಾಗ ಅವುಗಳ ಸುರಕ್ಷತೆಯ ಕುರಿತಾಗಿ ಪ್ರಶ್ನೆ ಇದ್ದೇ ಇರುತ್ತೆ. ಮಾವಿನ ಹಣ್ಣುಗಳನ್ನು ಈಗ ರಾಸಾಯನಿಕ ಪ್ರಕ್ರಿಯೆಯ ಮೂಲಕ ಹಣ್ಣು ಮಾಡುವುದು, ಬಹುಬೇಗ ಹಾಳಾಗದಂತೆ ಇಡಲು ಅವುಗಳಿಗೆ ರಾಸಾಯನಿಕ ಬೆರೆಸುವುದು, ಅವು ಕೆಂಪು, ಅರಶಿಣ ಬಣ್ಣ ಬರುವಂತೆ ಮಾಡಲು ಕೆಮಿಕಲ್ ಬಳಸುವುದು ಹೀಗೆ ಹತ್ತಾರು ರೀತಿಯಲ್ಲಿ ಮಾವಿನ ಹಣ್ಣುಗಳನ್ನು ಸಂಸ್ಕರಿಸುವುದು ನೋಡಬಹುದು. ನಮ್ಮ ಆರೋಗ್ಯದ ಮೇಲೆ ಪರಿಣಾಮ ಬೀರುವುದಂತು ಖಚಿತ. ಹೀಗಾಗಿ ಮಾರುಕಟ್ಟೆಯಲ್ಲಿ ಎಷ್ಟೇ ಸುಂದರವಾದ, ಸುವಾಸನೆ ಭರಿತ ಮಾವಿನ ಹಣ್ಣು ನೋಡಿದರು ಅದನ್ನು ಮನೆಗೆ ತಂದಾದ ಬಳಿಕ ಸವಿಯಲು ಹಿಂದು ಮುಂದು ನೋಡುವಂತಹ ಸಮಯ ಇದಾಗಿದೆ. ಯಾವ ಹಣ್ಣುಗಳನ್ನು ಈ ರಾಸಾಯನಿಕ ಪ್ರಕ್ರಿಯೆಗೆ ಒಳಪಡಿಸಲಾಗಿರುತ್ತದೆ ಎಂಬುದನ್ನು ಪತ್ತೆ ಮಾಡುವುದು ಅಷ್ಟು ಸುಲಭವಲ್ಲ. ಹಾಗೆ ಎಲ್ಲಾ ಮಾವುಗಳನ್ನು ನೈಸರ್ಗಿಕ ವಿಧಾನವಾಗಿ ಬೆಳೆದಿರುವುದಿಲ್ಲ, ಹಾಗೆ ಹಣ್ಣು ಕೂಡ ಮಾಡಿರುವುದಿಲ್ಲ. ಆದ್ರೆ ಇಲ್ಲೊಬ್ಬರು ನೀವು ಯಾವ ಮಾವಿನ ಹಣ್ಣು ಸೇವನೆಗೆ ಯೋಗ್ಯ ಎಂಬುದನ್ನು ಸುಲಭವಾಗಿ ಪತ್ತೆ ಮಾಡಬಹುದು ಎಂಬುದನ್ನು ವಿವರಿಸಿದ್ದಾರೆ. ಅದರಲ್ಲೂ ಲ್ಯೂಕ್ ಕೌಟಿನ್ಹೋ ಎಂಬ ಲೈಫ್‌ಸ್ಟೈಲ್ ಟೀಚರ್ ತನ್ನ ಇನ್‌ಸ್ಟಾಗ್ರಾಮ್ ಖಾತೆಯಲ್ಲಿ ಈ ಕುರಿತಾಗಿ ಒಂದು ವಿಡಿಯೋ ಹಂಚಿಕೊಂಡಿದ್ದು, ನಾವು ರಾಸಾಯನಿಕ ಮಾವುಗಳು ಅಥವಾ ಕೃತಕವಾಗಿ ಹಣ್ಣು ಮಾಡಲಾದ ಮಾವುಗಳನ್ನು ಸುಲಭವಾಗಿ ಗುರುತಿಸಲು ಏನು ಮಾಡಬೇಕು ಎಂಬುದನ್ನು ವಿವರಿಸಿದ್ದಾರೆ. ಮೊದಲು ಮಾವಿನ ಹಣ್ಣು ಖರೀದಿಸುವಾಗಲೇ ನಾವು ಎಚ್ಚರಿಕೆ ವಹಿಸಬೇಕು. ಮಾವಿನ ಹಣ್ಣಿನ ಮೇಲೆ ಕಪ್ಪು ಕಲೆಗಳಿದ್ದರೆ ಅಥವಾ ಸಣ್ಣ ಸಣ್ಣ ಕಪ್ಪು ಮಚ್ಚೆಗಳಂತಹ ರಚನೆಗಳು ಮೂಡಿದ್ದರೆ ಅದನ್ನು ಖರೀದಿಸಬಾರದಂತೆ. ಮಾವಿನ ಹಣ್ಣು ಒಂದೇ ಬಣ್ಣದಲ್ಲಿರಬೇಕು, ಅಂದರೆ ಹಣ್ಣುಗಳ ಮೇಲೆ ಕಲೆಗಳಿಲ್ಲದೆ ಇದ್ದರೆ ಸೂಕ್ತ ಎಂದು ಅವರು ಹೇಳಿದ್ದಾರೆ. ಹಾಗೆ ಮಾವಿನ ಹಣ್ಣುಗಳು ಕೈಯಲ್ಲಿ ಹಿಡಿದಾಗ ಅದು ಗಟ್ಟಿಯಾಗಿರಬೇಕು. ಕೆಲವೊಮ್ಮೆ ನೀವು ಮಾವಿನ ಹಣ್ಣನ್ನು ಕೈಯಲ್ಲಿ ಹಿಡಿದರೆ ಅದು ಹತ್ತಿಯಂತೆ ಮೃದು ಅಥವಾ ಮೆತ್ತಗಿನ ಅನುಭವ ನೀಡಿದರೆ ಅದನ್ನು ಖರೀದಿಸಬೇಡಿ. ಅಂಗಡಿಯವರು ಈ ಹಣ್ಣು ಚೆನ್ನಾಗಿ ಮಾಗಿದೆ ಎಂಬ ಸಮಜಾಯಿಷಿ ನೀಡುತ್ತಾರೆ. ಆದರೆ ಇದನ್ನು ರಾಸಾಯನಿಕ ಬಳಸಿ ಅಲ್ಲವೆ ಕೃತಕವಾಗಿ ಹಣ್ಣು ಮಾಡಿರುವ ಸಾಧ್ಯತೆ ಹೆಚ್ಚಾಗಿರಲಿದೆ. ಹಾಗೆ ಮನೆಯಲ್ಲಿ ಒಂದು ಜಗ್ ತೆಗೆದುಕೊಂಡು ಅದರಲ್ಲಿ ನೀರು ಹಾಕಿಕೊಳ್ಳಿ. ಈಗ ಈ ನೀರಿಗೆ ಮಾವಿನ ಹಣ್ಣನ್ನು ಹಾಕಿಕೊಳ್ಳಿ. ಮಾವಿನ ಹಣ್ಣು ಮುಳುಗಿದರೆ ಅದು ಉತ್ತಮ ಮಾವು. ಒಂದು ವೇಳೆ ನೀರಿನಲ್ಲಿ ಮಾವಿನ ಹಣ್ಣು ತೇಲುತ್ತಿದ್ದರೆ ಅದರಲ್ಲಿ ಕಾರ್ಬೈಡ್ ಎಂಬ ರಾಸಾಯನಿಕದಲ್ಲಿ ಸಂಸ್ಕರಿಸಬಹುದು. ಇದರಿಂದ ಮಾವು ಹಗುರವಾಗುತ್ತದೆ. ಅದು ತೇಲುವಂತೆ ಮಾಡಲಿದೆ ಎಂದು ಅವರು ವಿವರಿಸುತ್ತಾರೆ.

# ದೇಹದ ಚರ್ಮದಲ್ಲಿ ಕೆಂಪುದದ್ದುಗಳು ಟಿಬಿ ಕಾಯಿಲೆಯ ಲಕ್ಷಣಗಳಲ್ಲಿ ಒಂದು!


ಉದಯವಾಹಿನಿ ಚಿತ್ರ

ಟಿಬಿ ಕಾಯಿಲೆಯ ಬಗ್ಗೆ ಅಜಾಗರೂಕತೆ ಬೇಡ. ಸಣ್ಣದಾಗಿ ಕಂಡುಬರುವ ಕೆಮ್ಮಿನಿಂದ ಶುರುವಾಗುವ ಈ ಕಾಯಿಲೆ, ಕೊನೆಗೆ ತ್ವಚೆಯ ಮೇಲೆ ಕೆಂಪು ದದ್ದುಗಳು, ಚರ್ಮದ ಮೇಲೆ ಉಬ್ಬುಗಳು ಅಥವಾ ಚರ್ಮದಲ್ಲಿ ಕೆಂಪು ಅಥವಾ ಹಳದಿ ಬಣ್ಣದ ಗಂಟುಗಳು ಕಾಣಿಸಿಕೊಳ್ಳುವುದು ಈ ಕಾಯಿಲೆಯ ಪ್ರಮುಖ ಲಕ್ಷಣಗಳಲ್ಲಿ ಒಂದು. ಇದ್ದಕ್ಕಿದಂತೆ ಯಾರಿಗೆ ವಿಪರೀತ ಕೆಮ್ಮು, ಉಸಿರಾಟದಲ್ಲಿ ಸಮಸ್ಯೆಗಳು ಕಾಣಿಸಿಕೊಳ್ಳುವುದು, ಎದೆಯಲ್ಲಿ ಕಫ ಕಟ್ಟಿಕೊಳ್ಳುವುದು ಕಫ ಉಗಿಯುವ ಸಂದರ್ಭದಲ್ಲಿ ರಕ್ತ ಬೀಳುವುದು, ಇತ್ಯಾದಿ ಸಮಸ್ಯೆಗಳು ಹೆಚ್ಚಾಗಿ ಕಂಡು ಬರುತ್ತವೆ ಅವರಿಗೆ ಟ್ಯೂಬರ್ಕ್ಯುಲೋಸಿಸ್ ಅಥವಾ ಟಿಬಿ ಕಾಯಿಲೆ ಇದೆ ಎಂದು ಹೇಳಬಹುದು. ಆದರೆ ಇತ್ತೀಚಿನ ವರದಿಯ ಪ್ರಕಾರ ಟಿಬಿ ಸೋಂಕಿನ ಕೆಲವು ಲಕ್ಷಣಗಳು ಚರ್ಮದ ಮೇಲೂ ಕಾಣಿಸಿಕೊಳ್ಳುತ್ತದೆಯಂತೆ!

ಹೌದು ಚರ್ಮದಲ್ಲಿ ಇದ್ದಕ್ಕಿದಂತೆ ಸೋಂಕಿನ ರೀತಿಯಲ್ಲಿ ಸಮಸ್ಯೆಗಳು ಕಾಣಿಸಿಕೊಂಡರೆ, ನಿರ್ಲಕ್ಷ್ಯ ಮಾಡಲು ಹೋಗಬೇಡಿ, ಅದು ಟ್ಯೂಬರ್ ಕ್ಯುಲೋಸಿಸ್ ಅಥವಾ ಕ್ಷಯ ರೋಗದ ಲಕ್ಷಣವಾಗಿರಬಹುದು ಇದರ ಹೊರತಾಗಿ ಇದ್ದಕ್ಕಿದಂತೆ ಕಣ್ಣು ಮಂಜಾಗುವುದು, ಕಣ್ಣುಗಳು ಕೆಂಪಾಗುವುದು ತಲೆ ನೋವಿನ ಜೊತೆಗೆ ತಲೆಸುತ್ತು ಕಾಣಿಸಿಕೊಳ್ಳುವುದು,ಇವೆಲ್ಲಾ ಈ ಕಾಯಿಲೆಯ ಇನ್ನೊಂದು ಗುಂಪಿನ ರೋಗ ಲಕ್ಷಣಗಳು ಎಂದು ಹೇಳಬಹುದು. ಹೀಗಾಗಿ ಇದ್ದಕ್ಕಿದಂತೆ ದೇಹದಲ್ಲಿ ಉಂಟಾಗುವ ಬದಲಾವಣೆಗಳನ್ನು ಅದರಲ್ಲೂ ತ್ವಚೆಯ ಮೇಲೆ ಕಾಣಿಸಿಕೊಳ್ಳುವ ಯಾವುದೇ ರೋಗಲಕ್ಷಣಗಳನ್ನು ನಿರ್ಲಕ್ಷ್ಯ ಮಾಡಲು ಹೋಗಬಾರದು ಎನ್ನುತ್ತಾರೆ ತಜ್ಞರು

**ವಿಶ್ವ ಆರೋಗ್ಯ ಸಂಸ್ಥೆ ಹೇಳುವ ಪ್ರಕಾರ :** ಈ ಕಾಯಿಲೆ ಬಗ್ಗೆ ವಿಶ್ವ ಆರೋಗ್ಯ ಸಂಸ್ಥೆ ಹೇಳುವ ಪ್ರಕಾರ ಇದೊಂದು ಸೋಂಕು ಕಾಯಿಲೆ ಆಗಿದ್ದು,(ಒಬ್ಬರಿಂದ ಒಬ್ಬರಿಗೆ ಹರಡುವ ವೈರಸ್) ಪ್ರಮುಖವಾಗಿ ಮನುಷ್ಯನ ಶ್ವಾಸಕೋಶ ವ್ಯವಸ್ಥೆಯ ಮೇಲೆ ದಾಳಿ ಮಾಡುವ ಬ್ಯಾಕ್ಟೀರಿಯಾಗಳು ಒಬ್ಬ ವ್ಯಕ್ತಿ ಕೆಮ್ಮಿದಾಗ ಅಥವಾ ಸೀನಿದಾಗ ಸಣ್ಣ ಸಣ್ಣ ನೀರಿನ ಕಣಗಳ ಮೂಲಕ ಬೇರೆಯವರಿಗೆ ಬಹಳ ಬೇಗನೇ ಹರಡುತ್ತದೆಯಂತೆ


ಶ್ವಾಸಕೋಶದ ಹೊರತಾಗಿ ಈಕಾಯಿಲೆ ದೇಹದ ಇತರ ಅಂಗಾಂಗಳ ಮೇಲೂ ಕೂಡ ದಾಳಿ ಮಾಡುತ್ತವೆ ಈ ಬಗ್ಗೆ ಗಾಜಿಯಾಬಾದ್‌ನ ಜಿಲ್ಲಾ ಕ್ಷಯರೋಗ ಅಧಿಕಾರಿ ಡಾ. ಅನಿಲ್ ಯಾದವ್ ಅವರು ಹೇಳುವ ಪ್ರಕಾರ, ಶ್ವಾಸಕೋಶದ ಹೊರತಾಗಿ, ಹೊಟ್ಟೆ, ಲಿವರ್, ಗರ್ಭಾಶಯ, ಮೂಳೆಗಳು ಚರ್ಮದಲ್ಲಿಯೂ ಕ್ಷಯರೋಗ ಸೋಂಕು ಸಕಂಡು ಬರುವ ಸಾಧ್ಯತೆ ಇರುತ್ತದೆ. ಇನ್ನು ಕೆಲವರಿಗೆ ಮೂತ್ರಪಿಂಡಗಳ ಅಸಹಜ ಕಾರ್ಯ ಚಟುವಟಿಕೆ ಸಹ ಉಂಟಾಗಬಹುದು.

ಅಷ್ಟೇ ಅಲ್ಲದೆ ದೇಹದ ತ್ವಚೆಯ ಮೇಲೆಯೂ ಕೂಡ ಈ ಸೋಂಕಿಗೆ ಸಂಬಂಧಪಟ್ಟ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳುವ ಸಾಧ್ಯತೆ ಹೆಚ್ಚಿರುತ್ತದೆ ಆದರೆ ನಮ್ಮಲ್ಲಿ ಹೆಚ್ಚಿನವರು ಇವೆಲ್ಲಾ ಸಾಮಾನ್ಯ ಆರೋಗ್ಯ ಸಮಸ್ಯೆಗಳು ಎಂದು ನಿರ್ಲಕ್ಷ್ಯ



ಮಾಡುವುದರಿಂದ ಕೊನೆಗೆ ಪರಿಸ್ಥಿತಿ ಕೈಮೀರಿ ಹೋಗುವ ಸಾಧ್ಯತೆ ಹೆಚ್ಚಿರುತ್ತದೆ.

**ತ್ವಚೆಯಲ್ಲಿ ಕಾಣಿಸಿಕೊಳ್ಳುವ ಸಮಸ್ಯೆಗಳು :** ಚರ್ಮದ ಮೇಲಿನ ಟಿಬಿ ಸೋಂಕಿನ ಲಕ್ಷಣಗಳಲ್ಲಿ ಕೆಂಪು ದದ್ದುಗಳು, ಗಾಯಗಳು, ಉಬ್ಬಿದ ಗಡ್ಡೆಗಳು ಮತ್ತು ನೋವಿನ ಹುಣ್ಣುಗಳು ಸೇರಿವೆ ಎಂದು ಡಾ. ಅನಿಲ್ ಯಾದವ್ ವಿವರಿಸುತ್ತಾರೆ. ಇದರ ಹೊರತಾಗಿ, ಚರ್ಮದ ಬಣ್ಣದಲ್ಲಿಯೂ ಕೂಡ ಆಗಾಗ ಬದಲಾವಣೆ ಕಾಣಿಸಿಕೊಳ್ಳುವುದು ಕೂಡ ಈ ಕಾಯಿಲೆಯ ಪ್ರಮುಖ ಲಕ್ಷಣಗಳಲ್ಲಿ ಒಂದು ಎನ್ನುತ್ತಾರೆ ತಜ್ಞರು. ಡಾ. ಅನಿಲ್ ಯಾದವ್ ಪ್ರಕಾರ, ಚರ್ಮದ ಮೇಲಿನ ಟಿಬಿ ಸೋಂಕು ಲೂಪಸ್ ವಲ್ಗ್ಯಾರಿಸ್ ಅನ್ನು ಒಳಗೊಂಡಿದೆ. ಇದು ಚರ್ಮದ ಮೇಲೆ ಕೆಂಪು, ಗಟ್ಟಿಯಾದ ಮತ್ತು ಸಾಮಾನ್ಯವಾಗಿ ನೋವುರಹಿತ ದದ್ದುಗಳು ಅಥವಾ ಗಡ್ಡೆಗಳನ್ನು ಉಂಟುಮಾಡುತ್ತದೆ.



ದದ್ದುಗಳು ನಿಧಾನವಾಗಿ ಹರಡುತ್ತವೆ ಮತ್ತು ಹುಣ್ಣುಗಳಾಗಿ ಬದಲಾಗಬಹುದು! ಇದರ ಹೊರತಾಗಿ, ಚರ್ಮದ ಮೇಲೆ ಸ್ಕ್ರೋಫುಲೋ ಡರ್ಮಾ ಸಂಭವಿಸುತ್ತದೆ, ಇದರಲ್ಲಿ ಕುತ್ತಿಗೆ ಮತ್ತು ಭುಜಗಳ ಸುತ್ತಲೂ ಗಡ್ಡೆಗಳಿರುತ್ತವೆ, ಅದು ನಂತರ ಹುಣ್ಣುಗಳಾಗಿ ಬದಲಾಗುತ್ತದೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
| ಗುಳಿಕ ಕಾಲ | ಬೆಳಿಗ್ಗೆ | 09:00 ರಿಂದ 10:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ** ನಿಮ್ಮ ದಿಟ್ಟ ಮತ್ತು ನಿರ್ಭಯ ಅಭಿಪ್ರಾಯಗಳು ನಿಮ್ಮ ಸ್ನೇಹಿತನ ಆತ್ಮಗೌರವವನ್ನು ಹಾನಿ ಮಾಡಬಹುದು. ಯಾವುದೇ ವ್ಯಕ್ತಿಯ ಸಹಾಯವಿಲ್ಲದೆ ನೀವು ಹಣವನ್ನು ಗಳಿಸಲು ಸಾಧ್ಯವಾಗುತ್ತದೆ.

**ವೃಷಭ** ಮನೆಯಲ್ಲಿ ಒತ್ತಡ ನಿಮಗೆ ಸಿಟ್ಟು ತರಿಸಬಹುದು. ಅವುಗಳನ್ನು ದಮನಗೊಳಿಸುವುದು ಕೇವಲ ದೈಹಿಕ ಸಮಸ್ಯೆಯನ್ನು ಹೆಚ್ಚಿಸುತ್ತದೆ. ದೈಹಿಕ ಚಟುವಟಿಕೆಯೊಂದಿಗೆ ಇದನ್ನು ತೊಡೆದುಹಾಕಿ.

**ಮಿಥುನ** ನಿಮ್ಮ ತಂದೆಯ ಯಾವುದೇ ಸಲಹೆ ಇಂದು ಕೆಲಸದ ಸ್ಥಳದಲ್ಲಿ ಇಂದು ನಿಮಗೆ ಹಣದ ಪ್ರಯೋಜನವನ್ನು ನೀಡುತ್ತದೆ. ಜನರು ಮತ್ತು ಅವರ ಉದ್ದೇಶಗಳ ಬಗ್ಗೆ ಅವಸರದ ತೀರ್ಮಾನ ಕೈಗೊಳ್ಳಬೇಡಿ.

**ಕರ್ಕಾಟಕ** ಅನಂತ ಜೀವನದ ಉತ್ಕೃಷ್ಟ ವೈಭವವನ್ನು ಆನಂದಿಸಲು ನಿಮ್ಮ ಜೀವನವನ್ನು ಹೆಚ್ಚು ಭವ್ಯಗೊಳಿಸಿ. ಚಿಂತೆಯ ಅನುಪಸ್ಥಿತಿ ಈ ದಿಕ್ಕಿನಲ್ಲಿ ಮೊದಲ ಹೆಜ್ಜೆ. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ.

**ಸಿಂಹ** ನಿಮ್ಮ ರೆಸ್ಯೂಮ್ ಕಳುಹಿಸಲು ಅಥವಾ ಸಂದರ್ಶನಕ್ಕೆ ಹಾಜರಾಗಲು ಒಳ್ಳೆಯ ದಿನ. ಚಂದ್ರನ ಸ್ಥಿತಿಯನ್ನು ನೋಡಿದರೆ, ಇಂದು ನಿಮಗೆ ಸಾಕಷ್ಟು ಉಚಿತ ಸಮಯ ಸಿಗುತ್ತದೆ ಎಂದು ಹೇಳಬಹುದು.

**ಕನ್ಯಾ** ಸಕಾರಾತ್ಮಕವಾಗಿರುವ ಮತ್ತು ಬೆಂಬಲ ನೀಡುವ ಸ್ನೇಹಿತರೊಂದಿಗೆ ಹೊರಗೆ ಹೋಗಿ. ಯಾರನ್ನೂ ಚುಡಾಯಿಸಬೇಡಿ. ನಿಮ್ಮ ಕೌಶಲ್ಯಗಳನ್ನು ತೋರಿಸಲು ಅವಕಾಶಗಳು ಇಂದು ನಿಮ್ಮೊಂದಿಗಿವೆ.

**ತುಲಾ** ಹಿಂದಿನ ಬಂಡವಾಳದಿಂದ ಆದಾಯವನ್ನು ನಿರೀಕ್ಷಿಸಿದ್ದಲ್ಲಿ. ಕುಟುಂಬದ ಸದಸ್ಯರ ಸಹಾಯ ನಿಮ್ಮ ಅಗತ್ಯಗಳನ್ನು ಪೂರೈಸುತ್ತದೆ. ರಹಸ್ಯ ಪ್ರಣಯಗಳು ನಿಮ್ಮ ಖ್ಯಾತಿಯನ್ನು ನಾಶಮಾಡಬಹುದು.

**ವೃಶ್ಚಿಕ** ಕುಟುಂಬದಲ್ಲಿ ಒಬ್ಬ ವಯಸ್ಸಾದ ವ್ಯಕ್ತಿಯ ಆರೋಗ್ಯ ಸ್ವಲ್ಪ ಒತ್ತಡಕ್ಕೆ ಕಾರಣವಾಗಬಹುದು. ಪ್ರೀತಿಯ ಸಂಗೀತವನ್ನು ಯಾವಾಗಲೂ ಅದರಲ್ಲೇ ಮುಳುಗಿರುವವರು ಕೇಳಬಹುದು.

**ಧನಸ್ಸು** ನಿಮ್ಮ ಭಯವನ್ನು ಗುಣಪಡಿಸಲು ಇದು ಒಳ್ಳೆಯ ಸಮಯ. ಇದು ಭೌತಿಕ ಚೈತನ್ಯವನ್ನು ಕಡಿಮೆ ಮಾಡುವುದಲ್ಲದೇ ಜೀವಿತಾವಧಿಯನ್ನೂ ಕಡಿಮೆ ಮಾಡುತ್ತದೆ ಎಂದು ನೀವು ಅರ್ಥ ಮಾಡಿಕೊಳ್ಳಬೇಕು.

**ಮಕರ** ನೀವೇನೇ ಮಾಡಿದರೂ ಸಾಮಾನ್ಯವಾಗಿ ನೀವು ತೆಗೆದುಕೊಳ್ಳುವ ಅರ್ಧ ಸಮಯದಲ್ಲಿ ಅದನ್ನು ಮಾಡಲು ನಿಮಗೆ ಸಾಧ್ಯವಾಗುತ್ತದೆ. ಹೊಸ ಆರ್ಥಿಕ ಒಪ್ಪಂದ ಕುದುರಿಸಲಾಗುತ್ತದೆ.

**ಕುಂಭ** ವಿಶ್ರಾಂತಿಯ ಸಲುವಾಗಿ ನಿಕಟ ಸ್ನೇಹಿತರೊಂದಿಗೆ ಸ್ವಲ್ಪ ಸಮಯ ಕಳೆಯಿರಿ. ನಿಮ್ಮ ಖರ್ಚುಗಳನ್ನು ನಿಯಂತ್ರಿಸಲು ಮತ್ತು ಕೇವಲ ಅಗತ್ಯವಾದ ವಸ್ತುಗಳ ಮಾತ್ರ ಇಂದು ಖರೀದಿಸಲು ಪ್ರಯತ್ನಿಸಿ.

**ಮೀನ** ಇತ್ತೀಚೆಗೆ ನಿಮ್ಮಲ್ಲಿ ಕೆಲವರು ಓವರ್‌ಟೈಮ್ ಮಾಡುತ್ತಿರುತ್ತಾರೆ ಹಾಗೂ ನಿಮ್ಮ ಚೈತನ್ಯ ಉಡುಗುತ್ತಿರುತ್ತದೆ– ಇಂದು ನೀವು ಒತ್ತಡ ಹಾಗೂ ಸಂದಿಗ್ಧತೆಯನ್ನು ಬಯಸುವುದಿಲ್ಲ.

---

● ಕಾರ್ಯಕ್ರಮಕ್ಕೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅವರಿಂದ ಹಸಿರು ನಿಶಾನೆ

# ''ಸುಗಮ್ಯ ಯಾತ್ರಾ'' ಅರಿವು ಮೂಡಿಸುವ ಜಾಥಾಕ್ಕೆ ಚಾಲನೆ

• ಉದಯವಾಹಿನಿ ಚಿತ್ರದುರ್ಗ

ಅಂಗವಿಕಲರ ಸಬಲೀಕರಣ ಉತ್ತೇಜಿಸುವ ಸಲುವಾಗಿ ಹಮ್ಮಿಕೊಂಡಿರುವ ''ಸುಗಮ್ಯ ಯಾತ್ರಾ'' ಅರಿವು ಮೂಡಿಸುವ ಜಾಥಾ ಕಾರ್ಯಕ್ರಮಕ್ಕೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಮೀಪದ ಒನಕೆ ಓಬವ್ವ ವೃತ್ತದಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರ, ದಿ ಅಸೋಷಿಯೇಷನ್ ಆಫ್ ಪೀಪಲ್‌ವಿತ್ ಡಿಸೆಬಿಲಿಟಿ (ಎಪಿಡಿ) ಸಂಯುಕ್ತಾಶ್ರಯದಲ್ಲಿ ''ಸುಗಮ್ಯ ಯಾತ್ರಾ- ಪ್ರತಿ ಹೆಜ್ಜೆ ಸಮಾನತೆಯ ಕಡೆಗೆ'' ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಎಲ್ಲರಿಗೂ ಸಮಾನ ಅವಕಾಶ-ಸುಗಮ್ಯ ಯಾತ್ರೆ ನಮ್ಮ ಹಕ್ಕು, ಸುಗಮ್ಯ ಭವಿಷ್ಯದ ಕಡೆಗೆ ಹೆಜ್ಜೆ ಹಾಕುವ ಒಟ್ಟಾಗಿ ನಡೆಯೋಣ, ಸುಗಮ ಸಮಾಜ ಕಟ್ಟೋಣ, ವಿಕಲಚೇತನ ವ್ಯಕ್ತಿಗಳ ಪ್ರಭುತ್ವಕ್ಕೆ ದಾರಿ ಹಾಸೋಣ, ಸುಗಮ್ಯ ಯಾತ್ರೆ -ಸೊಗಸಾದ ಜೀವನ, ನಡೆಯೋಣ ಸುಗಮ್ಯ ಮಾರ್ಗದಲ್ಲಿ, ಎಲ್ಲರಿಗೂ ಸಮಾನ ಸೌಲಭ್ಯದಲ್ಲಿ ನಾವು ನಿರ್ಬಂಧ ಮುಕ್ತ ಸಮಾಜದತ್ತ, ಅಡಚಣೆ ಇಲ್ಲದ ಹಾದಿ, ಸುಗಮ ಬದುಕಿನ ನಾಡಿ, ಸುಗಮ್ಯ ಯಾತ್ರೆ, ಸಮಾನತೆಗೊಂದು ಹೆಜ್ಜೆ, ಯಾರಿಗೂ ತಡೆಗೋಡೆಯಲ್ಲದ ಯಾನ-ಇದು ನಮ್ಮ ಗುರಿ ಎಂಬ ಜಾಗೃತಿ ಫಲಕ ಹಿಡಿದು ಘೋಷಣೆ ಕೂಗಿ, ''ಸುಗಮ್ಯ ಯಾತ್ರಾ'' ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸಲಾಯಿತು.



ಉದಯವಾಹಿನಿ ಚಿತ್ರ

> ಜಿಲ್ಲೆಯ ಎಲ್ಲಾ ಸರ್ಕಾರಿ ಕಛೇರಿಗಳು, ಸಾರ್ವಜನಿಕ ಕಟ್ಟಡಗಳು, ಬ್ಯಾಂಕುಗಳು, ಗ್ರಂಥಾಲಯಗಳು, ಅಂಗನವಾಡಿ ಕೇಂದ್ರಗಳು, ಶಾಲಾ-ಕಾಲೇಜುಗಳು, ಮನರಂಜನೆ ಸ್ಥಳಗಳು. ಉದ್ಯಾನವನಗಳು, ಮಾರುಕಟ್ಟೆ, ಪ್ರವಾಸಿ ತಾಣಗಳು ಮತ್ತು ಸಾರ್ವಜನಿಕ ಶೌಚಾಲಯಗಳು ವಿಕಲಚೇತನ ವ್ಯಕ್ತಿಗಳಿಗೆ ಅನುಕೂಲವಾಗುವಂತೆ ಅಡೆ-ತಡೆ ರಹಿತ ವಾತಾವರಣ ಹಾಗೂ ಮೂಲಭೂತ ಸೌಲಭ್ಯಗಳನ್ನು ಹೊಂದಿರುವ ಬಗ್ಗೆ ಅಥವಾ ಇವುಗಳನ್ನು ವಿಕಲಚೇತನ ವ್ಯಕ್ತಿಗಳ ಸ್ನೇಹಮಹಿಯಾಗಿ ಪರಿವರ್ತಿಸುವ ಬಗ್ಗೆ ಕೈಗೊಳ್ಳಬಹುದಾದ ಕ್ರಮಗಳ ಬಗ್ಗೆ ಸಾಮಾಜಿಕ ಪರಿಶೋಧನೆಯನ್ನು yes to access application ಮೂಲಕ ಮಾಹಿತಿಯನ್ನು ಸಂಗ್ರಹಿಸುವ ನಿಟ್ಟಿನಲ್ಲಿ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಗ್ರಾಮೀಣ, ನಗರ, ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ವಿವಿಧ ಇಲಾಖೆಗಳು, ಸ್ವಯಂ ಸೇವಾ ಸಂಸ್ಥೆಗಳ ಸಹಕಾರದೊಂದಿಗೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ಅನುಷ್ಟಾನಗೊಳಿಸಲಾಗುತ್ತಿದೆ -ಜೆ.ವೈಶಾಲಿ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ

ಎಲ್ಲಾ ಸರ್ಕಾರಿ ಹಾಗೂ ಸಾರ್ವನಿಕ ಕಟ್ಟಡಗಳಲ್ಲಿರುವ ಮೂಲಭೂತ ಸೌಕರ್ಯಗಳಾದ ಶೌಚಾಲಯ, ರಾಂಪ್, ಟ್ಯಾಕ್‌ಟೈಲ್ಸ್ ಮತ್ತು ಸೈನೇಜ್ ಬೋರ್ಡ್‌ಗಳು ಒಳಗೊಂಡಂತೆ ವಿಕಲಚೇತನ ವ್ಯಕ್ತಿಗಳ ಸ್ನೇಹ ಮಹಿಯಾಗಿರುವ ಬಗ್ಗೆ ಮಾಹಿತಿಯನ್ನು ಕ್ರೂಢೀಕರಿಸಲು ಕೇಂದ್ರ ಸರ್ಕಾರವು ರಾಜ್ಯ ಸರ್ಕಾರದ ದಿ ಅಸೋಸಿಯೇಷನ್ ಆಫ್ ಪೀಪಲ್ ವಿತ್ ಡಿಸೆಬಿಲಿಟಿ ಬೆಂಗಳೂರು ಈ ಸಂಸ್ಥೆಯೊಂದಿಗೆ ಒಪ್ಪಂದ ಮಾಡಿಕೊಂಡಿರುತ್ತದೆ. ದಿ ಅಸೋಸಿಯೇಷನ್ ಆಫ್ ಪೀಪಲ್ ವಿತ್ ಡಿಸಬಿಲಿ ಸಂಸ್ಥೆಯು ಅಡೆ-ತಡೆ ರಹಿತ ವಾತಾವರಣದ ಬಗ್ಗೆ ಸಂಪೂರ್ಣ ಮತ್ತು ನಿಖರವಾದ ಮಾಹಿತಿಯನ್ನು ಸಂಗ್ರಹಿಸಲು yes to access ಎಂಬ ಆ್ಯಪ್ ಅನ್ನು ಅಭಿವೃದ್ಧಿ ಪಡಿಸಿದೆ. ಈ ಆ್ಯಪ್ ಅನ್ನು Google play store & Apple store ಮುಖಾಂತರ ಸಾಮಾನ್ಯ ವ್ಯಕ್ತಿಗಳು ಸಹ ಡೌನ್ ಲೋಡ್ ಮಾಡಿಕೊಳ್ಳಲು ಅವಕಾಶ ಕಲ್ಪಿಸಿದೆ. ಈ yes to access application ಕನ್ನಡ, ಆಂಗ್ಲ ಅಥವಾ ಹಿಂದಿ ಭಾಷೆಗಳಲ್ಲಿ ಮೊಬೈಲ್‌ನಲ್ಲಿ ಡೌನ್‌ಲೋಡ್ ಮಾಡಿಕೊಂಡು ಅಡೆ-ತಡೆ ರಹಿತ ವಾತಾವರಣದ ಮಾಹಿತಿಯನ್ನು ಸಂಗ್ರಹಿಸಬಹುದಾಗಿದೆ. ಈ ಅಪ್ಲಿಕೇಷನ್ ಅನ್ನು ಬಳಸಲು ಹೆಚ್ಚಿನ ತಂತ್ರಜ್ಞಾನದ ಅವಶ್ಯಕತೆ ಇರುವುದಿಲ್ಲ. ಸಾಮಾನ್ಯ ವ್ಯಕ್ತಿಯು ಸಹ ತನ್ನ ಮೊಬೈಲ್‌ನಿಂದ ಈ ಆ್ಯಪ್‌ಅನ್ನು ಸುಲಭವಾಗಿ ಬಳಸಲು ಸಾಧ್ಯವಿದೆ ಎಂದು ಹೇಳಿದರು. ನಗರದ ಒನಕೆ ಓಬವ್ವ ವೃತ್ತದಿಂದ ಆರಂಭವಾದ ಸುಗಮ್ಯ ಯಾತ್ರೆ ಜಾಥಾವು ಮದಕರಿ ವೃತ್ತ, ಸ್ಟೇಡಿಯಂ ರಸ್ತೆ ಮೂಲಕ ಜಿಲ್ಲಾ ಬಾಲಭವನದವರೆಗೂ ಜಾಥಾ ನಡೆಯಿತು.

ಸುಗಮ ಸಮಾಜ ಕಟ್ಟೋಣ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಪವಿತ್ರ, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಸೇರಿದಂತೆ ಗ್ರಾಮೀಣ, ನಗರ, ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತರು ಇದ್ದರು.

### ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ಎಲ್ಲಾ ರಾಜ್ಯಗಳಿಗೆ ಸೂಚನೆ

ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ-2016ರ ಸೆಕ್ಷನ್ 40 ರಿಂದ 46 ರವರೆಗಿನ ಸೆಕ್ಷನ್‌ಗಳ ಪ್ರಕಾರ ವಿಕಲಚೇತನ ವ್ಯಕ್ತಿಗಳಿಗೆ ಅಗತ್ಯ ಇರುವ ಮೂಲಭೂತ ಸೌಕರ್ಯಗಳನ್ನು ಹಾಗೂ ಸರ್ಕಾರಿ ಮತ್ತು ಸಾರ್ವಜನಿಕ ಕಟ್ಟಡಗಳಲ್ಲಿ ಅಡೆ-ತಡೆ ರಹಿತ ವಾತಾವರಣ, ಸಮಂಜಸ ಸೌಕರ್ಯ ನಿರ್ಮಿಸಬೇಕಾಗಿರುವುದು ಸರ್ಕಾರ ಮತ್ತು ಸ್ಥಳೀಯ ಸಂಸ್ಥೆಗಳ ಜವಾಬ್ದಾರಿಯಾಗಿರುತ್ತದೆ. ಪ್ರಸ್ತುತ ರಾಷ್ಟ್ರದಲ್ಲಿರುವ ಸರ್ಕಾರಿ ಕಛೇರಿಗಳು, ಸಾರ್ವಜನಿಕ ಕಟ್ಟಡಗಳು, ಮನರಂಜನೆ ಸ್ಥಳಗಳು. ಉದ್ಯಾನವನಗಳು, ಗ್ರಂಥಾಲಯಗಳು, ಮಾರುಕಟ್ಟೆ, ಪ್ರವಾಸಿ ತಾಣಗಳು ಮತ್ತು ಸಾರ್ವಜನಿಕ ಶೌಚಾಲಯಗಳು ಆಡೆ-ತಡೆ ರಹಿತ ವಾತಾವರಣ ಒಳಗೊಂಡಿರುವ ಬಗ್ಗೆ ಮಾಹಿತಿ ಕಲೆ ಹಾಕಲು ಹಾಗೂ ಈ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಭಾರತ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಾಲಯವು ಸುಗಮ್ಯ ಯಾತ್ರಾ ಎಂಬ ಅರಿವು ಮೂಡಿಸಲು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ಎಲ್ಲಾ ರಾಜ್ಯಗಳಿಗೆ ಸೂಚಿಸಿದೆ ಎಂದು ಹೇಳಿದರು.

---

## ಅಕ್ರಮ ಗೋಸಾಗಾಣಿಗೆ ಕಡಿವಾಣ ಹಾಕಿ: ಚೋಕಾ

• ಉದಯವಾಹಿನಿ, ಕಾಳಗಿ

ಬರುವ ಬಕ್ರೀದ್ ಹಬ್ಬದ ನೆಪದಲ್ಲಿ ಸಾವಿರಾರು ಗೋವುಗಳ ಮಾರಣಹೋಮವಾಗುತ್ತಿದ್ದು, ಅಕ್ರಮವಾಗಿ ವಾಹಾನಗಳಲ್ಲಿ ಸಾಗಿಸುತ್ತರುವ ಗೋವುಗಳ ಸಂರಕ್ಷಣೆಗೆ ಅಧೀಕಾರಿಗಳು ನಿಲ್ಲುವಂತೆ ಹಿಂದೂ ಸಂಘಟನಾಕಾರರು ಆಗ್ರಹಿಸಿದ್ದಾರೆ.

ಗೋವುಗಳ ರಕ್ಷಣೆಗಾಗಿ ಹಿಂದೂ ಜಾಗೃತಿ ಸೇನೆ ತಾಲ್ಲೂಕು ಘಟಕ ಕಾಳಗಿ ವತಿಯಿಂದ ಮಂಗಳವಾರ ತಹಶೀಲ್ದಾರರಿಗೆ ಹಾಗೂ ವೃತ್ತ ನಿರೀಕ್ಷಕರು ಹಾಗೂ ಆರಕ್ಷಕ ಉಪ ನೀರಿಕ್ಷಕರಿಗೆ ಬಕ್ರೀದ್ ಹಬ್ಬದ ಪ್ರಯುಕ್ತ ತಾಲ್ಲೂಕಿನಲ್ಲಿ ಚೆಕ್ ಪೋಸ್ಟ್ ವ್ಯವಸ್ಥೆ ಮಾಡಿ ಅಕ್ರಮವಾಗಿ ವಾಹನಗಳಲ್ಲಿ ಗೋಸಾಗಾಣಿಕೆ ಮಾಡುವವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಮನವಿ ಪತ್ರ ಸಲ್ಲಿಸಲಾಯಿತು.

ಹಿಂದೂ ಜಾಗೃತಿ ಸೇನೆ ತಾಲ್ಲೂಕು ಅಧ್ಯಕ್ಷ ಶಂಕರ ಚೋಕಾ, ಗೌರವಾಧ್ಯಕ್ಷ ರಾಜಕುಮಾರ ರಾಜಾಪೂರ, ಅಮೃತರಾವ ಮಾಲಿಪಾಟೀಲ, ಭೀಮರಾಯ ಮಲಘಾಣ, ರಾಹುಲ್ ಚಿತ್ತಾಪೂರ, ಶ್ರೀಶೈಲ ಮಠಪತಿ ಉಪಸ್ಥಿತರಿದ್ದರು.

---

## ಮಹಿಳೆಯರು ಈ ದೇಶದ ಆಸ್ತಿ ಮತ್ತು ಶಕ್ತಿ: ನಗರಸಭೆ ಅಧ್ಯಕ್ಷ ಎಂ ಶಮಿವುಲ್ಲಾ

• ಉದಯವಾಹಿನಿ, ಅರಸೀಕೆರೆ

ಕೇಂದ್ರ ಸರ್ಕಾರದ ಅಮೃತಮಿತ್ರ 2.0 ಕಾರ್ಯಕ್ರಮದ ಅಡಿಯಲ್ಲಿ ಮಹಿಳೆಯರು ತಮ್ಮ ಕುಟುಂಬದ ತಾಯಿಯ ಹೆಸರಿನಲ್ಲಿ ಒಂದು ಸಸಿಯನ್ನು ಪಾಲನೆ ಪೋಷಣೆ ಮಾಡಿ ದೇಶದ ಪರಿಸರವನ್ನು ಕಾಪಾಡುವಂತೆ ಈ ಕಾರ್ಯಕ್ರಮ ಜಾರಿಗೆ ತಂದಿರುವುದು ಸಂತೋಷದ ವಿಚಾರವಾಗಿದೆ ಸರ್ಕಾರಗಳು ಇದುವರೆಗೂ ಸಹ ಸಸಿಗಳನ್ನು ನೆಟ್ಟು ಪಾಲನೆ ಪೋಷಣೆ ಮಾಡಿ ಪರಿಸರಕ್ಕಾಗಿ ಹಲವಾರು ಕಾರ್ಯಕ್ರಮಗಳನ್ನು ಜಾರಿಗೆ ತಂದಿರದ್ದರೂ ಸಹ ಅವುಗಳು ಸಾಕಷ್ಟು ಮಟ್ಟಿಗೆ ಯಶಸ್ವಿಯಾಗದೇ ಇರುವುದು ನೋವಿನ ಸಂಗತಿ ಆದ್ದರಿಂದ ಸರ್ಕಾರ ಸ್ಥಳೀಯ ಸಂಸ್ಥೆ ಅಂದರೆ ನಗರ ಸಭೆ ವ್ಯಾಪ್ತಿಗಳಲ್ಲಿನ ಮಹಿಳೆಯರಿಂದ ತಮ್ಮ ತಾಯಿ ಹೆಸರಿನಲ್ಲಿ ಸಸಿ ನೆಡೆಯುವ ಕಾರ್ಯಕ್ರಮವನ್ನು ಜಾರಿಗೊಳಿಸಿರುವುದು ಯಶಸ್ವಿಯಾಗುವುದರಲ್ಲಿ ಯಾವುದೇ ಸಂದೇಹವಿಲ್ಲ ನಮ್ಮ ನಗರಸಭೆ ವ್ಯಾಪ್ತಿಯಲ್ಲಿ 5,000 ಸಸಿಗಳನ್ನು ಮಹಿಳೆಯರಿಂದಲೇ ನಡೆಸಿ ಇದಕ್ಕೆ ಪಾಲನೆ ಪೋಷಣೆ ಮಾಡಿ ಪರಿಸರ ಸಂರಕ್ಷಣೆ ಮುಂದಾಗುವಂತೆ . ಕ್ರಮ ಕೈಗೊಳ್ಳಲಾಗುವುದು ಎಂದು ನಗರಸಭೆಯ ಅಧ್ಯಕ್ಷರಾದ ಎಮ್ ಶಮಿವುಲ್ಲಾ. ತಿಳಿಸಿದರು. ಅರಸೀಕೆರೆ ನಗರ ವ್ಯಾಪ್ತಿಯಲ್ಲಿನ ಜೇನುಕಲ್ ಬೆಟ್ಟದ ರಸ್ತೆಯಲ್ಲಿರುವ ನಗರಸಭೆಯ ನೀರು ಶುದ್ಧೀಕರಣ ಘಟಕದಲ್ಲಿ ನಡೆದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು ಇಂದು 200 ವಿವಿಧ ಜಾತಿಯ ಸಸಿಗಳನ್ನು ವಿತರಿಸಿ ಮಹಿಳೆಯರು ಈ ದೇಶದ ಆಸ್ತಿ ಮತ್ತು ಶಕ್ತಿ ಸರ್ಕಾರಗಳು ಮಹಿಳೆಯರ ಸ್ವಸಾಯ ಸಂಘಗಳು ಮತ್ತು ಸ್ತ್ರೀಶಕ್ತಿ ಸಂಘಗಳ ಮೂಲಕ ಹಲವಾರು ಯೋಜನೆಗಳನ್ನು ಹಮ್ಮಿಕೊಳ್ಳುತ್ತಾ ಬರುತ್ತಿದ್ದು ಇದರಲ್ಲೂ ಸಾಕಷ್ಟು ಕಾರ್ಯಕ್ರಮಗಳು ಇದಕ್ಕೆ ಸ್ಪಷ್ಟ ಉದಾರಣೆ ಎಂದರೆ ಅರಸೀಕೆರೆಯಲ್ಲಿ ಹಾಲಿ ಎರಡು ಉದ್ಯಾನವನಗಳನ್ನು ಸರ್ಕಾರದ ಆದೇಶದಂತೆ ಸ್ವಸಹಾಯ ಸಂಘಗಳಿಗೆ ನೀಡಲಾಗಿದ್ದು ಆ ಉದ್ಯಾನವನಗಳ ಮೇಲ್ವಿಚಾರಣೆ ಬಹಳ ಅಚ್ಚುಕಟ್ಟಾಗಿ ನಡೆಯುತ್ತಿದೆ ಇದಕ್ಕೆ ಸ್ಪಷ್ಟ ಉದಾಹರಣೆಯಾಗಿದೆ ಎಂದರು.


ಉದಯವಾಹಿನಿ ಚಿತ್ರ

> ಪರಿಸರ ಹಾಳಾಗುತ್ತಾ ಬರುತ್ತಿದ್ದು ಹಿಂದೆ ಮನೆಗೊಂದು ಕಾಡಿಗೊಂದು ವನ ಎಂಬ ವಚನಗಳಿದ್ದು ಈಗ ಸರ್ಕಾರ ಜಾರಿಗೆ ತಂದಿರುವ ಕುಟುಂಬದ ಯಜಮಾನಿ ಅಂದರೆ ತಾಯಿ ಹೆಸರಿನಲ್ಲಿ ಒಂದು ಸಸಿಯನ್ನು ನಡೆವುದು ಅದನ್ನು ನಿಟ್ಟು ಪಾಲನೆ ಪೋಷಣೆ ಮಾಡಿ ತಾಯಿಯನ್ನು ಹೇಗೆ ಕಾಪಾಡಿಕೊಳ್ಳುತ್ತೇವೆ ಹಾಗೆ ಸಸಿಯನ್ನು ಬೆಳೆಸುವುದು ಪ್ರತಿಯೊಬ್ಬರ ಆದ್ಯ ಕರ್ತವ್ಯವಾಗಿದೆ
> - ಎಂ ಶಮಿವುಲ್ಲಾ ನಗರಸಭೆಯ ಅಧ್ಯಕ್ಷ

ಪ್ರಭಾರ ಪೌರಯುಕ್ತರು ಮತ್ತು ಎ ಇ ಇ. ಸುನಿಲ್ ಕುಮಾರ್ ಕಂದಾಯ ಅಧಿಕಾರಿ ಮಂಜುನಾಥ್. ಸಮುದಾಯ ಸಂಘಟನಾಧಿಕಾರಿಗಳಾದ ರಾಜಶೇಖರ್. ಸಿಆರ್‌ಪಿ ವನಜಾಕ್ಷಿ.. ನಗರಸಭೆ ಉಪಾಧ್ಯಕ್ಷರಾದ ಮನೋಹರ್ ಮೇಸ್ತ್ರಿ. ನಗರಸಭೆ ಸದಸ್ಯರಾದ ದರ್ಶನ್ . ಮತ್ತು ನಾಲ್ಕು ಸ್ವಸಹಾಯ ಸಂಘಗಳ ಗುಂಪಿನ ಮಹಿಳೆಯರು ಉಪಸ್ಥಿತರಿದ್ದರು.

---

## ರೈತರ ಜಮೀನಿನಲ್ಲಿ ಸರ್ಕಾರಿ ಕಾಮಗಾರಿ

• ಉದಯವಾಹಿನಿ ಯಾದಗಿರಿ

ತಾಲ್ಲೂಕಿನ ಮುದ್ನಾಳ್ ಗ್ರಾಮದಲ್ಲಿ ರೈತರು ಗುಳೆ ಹೋದ ಸಂದರ್ಭದಲ್ಲಿ ಅವರ ಜಮೀನಿನಲ್ಲಿ ಸರ್ಕಾರಿ ಕಾಮಗಾರಿ ಮಾಡಿ ಅಧಿಕಾರಿಗಳು ಹಣ ಲಪಟಾಯಿಸಿದ್ದಾರೆ. ಸರ್ಕಾರಿ ಕಾಮಗಾರಿಯು ಹೆಸರಲ್ಲಿ ರೈತರ ಭೂಮಿ ನುಂಗಲು ಯತ್ನಿಸಿದ ಅಧಿಕಾರಿಗಳ ವಿರುದ್ಧ ಸಾಮಾಜಿಕ ಹೋರಾಟಗಾರ ಉಮೇಶ್ ಮುದ್ನಾಳ್ ಆಕ್ರೋಶ ಹೊರ ಹಾಕಿದ್ದಾರೆ.

**ಅಧಿಕಾರಿಗಳ ದಬ್ಬಾಳಿಕೆ**

ಮುದ್ನಾಳ್ ಗ್ರಾಮದ ಸರ್ವೇ ನಂಬರ್ 249/1 ರಲ್ಲಿ 3 ಎಕರೆ 5 ಗಂಟೆ ಖಾಸಗಿ ಜಮೀನು ಇದೆ. ಇದರ ಪಕ್ಕದಲ್ಲೇ 5 ಎಕರೆ 30 ಗುಂಟೆ ಸರ್ಕಾರಿ ಜಮೀನು ಇದೆ. ಆದರೆ ಸರ್ಕಾರಿ ಜಮೀನು ಬಿಟ್ಟು ಗುಳೇ ಹೋದ ರೈತರ ಜಮೀನಿನಲ್ಲಿ ಸರ್ಕಾರಿ ಕಾಮಗಾರಿ ಮಾಡಿದ್ದಾರೆ. ಇದರಲ್ಲಿ ಪಟ್ಟಭದ್ರ ಹಿತಾಸಕ್ತಿಗಳ ಕೈವಾಡವಿದೆ ಎಂದು ಉಮೇಶ್ ಮುದ್ನಾಳ್ ಶಂಕೆ ವ್ಯಕ್ತಪಡಿಸಿದ್ದಾರೆ.

ಸರ್ಕಾರದ ನಿಯಮಗಳನ್ನು ಗಾಳಿಗೆ ತೂರಿ ರೈತರ ಜಮೀನು ಕಬಳಿಸಲು ಯತ್ನಿಸಿದ ಅಧಿಕಾರಿಗಳ ಮೇಲೆ ಸೂಕ್ತ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ. ಕೂಡಲೇ ಖಾಸಗಿ ಜಮೀನಿನಲ್ಲಿ ನಿರ್ಮಾಣವಾದ ಕಟ್ಟಡ ತೆರವುಗೊಳಿಸಬೇಕು. ಜೊತೆಗೆ ಖರ್ಚಾದ ಸರ್ಕಾರದ ಅನುದಾನವನ್ನ ಅಧಿಕಾರಿಗಳಿಂದಲೇ ಸರ್ಕಾರದ ಬೊಕ್ಕಸಕ್ಕೆ ತುಂಬಿಸಬೇಕು ಅಂತ ಒತ್ತಾಯಿಸಿದ್ದಾರೆ.


ಉದಯವಾಹಿನಿ ಚಿತ್ರ

---

## ಮಟಕಾ ನಂಬರ್ ಬರೆದುಕೊಳ್ಳುತ್ತಿದ್ದ ವ್ಯಕ್ತಿ ಬಂಧನ

• ಉದಯವಾಹಿನಿ ಕಲಬುರಗಿ

ನಗರದ ಕಣ್ಣಿ ಮಾರ್ಕೆಟ್ ಹತ್ತಿರವಿರುವ ಸಾರ್ವಜನಿಕ ಶೌಚಾಲಯದ ಹತ್ತಿರ ಮಟಕಾ ಚೀಟಿ ಬರೆದುಕೊಳ್ಳಲಾಗುತ್ತಿದೆ ಎಂಬ ಮಾಹಿತಿ ಮೇಲೆ ಸಿಸಿಬಿ ಘಟಕದ ಪಿಐ ದಿಲೀಪಕುಮಾರ ಬಿ.ಸಾಗರ, ಸಿಬ್ಬಂದಿಗಳಾದ ಮೃತ್ಯುಂಜಯ, ಶ್ರೀಶೈಲ, ಯಲ್ಲಪ್ಪ, ಅಶೋಕ, ನಾಗರಾಜ, ಸುನೀಲಕುಮಾರ ಅವರು ದಾಳಿ ನಡೆಸಿ ಓರ್ವನನ್ನು ಬಂಧಿಸಿದ್ದಾರೆ.

ನಬಿ ಕಾಲೋನಿಯ ಖಾದ್ರಿ ಚೌಕ್ ನಿವಾಸಿ ಶಿವಕುಮಾರ ತಂದೆ ನಾಗೇಂದ್ರ ಮೇತ್ರೆ (30) ಎಂಬಾತನನ್ನು ಬಂಧಿಸಿ 8,600 ರೂ.ನಗದು, ಮಟಕಾ ಚೀಟಿ ಮತ್ತು ಒಂದು ಬಾಲ್ ಪೆನ್ ಜಪ್ತಿ ಮಾಡಿದ್ದಾರೆ. ಅಶೋಕನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

---

## ಕಾಲುವೆ ನೀರು: ಎಲ್ಲಾ ಹಳ್ಳ, ಕೆರೆ ಭರ್ತಿ

• ಉದಯವಾಹಿನಿ ಇಂಡಿ

ಸರಕಾರ ಹಾಗೂ ಜಿಲ್ಲಾಧಿಕಾರಿಗಳು ಕುಡಿಯುವ ನೀರಿಗೆ ಮೊದಲ ಪ್ರಾಶಸ್ತ್ಯ ನೀಡಿದ್ದರಿಂದ ಬಹುಹಳ್ಳಿ ಕುಡಿಯುವ ನೀರಿನ ಯೋಜನೆ ಅಡಿ ಕೆರೆಗಳನ್ನು ತುಂಬಿಸುವದಕ್ಕೆ ಮೊದಲ ಆದ್ಯತೆ ನೀಡಿ ಕಾಲುವೆ ಮೂಲಕ ಎಲ್ಲಾ ಕೆರೆ ಹಳ್ಳಗಳನ್ನು ಪೂರ್ತಿ ತುಂಬಲಾಗಿದೆ ಎಂದು ಕೃಷ್ಣಾ ಮೇಲ್ದಂಡೆ ಯೋಜನೆ ಅಧಿಕ್ಷಕ ಅಭಿಯಂತರ ಮನೋಜಕುಮಾರ ಗಡಬಳ್ಳಿ ಹೇಳಿದರು.

ಸಾಲೋಟಗಿ ಗ್ರಾಮದ ಕೃಷ್ಣಾ ನೀರಾವರಿ ಇಲಾಖೆ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಕುಡಿಯುವ ನೀರಿನ ತೊಂದರೆ ಇರುವ ಹಾಗೂ ಕಾಲುವೆ ಮೂಲಕ ನೀರು ಹೋಗದಿರುವ ಗ್ರಾಮಗಳ ವ್ಯಾಪ್ತಿಯ ಹಳ್ಳಗಳಿಗೆ ಇಂಡಿ ಶಾಖಾ ಕಾಲುವೆ ಮೂಲಕ ನೀರು ಹರಿಸಲಾಗಿದೆ. ಹಳ್ಳ ಕೊಳ್ಳ ಬಾಂದಾರುಗಳನ್ನು ತುಂಬಿದೆ ಎಂದರು. ತಾಲ್ಲೂಕಿನ ಬಳಗಾನೂರ ಕೆರೆ, ಸಂಗೋಗಿ ಕೆರೆ, ತುಂಬಿ ನಾದ ದೊಡ್ಡ ಹಳ್ಳ, ಮಾರ್ಸನಳ್ಳಿ ಬಳಿಯ ಹಳ್ಳ, ಹತ್ತಳ್ಳಿ ಹಾವಿನಾಳ ಅಗರಖೇಡ, ಹಿರೇಬೇವನೂರ, ಚಿಕ್ಕ ಬೇವನೂರ,ಮಿರಗಿ, ಗೋಳಸಾರ, ಹಲಸಂಗಿ, ಹಳ್ಳ ಸೇರಿದಂತೆ ಹಲವು ಕಾಲುವೆಗಳ ಮೂಲಕ ಭೀಮಾ ನದಿಗೆ ಸೇರಿದೆ. ಇದರಿಂದ ತಾಲ್ಲೂಕಿನ ಜನರಿಗೆ ಕುಡಿಯುವ ನೀರಿನ ಜೊತೆಗೆ ಜನ ಜಾನುವಾರುಗಳಿಗೆ ನೀರಿನ ತೊಂದರೆ ಆಗುವದಿಲ್ಲ ಎಂದರು.


ಉದಯವಾಹಿನಿ ಚಿತ್ರ

---

## ಉಡುಪಿಯಲ್ಲಿ ಮಳೆ ಆರ್ಭಟ

• ಉದಯವಾಹಿನಿ, ಉಡುಪಿ

ಉಡುಪಿಯಾದ್ಯಂತ ಭಾರೀ ಗಾಳಿ ಮಳೆಯಾಗುತ್ತಿದ್ದು ಜನ ಜೀವನ ಸಂಪೂರ್ಣ ಅಸ್ತವ್ಯಸ್ತಗೊಂಡಿದೆ. ನಗರದಲ್ಲಿ ಭಾರಿ ಮಳೆಯಿಂದಾಗಿ ಕೃತಕ ನೆರೆ ಸೃಷ್ಟಿಯಾಗಿದೆ.

ಹವಾಮಾನ ಇಲಾಖೆ ರೆಡ್ ಅಲರ್ಟ್ ಘೋಷಣೆ ಮಾಡಿದೆ. ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಎಚ್ಚರಿಕೆ ಸೂಚನೆ ರವಾನೆ ಮಾಡಲಾಗಿದೆ. ಅದರಂತೆ ಇಂದು ಮುಂಜಾನೆಯಿಂದಲೇ ವರ್ಷಧಾರೆ ಆಗುತ್ತಿದೆ. ಸತತ 3 ತಾಸಿನಿಂದ ಗಾಳಿ ಮಳೆಯಾಗಿದ್ದು ಬೆಳಗ್ಗಿನ ಸಮಯ ಜನರು ಕೆಲಸ ಕಾರ್ಯಗಳಿಗೆ ಹೋಗಲು ಪರದಾಡಬೇಕಾಯಿತು. ತಗ್ಗು ಪ್ರದೇಶಗಳಲ್ಲಿ ಕೃತಕ ನೆರೆ ಸೃಷ್ಟಿಯಾಗಿದ್ದು ಜನ ಜೀವನ ಸಂಪೂರ್ಣ ಅಸ್ತವ್ಯಸ್ತಗೊಂಡಿತು.

ಮಣಿಪಾಲದ ಐನಾಕ್ಸ್ ಬಳಿಯ ರಸ್ತೆ ಸಂಪೂರ್ಣವಾಗಿ ಮುಳುಗಿ, ಹರಿಯುವ ನದಿಯಂತೆ ಕಾಣುತ್ತಿತ್ತು, ಇದರಿಂದಾಗಿ ಅನೇಕ ವಾಹನಗಳು ಉಡುಪಿಯಿಂದ ಮಣಿಪಾಲ ತಲುಪಲು ಪರ್ಯಾಯ ಮಾರ್ಗಗಳನ್ನು ಹುಡುಕಬೇಕಾಯಿತು.

ಅವೈಜ್ಞಾನಿಕ ಚರಂಡಿ ನಿರ್ಮಾಣ ಮತ್ತು ಏಕಾಏಕಿ ಗಾಳಿ ಮಳೆ ಜೊತೆ ಕೆಸರು ಮಿಶ್ರಿತ ನೀರು ಬಂದ ಕಾರಣ ತಗ್ಗು ಪ್ರದೇಶದ ಅಂಗಡಿಗಳು ಮನೆಗಳು ಜಲಾಮಯವಾಗಿದೆ.

---

• ಉದಯವಾಹಿನಿ ಶಿರಸಿ

## ಲೋಕಾಯುಕ್ತ ಬಲೆಗೆ ಎಫ್‌ಡಿಎ

ಇಲ್ಲಿನ ಪಂಚಾಯತ್ ರಾಜ್ ಎಂಜಿನಿಯರಿಂಗ್ ವಿಭಾಗದ ಕಚೇರಿ ಮೇಲೆ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿ, ಪ್ರಥಮ ದರ್ಜೆ ಲೆಕ್ಕಾಧಿಕಾರಿಯನ್ನು (ಎಫ್‌ಡಿಎ) ಬುಧವಾರ ಬಂಧಿಸಿದ್ದಾರೆ.

ಶಿರಸಿಯ ಜಿಲ್ಲಾ ಪಂಚಾಯತ್‌ರಾಜ್ ಎಂಜಿನಿಯರಿಂಗ್ ವಿಭಾಗದ ಪ್ರಥಮ ದರ್ಜೆ ಲೆಕ್ಕಾಧಿಕಾರಿ ಸುರೇಶ ಬಿಳಗಿ ಬಂಧಿತರು. ವಿಭಾಗಕ್ಕೆ ಸಚಿನ್ ಕೋಡ್ಕಣಿ ಎಂಬುವವರು ಹೊರಗುತ್ತಿಗೆ ಆಧಾರದಲ್ಲಿ ಕಾರು ಬಾಡಿಗೆ ನೀಡಿದ್ದರು. ಅವರಿಗೆ 8 ತಿಂಗಳು ಬಾಡಿಗೆ ನೀಡುವುದು ಬಾಕಿ ಇತ್ತು. ಅದರಲ್ಲಿ 2 ತಿಂಗಳ ಬಾಡಿಗೆ ಹಣ ನೀಡಿ, ಉಳಿದ 6 ತಿಂಗಳ ಬಾಡಿಗೆ ಹಣ ಮಂಜೂರು ಮಾಡಲು ಶೇ 4ರಷ್ಟು ಹಣವನ್ನು ಬಿಳಗಿ ಅವರು ಲಂಚ ಕೇಳಿದ್ದರು. ಅದಕ್ಕೆ ಒಪ್ಪದ ಸಚಿನ್ ಕೋಡ್ಕಣಿ ಲೋಕಾಯುಕ್ತ ಪೊಲೀಸರಿಗೆ ದೂರು ನೀಡಿದ್ದರು. ಬುಧವಾರ ಬೆಳಿಗ್ಗೆ ಸಚಿನ್ ಕೊಡ್ಕಣಿ ಅವರ ಬಳಿ ಹಣ ಪಡೆಯುತ್ತಿದ್ದ ವೇಳೆ ಲೋಕಾಯುಕ್ತ ಇನ್‌ಸ್ಪೆಕ್ಟರ್ ವಿನಾಯಕ ಬಿಲ್ಲವ ನೇತೃತ್ವದಲ್ಲಿ ದಾಳಿ ನಡೆಸಿ, ಸುರೇಶ ಬಿಳಗಿ ಅವರನ್ನು ಬಂಧಿಸಿ, ಕಾನೂನು ಕ್ರಮ ಕೈಗೊಂಡಿದ್ದಾರೆ.



ಉದಯವಾಹಿನಿ ಚಿತ್ರ

---

## ಮಳೆಗೆ ಭಾರೀ ಅವಾಂತರ ಬಜಪೆ ಸಮೀಪ ಭೂಕುಸಿತ

• ಉದಯವಾಹಿನಿ, ಮಂಗಳೂರು

ನಗರದ ಹೊರವಲಯದಲ್ಲಿ ಬೆಳ್ಳಂಬೆಳಗ್ಗೆ ಸುರಿದ ಮಳೆಗೆ ಭಾರೀ ಅವಾಂತರ ಸೃಷ್ಟಿಯಾಗಿದೆ. ಬಜಪೆ ಸಮೀಪದ ಅದ್ಯಪಾಡಿಯ ಸಂಕೇಶ ಎಂಬಲ್ಲಿ ಮಳೆಗೆ ಭೂಕುಸಿತ ಉಂಟಾಗಿದೆ.

ಮಂಗಳೂರು ವಿಮಾನ ನಿಲ್ದಾಣದ ಭಾಗದಿಂದ ಮಣ್ಣು ಮಿಶ್ರಿತ ನೀರು ಹರಿದು ಬರುತ್ತಿದ್ದು ಗುಡ್ಡದ ಕೆಳಭಾಗದ ಉಮಾನಾಥ ಸಾಲ್ಯಾನ್ ಎಂಬವರ ಮನೆಗೆ ಹಾನಿಯಾಗಿದೆ. ಮನೆಯ ಮುಂಭಾಗದ ಅಂಗಳದಲ್ಲಿ ಕೆಸರು ನೀರು ತುಂಬಿಕೊಂಡಿದೆ. ಕಳೆದ ವರ್ಷವೂ ಇದೇ ಅನಾಹುತ ಸಂಭವಿಸಿದ್ದು, ವಿಮಾನ ನಿಲ್ದಾಣದ ಅಧಿಕಾರಿ ನಿರ್ಲಕ್ಷಕ್ಕೆ ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸ್ಥಳಕ್ಕೆ ವಿಮಾನ ನಿಲ್ದಾಣ ಅಧಿಕಾರಿಗಳು ಭೇಟಿ, ಮಂಗಳೂರು ತಾಲ್ಲೂಕು ತಹಶೀಲ್ದಾರ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

---

ಕಾಲುವೆಗಳು ಕಳಪೆಮಟ್ಟದಿಂದ ನಿರ್ಮಿಸಿದ್ದರಿಂದ ಹತ್ತಾರು ಕಡೆಗಳಲ್ಲಿ ಒಡೆದು ಜಮೀನುಗಳಿಗೆ ನೀರು ನುಗ್ಗಿ ಬೆಳೆ ಹಾನಿ

# ಕಾಲುವೆ ಒಡೆದು ವರ್ಷ ಕಳೆದರೂ ಆಗದ ದುರಸ್ಥಿ ಭಾಗ್ಯ

• ಉದಯವಾಹಿನಿ ತಾಳಿಕೋಟೆ

ಈ ಭಾಗದ ರೈತರ ಬಧುಕು ಹಸನುಗೊಳಿಸುವದಕ್ಕಾಗಿ ನಿರ್ಮಿಸಲಾಗಿರುವ ಮುಳವಾಡ ಏತ ನೀರಾವರಿ ಯೋಜನೆಯ ಸಂಬಂದಿತ ಮುಖ್ಯ ಕಾಲುವೆಯು ಎಲ್ಲೆಂದರಲ್ಲಿ ಒಡೆದು ರೈತರ ನೂರಾರು ಏಕರೆ ಜಮೀನುಗಳಿಗೆ ನೀರು ನುಗ್ಗಿ ಫಲವತ್ತಾದ ಬೆಳೆಯ ಜೊತೆಗೆ ಮಣ್ಣು ಸಹೇತ ಕಿತ್ತುಕೊಂಡು ಹೋಗಿ ವರ್ಷ ಕಳೆದರೂ ಇನ್ನೂ ದುರಸ್ಥಿ ಭಾಗ್ಯ ಕಂಡಿಲ್ಲಾ.

ರಾತ್ರಿ ಸುರಿದ ಮಳೆಯ ನೀರು ಕಾಲುವೆಯ ಮೂಲಕ ಹರಿದು ಬಂದಿದ್ದು ವರ್ಷದ ಹಿಂದೆ ಒಡೆದ ಕಾಲುವೆಗಳು ದುರಸ್ಥಿ ಕಾಣದ್ದರಿಂದ ಜಮೀನಿನಲ್ಲಿ ಮಣ್ಣು ಮತ್ತೇ ಕೊಚ್ಚಿಕೊಂಡು ಹೋಗಿದ್ದರಿಂದ ನೂರಾರು ಏಕರೆ ಭೂಮಿ ಬಿತ್ತಲು ಬಾರದೇ ಬರಡು ಭೂಮಿಯಂತಾಗಿದೆ.

ಜಿಲ್ಲೆಯಲ್ಲಿಯೇ ಡ್ಯಾಂ ಇದ್ದರೂ ಕೂಡಾ ಬೆಳೆಗಳು ಸೋರಗುತ್ತಿರುವದನ್ನು ಲಕ್ಷೀಸಿದ ಸರ್ಕಾರವು ಸಾವಿರಾರು ಕೋಟಿ ರೂ. ಖರ್ಚುವೆಚ್ಚ ಮಾಡಿ ಒಂದೆಡೆ ಬೂದಿಹಾಳ-ಫೀರಾಪೂರ ಏತ ನೀರಾವರಿ ಯೋಜನೆಯನ್ನು ಜಾರಿಗೆ ತಂದರೆ ಇನ್ನೊಂದೆಡೆ ಮುಳವಾಡ, ಚಿಮ್ಮಲಗಿ ಏತ ನೀರಾವರಿ ಮುಖ್ಯ ಕಾಲುವೆಗಳ ಮೂಲಕ ನೀರು ಹರಿಸಿ ಈ ಭಾಗದ ಹಸಿರಿನ ತೋರಣ ಕಟ್ಟಲು ಪಣ ತೊಟ್ಟ ಸರ್ಕಾರದ ನಡೆಗೆ ಕಳಪೆ ಕಾಮಗಾರಿಯ ದುರ್ವಾಸನೆ ಎಲ್ಲವನ್ನು ಬುಡಮೇಲು ಮಾಡುವಂತೆ ಮಾಡಿದೆ.


ಉದಯವಾಹಿನಿ ಚಿತ್ರ

ಬೂದಿಹಾಳ-ಫೀರಾಪೂರ ಏತ ನೀರಾವರಿ ಯೋಜನೆಯ ಮುಖ್ಯ ಪೈಪಲೈನ ಕಾರ್ಯವು ಅಚ್ಚುಕಟ್ಟಾಗಿ ನಿರ್ವಹಣೆಗೊಂಡಿದೆ ಪ್ರಾಯೋಗಿಕವಾಗಿ ನೀರು ಹರಿಸಿದಾಗ ಯಶಸ್ವಿಯೂ ಕೂಡಾ ಆಗಿದೆ ಸದ್ಯ ಕೊನೆಯ ಹಂತದ ಚಿಕ್ಕ ಕಾಲುವೆ ನಿರ್ಮಾಣದ ಹಂತ ಮುಗಿದರೆ ಈ ನೀರಾವರಿ ಯೋಜನೆ ಯಶಸ್ವಿಗೊಳ್ಳಲಿದೆ.

ಆದರೆ ಈ ಹಿಂದೆ ಮುಳವಾಡ ಏತ ನೀರಾವರಿ ಯೋಜನೆಯ ಮೂಲಕ ಮುಖ್ಯ ಕಾಲುಗಳನ್ನು ಕಳೆದ 2 ವರ್ಷದ ಒಳಗೆ ನಿರ್ಮಿಸಲಾಗಿದೆ ಸದರಿ ನಿರ್ಮಿಸಿದ ಕಾಲುವೆಯು ಹರಿಯುವ ನೀರಿನ ರಬಸಕ್ಕೆ ಅಲ್ಲಲ್ಲಿ ಸಿಮೆಂಟು ಕಿತ್ತುಕೊಂಡು ಹೊಗುತ್ತಿದ್ದರೆ ಒಂದೇಡೆ ಜಮೀನಿನ ಪಕ್ಕದ ಕಾಲುವೆಯು ಒಡೆದು ಜಮೀನುಗಳಿಗೆ ನೀರು ನುಗ್ಗಿ ಉತ್ತಮ ಫಲವತ್ತಾದ ಬೆಳೆಯ ಜೊತೆಗೆ ಮಣ್ಣನ್ನು ಸಹ ಬಲಿ ಪಡೆದುಕೊಳ್ಳುತ್ತಾ ಸಾಗಿದೆ.

**ಗುತ್ತಿಗೆದಾರನ ಕಪ್ಪುಪಟ್ಟಿಗೆ ಸೇರಿಸಿ**
ಮುಳವಾಡ ಏತ ನೀರಾವರಿ ಯೋಜನೆಗೆ ಸಂಬಂದಿಸಿ ನಿರ್ಮಿಸಲಾಗಿರುವ ಕಾಲುವೆಗಳು ಒಡೆದು ಹೋಗಲು ಕಳಪೆ ಕಾಮಗಾರಿಯೇ ಮೂಲ ಕಾರಣವಾಗಿದ್ದು ಕೂಡಲೇ ಗುತ್ತಿಗೆದಾರನನ್ನು ಕಪ್ಪು ಪಟ್ಟಿಗೆ ಸೇರಿಸುವದರ ಜೊತೆಗೆ ಕಳಪೆ ಕಾಮಗಾರಿಯಲ್ಲಿ ಭಾಗಿಯಾದ ಅಧಿಕಾರಿಗಳ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕೆಂಬ ಕೂಗು ರೈತರದ್ದಾಗಿದೆ.

ಕಳೆದ ವರ್ಷ ಉತ್ತಮ ಮಳೆಯಿಂದ ಉತ್ತಮ ಬೆಳೆ ನಿರಿಕ್ಷೆಯಲ್ಲಿದ್ದ ರೈತರಿಗೆ ವರದಾನವಾಗಬೇಕಿದ್ದ ಕಾಲುವೆಗಳು ನೀರಿನ ರಬಸಕ್ಕೆ ಹತ್ತಾರುಕಡೆಗಳಲ್ಲಿ ಒಡೆದು ಹೋಗಿ ಬೆಳೆ ಹಾನಿಗೆ ಕಾರಣವಾಗಿತ್ತು ಆದರೆ ಸದ್ಯ ಎರಡು ದಿನ ಸುರಿದ ಮಳೆಗೆ ಮತ್ತೇ ನೀರು ಒಡೆದ ಕಾಲುವೆಗಳ ಮೂಲಕ ಮಣ್ಣನ್ನು ಸಹ ಕೊಚ್ಚಿಕೊಂಡು ಹೋಗುವಂತೆ ಮಾಡಿದೆ ಇದರಿಂದ ರೈತಾಪಿ ಜನತೆಯ ಬಧುಕಿಗೆ ಕಾರ್ಗತ್ತಲಿನಂತೆ ಕಾಲುವೆಯ ನೀರು ನುಗ್ಗಿ ರೈತರ ಬಧುಕು ಮೂರಾಬಟ್ಟೆಯಾಗುವಂತೆ ಮಾಡಿದೆ.

**ಅಧಿಕಾರಿಗಳ ಬೇಜವಾಬ್ದಾರಿಗೆ ಹಿಡಿ ಶಾಪ :** ಸಾವಿರಾರು ಕೋಟಿ ರೂ. ಖರ್ಚು ವೆಚ್ಚ ಮಾಡಿ ನಿರ್ಮಿಸಲಾಗುತ್ತಿರುವ ನೀರಾವರಿ ಸಂಬಂದಿತ ಕಾಲುವೆಗಳ ನಿರ್ಮಾಣದ ಸಮಯದಲ್ಲಿ ಆಲಮಟ್ಟಿಯ ಕೆಬಿಜೆಎನ್‌ಎಲ್ ಅಧಿಕಾರಿಗಳ ತಂಡ ಪದೇ ಪದೇ ಬೆಟ್ಟಿ ನೀಡಿ ಪರಿಶೀಲನೆ ನಡೆಸಬೇಕಾಗಿತ್ತು ಆದರೆ ಅಧಿಕಾರಿಗಳು ಬಂದರೆ ಹಿಡಿ ಸಕ್ಕರೆ ಹೋದರೆ ಹಿಡಿ ಉಪ್ಪು ಎಂಬಂತೆ ಕುಳಿತಲ್ಲೇಯೇ ಗುತ್ತಿಗೆದಾರರ ಮಸಾಲಿ ಮಾತಿಗೆ ಬೆಲೆ ಕೊಟ್ಟ ಪರಿಣಾಮ ಕಾಲುವೆಗಳು ಒಡೆಯಲು ಕಾರಣವಾಗಿದೆ ಎಂದು ರೈತಾಪಿ ಜನತೆ ಅಧಿಕಾರಿಗಳಿಗೆ ಹಿಡಿ ಶಾಪ ಹಾಕುತ್ತಿದ್ದಾರೆ. ಕಾಲುವೆ ನಿರ್ಮಾಣದ ಸಮಯದಲ್ಲಿ ಬೇಕಾಬಿಟ್ಟಿ ಕಾಮಗಾರಿ ಮಾಡುತ್ತಿರುವದನ್ನು ಲಕ್ಷೀಸಿದ ಅನೇಕ ರೈತಪರ ಸಂಘಟನೆಗಳು ಆಲಮಟ್ಟಿಯ ಮುಖ್ಯ ಅಭಿಯಂತರರಿಗೆ ಮನವಿಗಳನ್ನು ಸಲ್ಲಿಸಿ ಬಂದರೂ ಕೂಡಾ ಗುತ್ತಿಗೆದಾರನ ಮಸಾಲಿ ಪದಾರ್ಥಕ್ಕೆ ಮರಳಾದ ಅಧಿಕಾರಿಗಳು ರೈತರ ಮನವಿ ಪತ್ರಕ್ಕೆ ಕಿ ಮ್ಮತ್ತು ನೀಡಿಲ್ಲಾವೆಂಬ ಆರೋಪಗಳು ಕೇಳಿಬಂದಿವೆ.

**ಜನಪ್ರತಿನಿಧಿಗಳು ಎಚ್ಚೆತ್ತುಕೊಳ್ಳಲಿ**
ರೈತರ ಜೀವನಾಡಿ ನೀರಾವರಿ ಯೋಜನೆಗಳು ಜಾರಿಗೆ ಬರುವ ಸಮಯದಲ್ಲಿ ಜನಪ್ರತಿನಿಧಿಗಳು ಏಚ್ಚೆತ್ತುಕೊಳ್ಳಬೇಕಿರುವದು ಅವಶ್ಯವಾಗಿದೆ ಈ ಯೋಜನೆಯ ಕಾರ್ಯಗತವಾಗುವಲ್ಲಿ ಸ್ವಲ್ಪ ಎಡವಿದರೂ ಕೂಡಾ ಇಡೀ ರೈತರ ಬಧುಕು ಹಸನುಗೊಳಿಸಬೇಕಾದ ಯೋಜನೆ ಬಧಕನ್ನೇ ಬಲಿಪಡೆದುಕೊಳ್ಳುವದರಲ್ಲಿ ಯಾವುದೇ ಸಂದೇಹವಿಲ್ಲ.

> ಮುಳವಾಡ ಏತ ನೀರಾವರಿ ಯೋಜನೆಗೆ ಸಂಬಂದಿಸಿ ನಿರ್ಮಿಸಿದ ಕಾಲುವೆ ಒಡೆದಿರುವದು ಗಮನಕ್ಕೆ ಬಂದಿಲ್ಲಾ ನಮ್ಮ ಅಧಿಕಾರಿಗಳ ತಂಡವನ್ನು ಕಳುಹಿಸಿ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವದು.
> -ಬಸವರಾಜ, ಕೆಬಿಜೆಎನ್‌ಎಲ್ ಮುಖ್ಯ ಇಂಜನಿಯರ್ ಆಲಮಟ್ಟಿ

---

## ಉತ್ತಮ ಮಳೆ: ಬಿತ್ತನೆಗೆ ಸಿದ್ಧತೆ

• ಉದಯವಾಹಿನಿ, ತಡಸ

ಗ್ರಾಮ ಸೇರಿದಂತೆ ಸುತ್ತಲಿನ ಗ್ರಾಮಗಳಾದ ಮುತ್ತಳಿ, ಕಮಲಾನಗರ, ಅಡವಿಸೋಮಾಪುರ, ಹೊನ್ನಾಪುರ, ನೀರಲಗಿ, ದುಂಡಸಿಯಲ್ಲಿ ಎರಡು ದಿನಗಳಿಂದ ಉತ್ತಮ ಪ್ರಮಾಣದಲ್ಲಿ ಮಳೆಯಾಗುತ್ತಿದೆ. ರಾತ್ರಿ ಆರಂಭವಾದ ಮಳೆ, ಮಂಗಳವಾರವೂ ಸುರಿಯಿತು. ಇದರಿಂದ ರೈತರು, ಕೃಷಿ ಕಾಯಕಕ್ಕೆ ಸಜ್ಜಾಗಿದ್ದಾರೆ. ಬಿತ್ತನೆ ಬೀಜ ಹಾಗೂ ರಸಗೊಬ್ಬರ ಖರೀದಿಗೆ ಮುಂದಾಗಿದ್ದಾರೆ. ಬಿತ್ತನೆಗೆ ಸೂಕ್ತವಾದ ಸಮಯದಲ್ಲೇ ಮಳೆಯಾಗುತ್ತಿದೆ. ಇದರಿಂದ ಉತ್ತಮ ರೀತಿಯಲ್ಲಿ ಬಿತ್ತನೆ ಮಾಡಲು ಅನುಕೂಲವಾಗುತ್ತದೆ ಎಂದು ರೈತ ಪರಶುರಾಮ್ ಹೇಳಿದರು. ಇನ್ನೆರಡು ದಿನ ಹೆಚ್ಚಿನ ಪ್ರಮಾಣದಲ್ಲಿ ಮಳೆಯಾಗಲಿದೆ. ರೈತರಿಗಾಗಿ ರಿಯಾಯಿತಿ ದರದ ಬಿತ್ತನೆ ಬೀಜಗಳು ಲಭ್ಯವಿದ್ದು, ಬಿತ್ತನೆಗೆ ಮುನ್ನ ಕಡ್ಡಾಯವಾಗಿ ಬೀಜೋಪಚಾರ ಮಾಡಬೇಕು. ಇದರಿಂದ ಬೀಜ ಹಾನಿಯಾಗದೆ ಉತ್ತಮ ಇಳುವರಿ ಸಿಗುತ್ತದೆ ಎಂದು ರೈತ ಸಂಪರ್ಕ ಕೇಂದ್ರದ ಅಧಿಕಾರಿ ಎಸ್.ಆರ್. ದಾವಣಗೆರೆ ಹೇಳಿದರು.



# ಮಾದಕ ಲುಕ್‌ನಲ್ಲಿ ಮಿಂಚಿದ ರಶ್ಮಿಕಾ

## ಶ್ರೀವಲ್ಲಿ ಬ್ಯೂಟಿಗೆ ಫ್ಯಾನ್ಸ್ ಫಿದಾ


'ಪುಷ್ಪ 2 ಬೆಡಗಿ ರಶ್ಮಿಕಾ ಮಂದಣ್ಣ ಮಾದಕ ಲುಕ್‌ನಲ್ಲಿ ಮಿಂಚಿದ್ದಾರೆ. ಹೊಸ ಫೋಟೋಶೂಟ್ ಅನ್ನು ನಟಿ ಸೋಷಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದು, ಶ್ರೀವಲ್ಲಿ ಬ್ಯೂಟಿಗೆ ಫ್ಯಾನ್ಸ್ ಫಿದಾ ಆದ್ದಾರೆ. ನ್ಯಾಷನಲ್ ಕ್ರಶ್ ರಶ್ಮಿಕಾ ಮಾದಕ ಲುಕ್‌ನಿಂದ ಇದೀಗ ಇಂಟರ್‌ನೆಟ್‌ಗೆ ಬೆಂಕಿ ಹಚ್ಚಿದ್ದಾರೆ. ಬ್ಲ್ಯಾಕ್ ಡ್ರೆಸ್‌ನಲ್ಲಿ ಶ್ರೀವಲ್ಲಿ ಮಸ್ತ್ ಆಗಿ ಪೋಸ್ ನೀಡಿದ್ದಾರೆ. ಅವರ ಈ ಲುಕ್ ಪಡ್ಡೆಹುಡುಗರ ನಿದ್ದೆಗೆಡಿಸಿದೆ. ರಶ್ಮಿಕಾ ಪೋಸ್ಟ್‌ಗೆ ಹಾಟ್, ಸೆಕ್ಸಿ, ಬ್ಯೂಟಿ ಎಂದೆಲ್ಲಾ ಬಗೆ ಬಗೆಯ ಕಾಮೆಂಟ್‌ಗಳನ್ನು ಹಾಕಿದ್ದಾರೆ. ರಶ್ಮಿಕಾ ಅವರು ಅವಾರ್ಡ್ ಕಾರ್ಯಕ್ರಮವೊಂದಕ್ಕೆ ಹಾಜರಿ ಹಾಕಿದ್ದರು. ಫಂಕ್ಷನ್ ತೆರಳುವ ಒಂದಿಷ್ಟು ಫೋಟೋಗಳನ್ನು ಕ್ಲಿಕ್ಕಿಸಿದ್ದರು. ಅದಷ್ಟೇ ಅಲ್ಲ, ಅವರು ಧರಿಸಿರುವ ಈ ಉಡುಗೆಗೆ ಪ್ರಶಂಸೆ ವ್ಯಕ್ತವಾಗಿದ್ದು, ಅದರ ಹಿಂದೆ ಹಲವರ ಶ್ರಮವಿದೆ. ಹಾಗಾಗಿ ಅವರ ಬಟ್ಟೆ ಡಿಸೈನ್ ಮಾಡಿದವರಿಗೆ, ಮೇಕಪ್ ಮಾಡುವರಿಗೆ ನಟಿ ಧನ್ಯವಾದ ಹೇಳಿದ್ದಾರೆ. ಒಟ್ನಲ್ಲಿ ರಶ್ಮಿಕಾ ಈ ಲುಕ್ ಸೋಷಿಯಲ್ ಮೀಡಿಯಾದಲ್ಲಿ ಸಂಚಲನ ಸೃಷ್ಟಿಸಿದೆ. ನಟಿ ಈ ಫೋಟೋಗಳನ್ನು ಪೋಸ್ಟ್ ಮಾಡಿದ ಕೆಲವೇ ಗಂಟೆಗಳಲ್ಲಿ ಭರ್ಜರಿ ಲೈಕ್ಸ್ ಗಿಟ್ಟಿಸಿಕೊಂಡಿದೆ.

ಕನ್ನಡದ 'ಕಿರಿಕ್ ಪಾರ್ಟಿ' ಚಿತ್ರದ ಮೂಲಕ ಪರಿಚಿತರಾದ ರಶ್ಮಿಕಾ ಮಂದಣ್ಣ ಅವರು ಇದೀಗ ಸೌತ್ ಮತ್ತು ಬಾಲಿವುಡ್‌ನಲ್ಲಿ ಬೇಡಿಕೆಯ ನಟಿಯಾಗಿದ್ದಾರೆ.



# ಮೋದಿ ಚಿತ್ರದ ನೆಕ್ಲೆಸ್ ಧರಿಸಿದ ನಟಿ

ಕಾನ್ ಫಿಲ್ಮ್ ಫೆಸ್ಟಿವಲ್ ಹಬ್ಬವು ಫ್ರಾನ್ಸ್‌ನಲ್ಲಿ ಅದ್ಧೂರಿಯಾಗಿ ನಡೆಯುತ್ತಿದೆ. ಕನ್ನಡತಿ ದಿಶಾ ಮದನ್ ಕಾನ್ ರೆಡ್ ಕಾರ್ಪೆಟ್‌ನಲ್ಲಿ ಮಿಂಚಿದ ಬೆನ್ನಲ್ಲೇ ರಾಜಸ್ತಾನದ ಮೂಲದ ನಟಿ ರುಚಿ ಗುಜ್ಜರ್ ಕೂಡ ಭಾಗಿಯಾಗಿದ್ದಾರೆ. ಕತ್ತಲ್ಲಿ ಪಿಎಂ ಮೋದಿ ಭಾವಚಿತ್ರವಿರುವ ನೆಕ್ಲೆಸ್ ಧರಿಸಿ ನಟಿ ರೆಡ್ ಕಾರ್ಪೆಟ್‌ನಲ್ಲಿ ಹೆಜ್ಜೆ ಹಾಕಿರೋದು ಎಲ್ಲರ ಗಮನ ಸೆಳೆದಿದೆ.



ಕಾನ್ ಫಿಲ್ಮ್ ಫೆಸ್ಟಿವಲ್ ಮೇ 13ರಿಂದ ಆರಂಭಗೊಂಡಿದ್ದು 24 ರವರೆಗೆ ನಡೆಯಲಿದೆ. ಈ ಕಾರ್ಯಕ್ರಮಕ್ಕೆ ಭಾಗಿಯಾಗಲು ಫಿಲ್ಮ್ ಫೆಸ್ಟಿವಲ್ ಟೀಮ್ ಅಳೆದು ತೂಗಿ ಕೆಲವೇ ಕೆಲವು ತಾರೆಯರಿಗೆ ಮಾತ್ರ ಆಮಂತ್ರಣ ನೀಡುತ್ತಾರೆ. ಅದರಂತೆ ನಟಿ ರುಚಿ ಗುಜ್ಜರ್ ಅವರಿಗೂ ಈ ಸಿನಿಮಾ ಹಬ್ಬದಲ್ಲಿ ಭಾಗಿಯಾಗಲು ಅವಕಾಶ ಸಿಕ್ಕಿದೆ.

ದುಬಾರಿ ಲೆಹೆಂಗಾ ಧರಿಸಿ ಯುವರಾಣಿಯಂತೆ ನಟಿ ರೆಡ್ ಕಾರ್ಪೆಟ್‌ನಲ್ಲಿ ಮಿಂಚಿದ್ದಾರೆ. ಪಿಎಂ ನರೇಂದ್ರ ಮೋದಿ ಅವರ ಫೋಟೋವಿರುವ ನೆಕ್ಲೆಸ್ ನಲ್ಲಿ ನಟಿ ರುಚಿ ಕಂಗೊಳಿಸಿದ್ದಾರೆ. ಈ ಮೂಲಕ ಮೋದಿ ಅವರಿಗೆ ನಟಿ ವಿಶೇಷವಾಗಿ ಗೌರವ ಸೂಚಿಸಿದ್ದಾರೆ. ನಟಿಯ ವಿಭಿನ್ನ ಲುಕ್‌ಗೆ ಫ್ಯಾನ್ಸ್ ಮೆಚ್ಚುಗೆ ಸೂಚಿಸಿದ್ದಾರೆ. ಒಂದಿಷ್ಟು ಮಂದಿ ಅವರನ್ನು ಟೀಕಿಸುತ್ತಿದ್ದಾರೆ. ಇದೆಲ್ಲಾ ಪಬ್ಲಿಸಿಟಿ ಗಿಮಿಕ್ ಎಂದು ನಟಿಯ ಕಾಲೆಳೆದಿದ್ದಾರೆ. ಈ ಕಾರ್ಯಕ್ರಮದಲ್ಲಿ ಮಾತನಾಡಿ, ಈ ನೆಕ್ಲೆಸ್ ಜ್ಯುವೆಲರಿ ಎನ್ನುವುದಕ್ಕಿಂತ ಹೆಚ್ಚಾಗಿ ಬಲದ ಸಂಕೇತ, ಗುರಿ ಹಾಗೂ ವಿಶ್ವ ಮಟ್ಟದಲ್ಲಿ ಭಾರತ ಬೆಳವಣಿಯಾಗುತ್ತಿರುವುದರ ಸಂಕೇತ. ಕಾನ್ಸ್ ಫಿಲ್ಮ್ ಫೆಸ್ಟಿವಲ್‌ನಲ್ಲಿ ನಾನು ಈ ನೆಕ್ಸೆಸ್ ಅನ್ನು ಧರಿಸಿ ಬಂದಿದ್ದೇನೆ. ಈ ಮೂಲಕ ಪ್ರಧಾನಿ ನರೇಂದ್ರ ಮೋದಿಯವರಿಗೆ ಗೌರವ ಸೂಚಿಸುತ್ತಿದ್ದೇನೆ.

# ತಿಂಗಳಿಗೆ 40 ಲಕ್ಷ ಕೊಡಿ

## ರವಿ ಬಳಿ ಭಾರೀ ಜೀವನಾಂಶ ಕೇಳಿದ ಆರತಿ!

ಕಾಲಿವುಡ್ ಸ್ಟಾರ್ ಹೀರೋ ರವಿ ಮೋಹನ್ (ಜಯಂ ರವಿ) ಮತ್ತು ಅವರ ಪತ್ನಿ ಆರತಿ ನಡುವಿನ ವಿಚ್ಛೇದನ ಪ್ರಕರಣ ಭಾರೀ ನಾಟಕೀಯ ತಿರುವು ಪಡೆದುಕೊಂಡಿದೆ. ರಾಜೀ ಸಂಧಾನಕ್ಕಾಗಿ ಅರ್ಜಿ ಸಲ್ಲಿಸಿದ್ದ ಆರತಿ ಇದೀಗ ಪತಿಯಿಂದ 40 ಲಕ್ಷ ರೂ. ಜೀವನಾಂಶ ಕೊಡಿಸಬೇಕು ಎಂದು ನ್ಯಾಯಾಲಯದ ಮುಂದೆ ಮನವಿ ಮಾಡಿದ್ದಾರೆ. ನ್ಯಾಯಾಲಯದಲ್ಲಿ ಜಯಂ ರವಿ ಪತ್ನಿ ಆರತಿಯಿಂದ ವಿಚ್ಛೇದನ ಪಡೆಯಲು ಅರ್ಜಿ ಸಲ್ಲಿಸಿದ್ದು, ತಮಗೆ ಪತ್ನಿ ಜೊತೆ ವಾಸಿಸಲು ಸಾಧ್ಯವೇ ಇಲ್ಲ ಎಂದು ಅರ್ಜಿಯಲ್ಲಿ ಹೇಳಿಕೊಂಡಿದ್ದರು. ಅಷ್ಟೇ ಅಲ್ಲದೇ ಆರತಿ ಸಲ್ಲಿಸಿರುವ ರಾಜಿ ಸಂಧಾನದ ಮನವಿಯನ್ನು ತಿರಸ್ಕರಿಸುವಂತೆ ನ್ಯಾಯಾಲಯಕ್ಕೆ ಅರ್ಜಿಯಲ್ಲಿ ಉಲ್ಲೇಖಿಸಿದ್ದರು. ಇದೆಲ್ಲದರ ನಡುವೆ ಪತಿಯಿಂದ 40 ಲಕ್ಷ ರೂ. ಜೀವನಾಂಶ ಬೇಕು ಎಂದು ಮನವಿ ಮಾಡಿರುವುದು ಭಾರೀ ಚರ್ಚೆಗೆ ಗ್ರಾಸವಾಗಿದೆ. ಯಾಕೆಂದರೆ, ಇತ್ತೀಚೆಗೆ ಪತ್ನಿ ಹಾಗೂ ಆಕೆಯ ಕುಟುಂಬ ನನ್ನನ್ನು ಚಿನ್ನದ ಮೊಟ್ಟೆ ಇಡುವ ಕೋಳಿಯಂತೆ ಬಳಸಿಕೊಂಡಿದ್ದರು ಎಂದು ರವಿ ಆರೋಪಿಸಿದ್ದರು. ಈ ಆರೋಪಕ್ಕೆ ಜೀವನಾಂಶದ ಬೇಡಿಕೆ ಪುಷ್ಠಿ ಕೊಡುತ್ತಿದೆ ಎಂದು ನೆಟ್ಟಿಗರು ಮಾತಾಡಿಕೊಳ್ಳುತ್ತಿದ್ದಾರೆ. ನ್ಯಾಯಾಲಯವು ಇಬ್ಬರಿಗೂ ತಮ್ಮ ಅರ್ಜಿಗಳ ಬಗ್ಗೆ ಪ್ರತಿಕ್ರಿಯೆ ನೀಡುವಂತೆ ಸೂಚಿಸಿದ್ದು, ಮುಂದಿನ ವಿಚಾರಣೆಯನ್ನು ಜೂ.12 ಕ್ಕೆ ನಿಗದಿಪಡಿಸಿದೆ. ಜಯಂ ರವಿ ಹಾಗೂ ಆರತಿ 2009ರಲ್ಲಿ ವಿವಾಹವಾಗಿ, 18 ವರ್ಷಗಳ ದಾಂಪತ್ಯದ ನಂತರ ಬೇರೆಯಾಗಿದ್ದಾರೆ. ಇಬ್ಬರು ಬೇರ್ಪಡುತ್ತಿರುವುದಾಗಿ ಜಯಂ ರವಿ ಕಳೆದ ವರ್ಷ ಘೋಷಿಸಿದ್ದರು.




# ಥಗ್‌ಲೈಫ್‌ಲ್ಲಿ 'ಶುಗರ್ ಬೇಬಿ' ತ್ರಿಷಾ ಮಿಂಚಿಂಗ್ ವಿವಾದಕ್ಕೀಡಾಗುತ್ತಾ ಹಾಡು

## ವಯಸ್ಸಾದ ಪುರುಷನೊಂದಿಗೆ ಕಿರಿಯ ಯುವತಿ

ಮಣಿರತ್ನಂ ನಿರ್ದೇಶನದ ಕಮಲ್ ಹಾಸನ್ ನಟಿಸಿರುವ ಬಹುನಿರೀಕ್ಷಿತ 'ಥಗ್‌ಲೈಫ್' ಚಿತ್ರದ ಶುಗರ್ ಬೇಬಿ ಹಾಡು ವಿವಾದಕ್ಕೀಡಾಗುವ ಸಾಧ್ಯತೆ ಇದೆ ಎಂಬ ಚರ್ಚೆ ಸಿನಿಪ್ರಿಯರಲ್ಲಿ ಶುರುವಾಗಿದೆ. ಶುಗರ್ ಬೇಬಿ ಎಂಬ ಪದವು ಸಾಮಾನ್ಯವಾಗಿ ಹಣಕ್ಕಾಗಿ ವಯಸ್ಸಾದ ಪುರುಷನೊಂದಿಗೆ ಕಿರಿಯ ಯುವತಿ ಹೊಂದಿರುವ ಸಂಬಂಧವನ್ನು ಸೂಚಿಸುತ್ತದೆ. ಇದರಿಂದ ಚಿತ್ರದಲ್ಲಿ ತ್ರಿಷಾ ಅವರನ್ನು ವಿವಾದಾತ್ಮಕ ಪಾತ್ರದಲ್ಲಿ ಚಿತ್ರಿಸಿರಬಹುದು ಎಂಬ ಊಹಾಪೋಹಕ್ಕೆ ಎಡೆಮಾಡಿಕೊಟ್ಟಿದೆ. ಮಂಗಳವಾರ ಹಾಡಿನ ಪ್ರೋಮೋ ಅನೇಕರ ಕುತೂಹಲ ಕೆರಳಿಸಿತ್ತು. ಇಂದು ಹಾಡು ಬಿಡುಗಡೆಯಾಗಲಿದ್ದು, ಮತ್ತಷ್ಟು ಚರ್ಚೆಗಳನ್ನು ಹುಟ್ಟುಹಾಕಬಹುದೇ ಎಂಬ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಚರ್ಚೆಗಳು ನಡೆಯುತ್ತಿದೆ. ಚಿತ್ರದ ಸಂಗೀತ ಬಿಡುಗಡೆಯ ಭಾಗವಾಗಿ, 'ಶುಗರ್ ಬೇಬಿ' ಹಾಡು ಬಿಡುಗಡೆಯಾಗಿದೆ. ಇನ್ನೂ ಈ ಹಾಡಿನ ಶೀರ್ಷಿಕೆ ಮತ್ತು ನಟಿ ತ್ರಿಷಾ ಮಿಂಚಿಂಗ್ ದೃಶ್ಯಗಳ ಪ್ರೋಮೋ ಈಗಾಗಲೇ ಆರಂಭಿಕ ಸಂಚಲನ ಮೂಡಿಸಿದೆ. ಪ್ರಚೋದನಕಾರಿ ವಿಷಯಗಳನ್ನು ನಿಭಾಯಿಸುವಲ್ಲಿ ಹೆಸರುವಾಸಿಯಾದ ಮಣಿರತ್ನಂ ಮತ್ತು ಕಮಲ್ ಹಾಸನ್ ಅವರ ಹಿಂದಿನ ವಿಚಾರಗಳನ್ನು ಗಮನಿಸಿದರೆ, ಈ ಚಿತ್ರವೂ ಅದೇ ಹಾದಿಯಲ್ಲಿ ಸಾಗ್ತಿದಿಯೇ ಎಂದು ಅಭಿಮಾನಿಗಳು ಕೇಳುತ್ತಿದ್ದಾರೆ.

# ಆರ್ಯ 3 ಟೈಟಲ್ ರಿಜಿಸ್ಟರ್ ಮಾಡಿಸಿದ ನಿರ್ಮಾಪಕ

'ಆರ್ಯ' ಟಾಲಿವುಡ್‌ನಲ್ಲಿ ಸಂಚಲನ ಸೃಷ್ಟಿಸಿದ ಸಿನಿಮಾ. ಅಲ್ಲು ಅರ್ಜುನ್ 'ಆರ್ಯ'ನಾಗಿ ಪಾರ್ಟ್ 1 ಮತ್ತು ಎರಡರಲ್ಲಿ ಸಕ್ಸಸ್ ಕಂಡಿದ್ದರು. ಇದರ ನಡುವೆ ಈ ಚಿತ್ರದ ನಿರ್ಮಾಪಕ ದಿಲ್ ರಾಜು ಅವರು 'ಆರ್ಯ 3' ಟೈಟಲ್ ಅನ್ನು ತೆಲುಗು ಫಿಲ್ಮ್ ಚೇಂಬರ್‌ನಲ್ಲಿ ರಿಜಿಸ್ಟರ್ ಮಾಡಿಸಿದ್ದು, ಈ ಚಿತ್ರದ 3ನೇ ಪಾರ್ಟ್ ಬರುವ ಬಗ್ಗೆ ಚರ್ಚೆ ಶುರುವಾಗಿದೆ. ಇತ್ತೀಚೆಗೆ ದಿಲ್ ರಾಜು 'ಆರ್ಯ 3' ಟೈಟಲ್ ರಿಜಿಸ್ಟರ್ ಮಾಡಿಸಿರೋದು ಅಭಿಮಾನಿಗಳ ಕುತೂಹಲಕ್ಕೆ ಕಾರಣವಾಗಿದೆ. ಸೈಲೆಂಟ್ ಆಗಿ ಆರ್ಯ ಸೀಕ್ವೆಲ್‌ಗೆ ತಯಾರಿ ಮಾಡಿಕೊಂಡಿರಬಹುದಾ ಎಂದು ಫ್ಯಾನ್ಸ್ ಊಹಿಸುತ್ತಿದ್ದಾರೆ. ಅಲ್ಲು ಅರ್ಜುನ್ ಮತ್ತು ಸುಕುಮಾರ್ ಕಾಂಬಿನೇಷನ್‌ನಲ್ಲಿ ಮತ್ತೆ ಆರ್ಯ ಸೀಕ್ವೆಲ್ ಮೂಡಿ ಬರಲಿದೆ ಎಂಬ ಪ್ರಶ್ನೆ ಅಭಿಮಾನಿಗಳಲ್ಲಿ ಮೂಡಿದೆ. ಅಂದಹಾಗೆ, 2004ರಲ್ಲಿ 'ಆರ್ಯ' ಚಿತ್ರದಲ್ಲಿ ಅಲ್ಲು ಅರ್ಜುನ್ ನಾಯಕನಾಗಿ ನಟಿಸಿ ಗೆದ್ದಿದ್ದರು. ಈ ಸಿನಿಮಾ ಸೂಪರ್ ಹಿಟ್ ಆಗಿತ್ತು. ಇದನ್ನು ಸುಕುಮಾರ್ ಅವರೇ ನಿರ್ದೇಶನ ಮಾಡಿದ್ದರು. ಬಳಿಕ ಇದರ ಪಾರ್ಟ್ 2 ಕೂಡ ಸಕ್ಸಸ್ ಕಂಡಿತ್ತು. ಹೀಗಾಗಿ 'ಆರ್ಯ 3 ಬರುವ ಬಗ್ಗೆ ಫ್ಯಾನ್ಸ್‌ಗೆ ನಿರೀಕ್ಷೆ ಹೆಚ್ಚಾಗಿದೆ. ಈ ಬಗ್ಗೆ ನಿರ್ಮಾಪಕ ದಿಲ್ ರಾಜು ಅಧಿಕೃತವಾಗಿ ತಿಳಿಸುವವರೆಗೂ ಕಾದುನೋಡಬೇಕಿದೆ. 'ಪುಷ್ಪ' ಸಿನಿಮಾ ಬಳಿಕ ಅಲ್ಲು ಅರ್ಜುನ್ ಗ್ಲೋಬಲ್ ಸ್ಟಾರ್ ಆಗಿ ಮಿಂಚ್ತಿದ್ದಾರೆ. ಸಂಭಾವನೆಯ ಜೊತೆಗೆ ಬೇಡಿಕೆ ಕೂಡ ಹೆಚ್ಚಾಗಿದೆ.



# ದಾಖಲೆ ಬರೆದ 2025ರ ಚಾಂಪಿಯನ್ಸ್ ಟ್ರೋಫಿ

## ಐಸಿಸಿ ಈವೆಂಟ್‌ಗಳಲ್ಲೇ ಅತಿ ಹೆಚ್ಚು ವೀಕ್ಷಣೆ

2025ರ ಐಸಿಸಿ ಚಾಂಪಿಯನ್ಸ್ ಟ್ರೋಫಿ ಪಂದ್ಯಾವಳಿಯು 368 ಬಿಲಿಯನ್ ನಿಮಿಷಗಳ ಜಾಗತಿಕ ವೀಕ್ಷಣೆಯನ್ನು ಕಂಡಿದ್ದು, ಅತಿ ಹೆಚ್ಚು ವೀಕ್ಷಿಸಲ್ಪಟ್ಟ ಐಸಿಸಿ ಪಂದ್ಯಾವಳಿ ಎಂಬ ದಾಖಲೆ ಬರೆದಿದೆ. ಅಲ್ಲದೆ ಭಾರತ ಮತ್ತು ನ್ಯೂಜಿಲೆಂಡ್ ನಡುವೆ ನಡೆದ ಫೈನಲ್ ಪಂದ್ಯವೂ ಅತಿ ಹೆಚ್ಚು ವೀಕ್ಷಿಸಲ್ಪಟ್ಟ ಚಾಂಪಿಯನ್ಸ್ ಟ್ರೋಫಿ ಪಂದ್ಯ ಎಂಬ ದಾಖಲೆಯನ್ನು ನಿರ್ಮಿಸಿತು. ಭಾರತದ ಗೆಲುವಿನಲ್ಲಿ ರೋಹಿತ್ ಶರ್ಮಾ ಮತ್ತು ಕುಲ್ದೀಪ್ ಯಾದವ್ ಪ್ರಮುಖ ಪಾತ್ರ ವಹಿಸಿದರು.

2025 ರ ಫೆಬ್ರವರಿ 19 ರಿಂದ ಮಾರ್ಚ್ 9 ರವರೆಗೆ ಪಾಕಿಸ್ತಾನ ಮತ್ತು ಯುನೈಟೆಡ್ ಅರಬ್ ಎಮಿರೇಟ್ಸ್ ಆತಿಥ್ಯದಲ್ಲಿ ನಡೆದಿದ್ದ ಐಸಿಸಿ ಚಾಂಪಿಯನ್ಸ್ ಟ್ರೋಫಿಯ ಫೈನಲ್ ಪಂದ್ಯದಲ್ಲಿ ನ್ಯೂಜಿಲೆಂಡ್ ತಂಡವನ್ನು ಮಣಿಸಿ ಚಾಂಪಿಯನ್ ಪಟ್ಟಕ್ಕೇರುವಲ್ಲಿ ಯಶಸ್ವಿಯಾಗಿದ್ದ ಟೀಂ ಇಂಡಿಯಾ, 2013 ರ ಬಳಿಕ ಈ ಟ್ರೋಫಿ ಗೆದ್ದ ದಾಖಲೆ ಬರೆದಿತ್ತು. ಇದೀಗ ಇಡೀ ಚಾಂಪಿಯನ್ಸ್ ಟ್ರೋಫಿ ಪಂದ್ಯಾವಳಿ ವೀಕ್ಷಣೆಯ ವಿಚಾರದಲ್ಲಿ ದಾಖಲೆ ಬರೆದಿದ್ದು, ಇದುವರೆಗೆ ನಡೆದಿರುವ ಐಸಿಸಿ ಪಂದ್ಯಾವಳಿಗಳಲ್ಲಿ ಅತಿ ಹೆಚ್ಚು ವೀಕ್ಷಿಸಲ್ಪಟ್ಟ ಪಂದ್ಯಾವಳಿ ಎಂಬ ಹೊಸ ದಾಖಲೆ ಬರೆದಿದೆ.

ಅತಿ ಹೆಚ್ಚು ವೀಕ್ಷಿಸಲ್ಪಟ್ಟ ಐಸಿಸಿ ಈವೆಂಟ್ 2025ರ ಚಾಂಪಿಯನ್ಸ್ ಟ್ರೋಫಿ ಬರೋಬ್ಬರಿ 368 ಬಿಲಿಯನ್ ನಿಮಿಷಗಳ ಜಾಗತಿಕ ವೀಕ್ಷಣೆ ಕಂಡಿದೆ. ಇದು 2017ರಲ್ಲಿ ಇಂಗ್ಲೆಂಡ್ ಮತ್ತು ವೇಲ್ಸ್ ಆತಿಥ್ಯದಲ್ಲಿ ನಡೆದಿದ್ದ ಚಾಂಪಿಯನ್ಸ್ ಟ್ರೋಫಿ ವೀಕ್ಷಣೆಗಿಂತ ಶೇಕಡಾ 19 ರಷ್ಟು ಹೆಚ್ಚಳವಾಗಿದೆ. ಈ ಮೂಲಕ ಇದುವರೆಗೆ ಅತಿ ಹೆಚ್ಚು ವೀಕ್ಷಿಸಲ್ಪಟ್ಟ ಐಸಿಸಿ ಪುರುಷರ ಚಾಂಪಿಯನ್ಸ್ ಟ್ರೋಫಿ ಪಂದ್ಯಾವಳಿ ಕೂಡ ಆಗಿದೆ. ಇದಲ್ಲದೆ, ಈ ಟೂರ್ನಿ ಪ್ರತಿ ಓವರ್‌ಗೆ 308ಮಿಲಿಯನ್ ನಿಮಿಷಗಳ ಜಾಗತಿಕ ವೀಕ್ಷಣೆ ಪಡೆಯುವ ಮೂಲಕ ಐಸಿಸಿ ಈವೆಂಟ್‌ವೊಂದು ಅತ್ಯಧಿಕ ವೀಕ್ಷಣೆ ಪಡೆದ ದಾಖಲೆಯನ್ನು ಬರೆದಿದೆ.

ಹಾಗೆಯೇ ದುಬೈನಲ್ಲಿ ಮಾರ್ಚ್ 9 ರಂದು ನಡೆದ ಭಾರತ ಮತ್ತು ನ್ಯೂಜಿಲೆಂಡ್ ನಡುವಿನ ಫೈನಲ್ ಪಂದ್ಯ ವಿಶ್ವದಾದ್ಯಂತ 65.3 ಬಿಲಿಯನ್ ನಿಮಿಷಗಳ ಲೈವ್ ವೀಕ್ಷಣೆ ಕಂಡಿದ್ದು, ಈ ಮೂಲಕ ಅತಿ ಹೆಚ್ಚು ವೀಕ್ಷಿಸಲ್ಪಟ್ಟ ಚಾಂಪಿಯನ್ಸ್ ಟ್ರೋಫಿ ಪಂದ್ಯ ಎನಿಸಿಕೊಂಡಿದೆ. ಇದರೊಂದಿಗೆ 2017 ರ ಚಾಂಪಿಯನ್ಸ್ ಟ್ರೋಫಿ ಫೈನಲ್‌ನಲ್ಲಿ ನಿರ್ಮಿಸಲಾದ ದಾಖಲೆಯನ್ನು ಸಹ ಮುರಿದಿದೆ ಎಂದು ಐಸಿಸಿ ತನ್ನ ಪ್ರಕಟಣೆಯಲ್ಲಿ ತಿಳಿಸಿದೆ.

**ಫೈನಲ್ ಪಂದ್ಯ ಹೀಗಿತ್ತು:** 2025 ರ ಚಾಂಪಿಯನ್ಸ್ ಟ್ರೋಫಿಯ ಫೈನಲ್‌ನಲ್ಲಿ ಭಾರತ ಮತ್ತು ನ್ಯೂಜಿಲೆಂಡ್ ತಂಡಗಳು ಮುಖಾಮುಖಿಯಾಗಿದ್ದವು. ಈ ಫೈನಲ್ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ನ್ಯೂಜಿಲೆಂಡ್ 7 ವಿಕೆಟ್‌ಗಳ ನಷ್ಟಕ್ಕೆ 251 ರನ್ ಗಳಿಸಿ ಭಾರತಕ್ಕೆ 252 ರನ್‌ಗಳ ಗುರಿಯನ್ನು ನೀಡಿತು. ಇದಕ್ಕೆ ಪ್ರತಿಯಾಗಿ ಭಾರತ ತಂಡವು ಒಂದು ಓವರ್ ಬಾಕಿ ಇರುವಂತೆ 6 ವಿಕೆಟ್ ನಷ್ಟಕ್ಕೆ 254 ರನ್ ಗಳಿಸುವ ಮೂಲಕ ಗುರಿಯನ್ನು ಬೆನ್ನಟ್ಟಿತು. ಈ ಪಂದ್ಯಾವಳಿಯನ್ನು ಗೆಲ್ಲುವ ಮೂಲಕ, ಭಾರತ ತಂಡವು 12 ವರ್ಷಗಳ ನಂತರ ಚಾಂಪಿಯನ್ಸ್ ಟ್ರೋಫಿಯನ್ನು ಗೆದ್ದ ದಾಖಲೆ ಬರೆಯಿತು. ಈ ಪಂದ್ಯದಲ್ಲಿ ನಾಯಕನ ಇನ್ನಿಂಗ್ಸ್ ಆಡಿದ್ದ ರೋಹಿತ್ ಶರ್ಮಾ 83 ಎಸೆತಗಳಲ್ಲಿ 76 ರನ್ ಬಾರಿಸಿದ್ದರು. ಹಾಗೆಯೇ ಬೌಲಿಂಗ್‌ನಲ್ಲಿ ಕುಲ್ದೀಪ್ ಯಾದವ್ ಮತ್ತು ವರುಣ್ ಚಕ್ರವರ್ತಿ ತಲಾ 2 ವಿಕೆಟ್‌ಗಳನ್ನು ಪಡೆದು ತಂಡದ ಗೆಲುವಿನಲ್ಲಿ ಪ್ರಮುಖ ಪಾತ್ರವಹಿಸಿದ್ದರು.



## ದಾಖಲೆಯ 11ನೇ ಬಾರಿಗೆ ಪ್ಲೇ ಆಫ್ ಪ್ರವೇಶಿಸಿದ ಮುಂಬೈ

# ಬುಮ್ರಾ-ಸ್ಯಾಂಟ್ನರ್ ಬಿರುಗಾಳಿ ದಾಳಿಗೆ ಡೆಲ್ಲಿ ಉಡೀಸ್!

ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಮುಂಬೈ 180 ರನ್‌ಗಳಿಸಿತ್ತು. 181 ರನ್‌ಗಳ ಗುರಿ ಬೆನ್ನಟ್ಟಿದ ಡೆಲ್ಲಿ ಕ್ಯಾಪಿಟಲ್ಸ್ ಯಾವುದೇ ಪ್ರತಿರೋಧ ತೋರದೇ 59ರನ್‌ಗಳಿಂದ ಸೋಲೊಪ್ಪಿಕೊಂಡಿತು

ಪ್ಲೇ ಆಫ್ ನಿರ್ಧರಿಸುವ ವರ್ಚುವಲ್ ನಾಕೌಟ್ ಎಂದೇ ಬಿಂಬಿತವಾಗಿದ್ದ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಉತ್ತಮ ಆಲ್‌ರೌಂಡರ್ ಪ್ರದರ್ಶನ ತೋರಿ ಗೆಲುವು ಸಾಧಿಸಿದೆ. ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಮುಂಬೈ 180 ರನ್ ಗಳಿಸಿತ್ತು. 181 ರನ್‌ಗಳ ಗುರಿ ಬೆನ್ನಟ್ಟಿದ ಡೆಲ್ಲಿ ಕ್ಯಾಪಿಟಲ್ಸ್ ಯಾವುದೇ ಪ್ರತಿರೋಧ ತೋರದೇ 59ರನ್‌ಗಳಿಂದ ಸೋಲೊಪ್ಪಿಕೊಂಡಿತು. ಈ ಸೋಲಿನೊಂದಿಗೆ ಡೆಲ್ಲಿ ಕ್ಯಾಪಿಟಲ್ಸ್ ಟೂರ್ನಿಯಿಂದಲೇ ಹೊರಬಿದ್ದಿದೆ. ಇತ್ತ ಸುಲಭ ಜಯ ಸಾಧಿಸಿದೆ ಮುಂಬೈ ಇಂಡಿಯನ್ಸ್ 4ನೇ ತಂಡವಾಗಿ ಪ್ಲೇ ಆಫ್ ಪ್ರವೇಶಿಸಿತು. ಟಾಸ್ ಸೋತು ಬ್ಯಾಟಿಂಗ್ ಮಾಡಿದ 5 ಬಾರಿಯ ಚಾಂಪಿಯನ್ ತಂಡ 20 ಓವರ್‌ಗಳಲ್ಲಿ 5 ವಿಕೆಟ್ ಕಳೆದುಕೊಂಡು 180 ರನ್‌ಗಳಿಸಿತ್ತು. ಇನ್ನಿಂಗ್ಸ್ ಆರಂಭಿಸಿದ ಮುಂಬೈ ಇಂಡಿಯನ್ಸ್ 3ನೇ ಓವರ್‌ನಲ್ಲಿ ರೋಹಿತ್ ಶರ್ಮಾ ಮೊದಲ ಆಘಾತ ಅನುಭವಿಸಿತು.

ನಿರ್ಣಾಯಕ ಪಂದ್ಯದಲ್ಲಿ ಹಿಟ್‌ಮ್ಯಾನ್ 5 ಎಸೆತಗಳಲ್ಲಿ 5 ರನ್ ಗಳಿಸಿ ಮುಸ್ತಾಫಿಜುರ್ ರೆಹಮಾನ್ ಎಸೆದ ಮೂರನೇ ಓವರ್‌ನ ಎರಡನೇ ಎಸೆತದಲ್ಲಿ ಅಭಿಷೇಕ್ ಪೊರೆಲ್ ರೋಹಿತ್‌ಗೆ ಕ್ಯಾಚ್ ನೀಡಿದರು.

ಉತ್ತಮ ಫಾರ್ಮ್‌ನಲ್ಲಿದ್ದ ವಿಲ್ ಜ್ಯಾಕ್ಸ್‌ಗೆ ಇಂದು ದೊಡ್ಡ ಇನ್ನಿಂಗ್ಸ್ ಆಡಲು ವಿಫಲರಾದರು. ಅವರು 13 ಎಸೆತಗಳಲ್ಲಿ ಮೂರು ಬೌಂಡರಿ ಮತ್ತು ಒಂದು ಸಿಕ್ಸರ್ ಒಳಗೊಂಡ 21 ರನ್ ಗಳಿಸಿ ಆರನೇ ಓವರ್‌ನ ಮೂರನೇ ಎಸೆತದಲ್ಲಿ ಮುಖೇಶ್ ಕುಮಾರ್ ಎಸೆದ ಪಂದ್ಯದಲ್ಲಿ ನಿಗಮ್‌ಗೆ ಕ್ಯಾಚ್ ನೀಡಿ ಔಟ್ ಆದರು.

ರಯಾನ್ ರಿಕಲ್ಟನ್ ರೂಪದಲ್ಲಿ ಮುಂಬೈ ಮೂರನೇ ವಿಕೆಟ್ ಕಳೆದುಕೊಂಡಿತು. ಆರಂಭಿಕ ಆಟಗಾರನಾಗಿ ಬ್ಯಾಟಿಂಗ್ ಆರಂಭಿಸಿದ ಅವರು 18 ಎಸೆತಗಳಲ್ಲಿ ಎರಡು ಸಿಕ್ಸರ್‌ಗಳ ಸಹಾಯದಿಂದ 22 ರನ್ ಗಳಿಸಿದರು.

ಅವರು ಏಳನೇ ಓವರ್‌ನಲ್ಲಿ ಕುಲದೀಪ್ ಯಾದವ್ ಬೌಲಿಂಗ್‌ನಲ್ಲಿ ತಿವಾರಿಗೆ ಕ್ಯಾಚ್ ನೀಡಿ ಔಟ್ ಆದರು. 58ಕ್ಕೆ 3 ವಿಕೆಟ್ ಕಳೆದುಕೊಂಡಿದ್ದ ಸಂದರ್ಭದಲ್ಲಿ ಒಂದಾದ ತಿಲಕ್ ವರ್ಮಾ, ಸೂರ್ಯಕುಮಾರ್ ಯಾದವ್ ಜೊತೆ ಸೇರಿ 4ನೇ ವಿಕೆಟ್‌ಗೆ 49 ಎಸೆತಗಳಲ್ಲಿ 55 ರನ್‌ಗಳ ಜೊತೆಯಾಟ ನೀಡಿ ಚೇತರಿಕೆ ನೀಡಿದರು.

# ವೈಭವೋಪೇತ ದಾಖಲೆ ಬರೆದ ವೈಭವ್



ಇಂಡಿಯನ್ ಪ್ರೀಮಿಯರ್ ಲೀಗ್‌ನಲ್ಲಿ 14 ವರ್ಷದ ಯುವ ದಾಂಡಿಗ ವೈಭವ್ ಸೂರ್ಯವಂಶಿ ಹೊಸ ಇತಿಹಾಸ ನಿರ್ಮಿಸಿದ್ದಾರೆ. ಅದು ಕೂಡ ಈ ಬಾರಿಯ ಐಪಿಎಲ್‌ನಲ್ಲಿ ಶತಕ ಹಾಗೂ ಅರ್ಧಶತಕ ಬಾರಿಸುವ ಮೂಲಕ ಎಂಬುದು ವಿಶೇಷ. ಗುಜರಾತ್ ಟೈಟಾನ್ಸ್ ವಿರುದ್ಧದ ಪಂದ್ಯದಲ್ಲಿ ಕೇವಲ 35 ಎಸೆತಗಳಲ್ಲಿ ಶತಕ ಬಾರಿಸಿದ್ದ ವೈಭವ್, ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ ಅರ್ಧಶತಕ ಸಿಡಿಸಿ ಮಿಂಚಿದ್ದಾರೆ. ದೆಹಲಿಯ ಅರುಣ್ ಜೇಟ್ಲಿ ಸ್ಟೇಡಿಯಂನಲ್ಲಿ ನಡೆದ ಈ ಪಂದ್ಯದಲ್ಲಿ ಆರಂಭಿಕನಾಗಿ ಕಣಕ್ಕಿಳಿದ ವೈಭವ್ 33 ಎಸೆತಗಳಲ್ಲಿ 4 ಭರ್ಜರಿ ಸಿಕ್ಸ್ ಹಾಗೂ 4 ಫೋರ್‌ಗಳೊಂದಿಗೆ 57 ರನ್ ಬಾರಿಸಿದರು. ಈ ಮೂಲಕ ಈ ಬಾರಿಯ ಐಪಿಎಲ್‌ನಲ್ಲಿ 7 ಇನಿಂಗ್ಸ್‌ಗಳಿಂದ ಒಟ್ಟು 252 ರನ್ ಕಲೆಹಾಕಿದ್ದಾರೆ.

ಇದರೊಂದಿಗೆ ಐಪಿಎಲ್ ಇತಿಹಾಸದಲ್ಲಿ 18 ವರ್ಷಕ್ಕಿಂತ ಮುಂಚೆ 250 ರನ್ ಕಲೆಹಾಕಿದ ಮೊದಲ ಬ್ಯಾಟರ್ ಎನಿಸಿಕೊಂಡಿದ್ದಾರೆ. ಹಾಗೆಯೇ 18 ವರ್ಷ ತುಂಬುವ ಮುನ್ನ ಐಪಿಎಲ್‌ನಲ್ಲಿ ಶತಕ ಹಾಗೂ ಅರ್ಧಶತಕ ಸಿಡಿಸಿದ ಏಕೈಕ ಬ್ಯಾಟ್ಸ್‌ಮನ್ ಎಂಬ ಹೆಗ್ಗಳಿಕೆಗೂ ಪಾತ್ರರಾಗಿದ್ದಾರೆ. ಈ ಮೂಲಕ ಚೊಚ್ಚಲ ಐಪಿಎಲ್ ಟೂರ್ನಿಯಲ್ಲೇ ವೈಭವ್ ಸೂರ್ಯವಂಶಿ ಭರ್ಜರಿ ದಾಖಲೆಗಳನ್ನು ತಮ್ಮದಾಗಿಸಿಕೊಂಡಿದ್ದಾರೆ. ಇನ್ನು ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಸಿಎಸ್‌ಕೆ ತಂಡವು 20 ಓವರ್‌ಗಳಲ್ಲಿ 187 ರನ್ ಕಲೆಹಾಕಿದರೆ, ಈ ಗುರಿಯನ್ನು ಬೆನ್ನತ್ತಿದ ರಾಜಸ್ಥಾನ್ ರಾಯಲ್ಸ್ ಪರ ವೈಭವ್ ಸೂರ್ಯವಂಶಿ (57) ಆಕರ್ಷಕ ಅರ್ಧಶತಕ ಬಾರಿಸಿದರು. ಈ ಅರ್ಧಶತಕದ ನೆರವಿನೊಂದಿಗೆ ರಾಜಸ್ಥಾನ್ ರಾಯಲ್ಸ್ ತಂಡವು 17.1 ಓವರ್‌ಗಳಲ್ಲಿ 188 ರನ್ ಬಾರಿಸಿ 6 ವಿಕೆಟ್‌ಗಳ ಅಮೋಘ ಗೆಲುವು ದಾಖಲಿಸಿದೆ.



# ಹೊಸ ಪ್ರೇಯಸಿಗಾಗಿ ಐಷರಾಮಿ ಫ್ಲಾಟ್ ಖರೀದಿಸಿದ ಶಿಖರ್ ಧವನ್

## ಇದರ ಬೆಲೆ ಎಷ್ಟು ಕೋಟಿ ಗೊತ್ತಾ

ಕ್ರಿಕೆಟಿಗ ಶಿಖರ್ ಧವನ್ ತಮ್ಮ ಹೊಸ ಪ್ರೇಯಸಿ ಸೋಫಿ ಶೈನ್‌ಗಾಗಿ ಗುರುಗ್ರಾಮ್‌ನಲ್ಲಿ 69 ಕೋಟಿ ರೂಪಾಯಿ ಮೌಲ್ಯದ ಐಷಾರಾಮಿ ಅಪಾರ್ಟ್‌ಮೆಂಟ್ ಖರೀದಿಸಿದ್ದಾರೆ. 6040 ಚದರ ಅಡಿ ವಿಸ್ತೀರ್ಣದ ಈ ಅಪಾರ್ಟ್‌ಮೆಂಟ್ 'ದಿ ಡೇಲಿಯಾಸ್' ಎಂಬ ಸೂಪರ್-ಐಷಾರಾಮಿ ವಸತಿ ಯೋಜನೆಯಲ್ಲಿದೆ. ಸೋಫಿ ಶೈನ್ ಐರ್ಲೆಂಡ್ ಮೂಲದವರಾಗಿದ್ದು, ಈ ಜೋಡಿ 2025 ರ ಆರಂಭದಲ್ಲಿ ಡೇಟಿಂಗ್ ಮಾಡುತ್ತಿರುವುದಾಗಿ ಘೋಷಿಸಿತ್ತು. ಕಳೆದ ಕೆಲವು ತಿಂಗಳುಗಳಿಂದ ಟೀಂ ಇಂಡಿಯಾದ ಮಾಜಿ ಕ್ರಿಕೆಟಿಗ ಶಿಖರ್ ಧವನ್ ಅವರ ವೈಯಕ್ತಿಕ ಜೀವನದಲ್ಲಿ ಎರಡನೇ ಇನ್ನಿಂಗ್ಸ್ ಆರಂಭವಾಗಿದೆ. ಧವನ್, ಐರ್ಲೆಂಡ್ ಮೂಲದ ಸೋಫಿ ಶೈನ್ ಅವರೊಂದಿಗೆ ಪ್ರೀತಿಯಲ್ಲಿ ಬಿದ್ದಿರುವ ಬಗ್ಗೆ ಇತ್ತೀಚೆಗೆ ತಮ್ಮ ಇನ್ಸ್ಟಾಗ್ರಾಮ್ ಖಾತೆಯಲ್ಲಿ ಹೇಳಿಕೊಂಡಿದ್ದರು. ಅಲ್ಲದೆ ಸೋಫಿ, ಧವನ್ ಜೊತೆಗಿನ ಫೋಟೋವನ್ನು ಪೋಸ್ಟ್ ಮಾಡಿ ಧವನ್‌ರನ್ನು ತನ್ನ ಪ್ರೀತಿ ಎಂದು ಬರೆದುಕೊಂಡಿದ್ದರು. ಇದರೊಂದಿಗೆ ಸೋಫಿ, ಧವನ್ ಅವರ ಹೊಸ ಪ್ರೇಯಸಿ ಎಂಬುದು ದೃಢಪಟ್ಟಿತ್ತು. ಇದೀಗ ಹೊಸ ಪ್ರೇಯಸಿಗಾಗಿ ಧವನ್ ಕೋಟಿ ಮೌಲ್ಯದ ಐಷಾರಾಮಿ ಮನೆಯನ್ನು ಖರೀದಿಸಿದ್ದಾರೆ. ಮಾಧ್ಯಮ ವರದಿಗಳ ಪ್ರಕಾರ, ಧವನ್ ಗುರುಗ್ರಾಮ್‌ನ ಗಾಲ್ಫ್ ಕೋರ್ಸ್ ರಸ್ತೆಯಲ್ಲಿರುವ ಡಿಎಲ್‌ಎಫ್‌ನ ಸೂಪರ್-ಐಷಾರಾಮಿ ವಸತಿ ಯೋಜನೆ 'ದಿ ಡೇಲಿಯಾಸ್' ನಲ್ಲಿ ಅಪಾರ್ಟ್ಮೆಂಟ್ ಖರೀದಿಸಿದ್ದಾರೆ.

**ಅಪಾರ್ಟ್ಮೆಂಟ್ ಬೆಲೆ ಎಷ್ಟು:** ರಿಯಲ್ ಎಸ್ಟೇಟ್ ಡೇಟಾ ವಿಶ್ಲೇಷಣಾ ಸಂಸ್ಥೆ CRE ಮ್ಯಾಟ್ರಿಕ್ಸ್ ಪ್ರಕಾರ, ಈ ಅಪಾರ್ಟ್ಮೆಂಟ್ 6040 ಚದರ ಅಡಿ ವಿಸ್ತೀರ್ಣದಲ್ಲಿ ಹರಡಿಕೊಂಡಿದ್ದು, ಇದರ ಬೆಲೆ ಸುಮಾರು 65.61 ಕೋಟಿ ರೂ. ಎಂದು ಹೇಳಲಾಗುತ್ತಿದೆ. ಅಲ್ಲದೆ ಇದಕ್ಕೆ 3.28 ಕೋಟಿ ರೂ.ಗಳನ್ನು ಸ್ಟ್ಯಾಂಪ್ ಡ್ಯೂಟಿಯಾಗಿ ಪಾವತಿಸಲಾಗಿದೆ. ಇದರರ್ಥ ಧವನ್ ಈ ಅಪಾರ್ಟ್ಮೆಂಟ್ಗಾಗಿ ಸುಮಾರು 69 ಕೋಟಿ ರೂ.ಗಳನ್ನು ಪಾವತಿಸಿದ್ದಾರೆ. ಕಳೆದ ವರ್ಷ ಆಗಸ್ಟ್‌ನಲ್ಲಿ, ಡಿಎಲ್‌ಎಫ್ ಹರಿಯಾಣದ ಗುರುಗ್ರಾಮ್‌ನಲ್ಲಿರುವ ಡಿಎಲ್‌ಎಫ್ ಹಂತ 5 ರಲ್ಲಿ 17 ಎಕರೆ ವಿಸ್ತೀರ್ಣದ ಸೂಪರ್ ಐಷಾರಾಮಿ ವಸತಿ ಯೋಜನೆ 'ದಿ ಡೇಲಿಯಾಸ್' ಅನ್ನು ಪ್ರಾರಂಭಿಸಿತ್ತು.



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966